ಸಂಪುಟ: 04 ಸಂಚಿಕೆ: 250 ಪುಟಗಳು: 08 ಶನಿವಾರ 23 ನವೆಂಬರ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಶತಮೂರ್ಖ ಕೂಡ ತನ್ನ ಹೃದಯಕ್ಕೆ ಹತ್ತಿರವಾದ ಕೆಲಸವನ್ನು ಸಾಧಿಸಬಲ್ಲ. ಆದರೆ ಕೆಲಸವನ್ನು ತನ್ನ ಅಭಿರುಚಿಗೆ ತಕ್ಕಂತೆ ರೂಪಿಸುವವನು ಮಾತ್ರ ಬುದ್ಧಿವಂತ.

## ವಕ್ಫ್ ಮೂಲಕ ದೇಶವನ್ನೇ ಒಡೆಯುವ ಯತ್ನ, ದೊಡ್ಡ ಅಪಾಯ

• ಉದಯವಾಹಿನಿ, ಮಂಡ್ಯ

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿಯು ರಾಜ್ಯದ ಹಲವು ಭಾಗಗಳಲ್ಲಿ ಬೃಹತ್ ಪ್ರತಿಭಟನೆ ನಡೆಸುತ್ತಿದೆ. ವಕ್ಫ್ ಸಮಸ್ಯೆ ಪರಿಹಾರಕ್ಕೆ ಆಗ್ರಹಿಸಿ ಮಂಡ್ಯದಲ್ಲೂ ಬೃಹತ್ ಹೋರಾಟ ನಡೆಸಲಾಗಿದೆ. ಮಂಡ್ಯದ ವಿಶ್ವೇಶ್ವರಯ್ಯ ಪ್ರತಿಮೆ ಬಳಿ ಪ್ರತಿಭಟನೆ ನಡೆಯುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ರೈತರ ಜಮೀನನ್ನು ವಕ್ಫ್ ಕಬಳಿಕೆ ಮಾಡಿದೆ ಎಂದು ಆರೋಪಿಸಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಲಾಯಿತು. ಸಚಿವ ಜಮೀರ್ ರಾಜೀನಾಮೆ ಕೊಡಬೇಕು ಎಂದು ಆಗ್ರಹಿಸಿದರು. ಮಾಜಿ ಸಂಸದೆ ಸುಮಲತಾ ಅಂಬರೀಶ್ ಪ್ರತಿಭಟನೆಗೆ ಬೆಂಬಲ ವ್ಯಕ್ತಪಡಿಸಿದರು. ''ನಾವು ಯಾವ ಸಮುದಾಯದ ವಿರುದ್ಧವೂ ಅಲ್ಲ. ಆದರೆ, ಒಂದು ಸಮಾಜದ ಓಲೈಕೆಗಾಗಿ ಮತ್ತೊಂದು ಸಮಾಜವನ್ನು ತುಳಿಯುವುದು ತಪ್ಪು. ಅದಕ್ಕೆ ನಮ್ಮ ಖಂಡನೆ'' ಎಂದು ಸುಮಲತಾ ಹೇಳಿದರು.

## ನಬಾರ್ಡ್‌ನಿಂದ ಅನುದಾನ ಕಡಿತ ಬಿಜೆಪಿ ಯಾಕೆ ಮಾತನಾಡುತ್ತಿಲ್ಲ

• ಉದಯವಾಹಿನಿ, ಬೆಂಗಳೂರು

ನನಗೆ 35 ವರ್ಷದ ರಾಜಕೀಯ ಅನುಭವ ಇದೆ. ಈಗಿನ ರಾಜಕೀಯ ವ್ಯವಸ್ಥೆ ಕೆಟ್ಟಿದೆ. ಕೇಂದ್ರದ ಎನ್ ಡಿಎ ರೈತರ ಪರ ಅಂತ ಹೇಳುತ್ತಾರೆ. ರಾಜ್ಯದ ಅಭಿವೃದ್ಧಿ, ಜನಪರವಾದ ಕಾರ್ಯಕ್ರಮ ಮಾಡಿಲ್ಲ. ಅವರು ಐದು ಗ್ಯಾರಂಟಿಗೆ ಸರಿಸಮಾನವಾದ ಒಂದು ಕಾರ್ಯಕ್ರಮ ಕೊಟ್ಟರೇ ನಾವು ಒಪ್ಪುತ್ತೇವೆ. ಕೇಂದ್ರದಿಂದ ಅಕ್ಕಿ ಕೊಡದೇ ರಾಜಕಾರಣ ಮಾಡಿದರು. ನೂರು ವರ್ಷದ ನಂತರ ಬಂದಂತಹ ಬರಗಾಲಕ್ಕೆ ಪರಿಹಾರ ಕೊಡಲಿಲ್ಲ. ಬಿಜೆಪಿ ಜೆಡಿಎಸ್ ನ ಯಾವ ಸಂಸದರು ಕೂಡ ಹೋರಾಟ ಮಾಡಲಿಲ್ಲ. ಗ್ಯಾರಂಟಿ ಯೋಜನೆ ಬಗ್ಗೆ ಕೆಟ್ಟದಾಗಿ ಬಿಂಬಿಸಿದ್ರು. ಆದರೆ ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ನಿಂತಿಲ್ಲ ಎಂದು ಕೇಂದ್ರದ ವಿರುದ್ಧ ಸಚಿವ ಚಲುವರಾಯಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು. ರೈತರ ಪರ ಅನ್ನುವವರು ಯಾಕೆ ಮಾತನಾಡಲ್ಲ ನಬಾರ್ಡ್ ನಿಂದ ಇಷ್ಟು ಹಣ ಕಡಿಮೆ ಬಂದಿದೆ ಎಂದು ಕೇಳುತ್ತಿಲ್ಲ. ನಬಾರ್ಡ್ ನಿಂದ ಹೆಚ್ಚಿನ ಸಾಲ ಕೊಡಿಸುವಂತೆ ಹೇಳಿದ್ದೇವೆ. ಪರಿಪೂರ್ಣ ಕೊಡಿಸುತ್ತೇವೆ ಎಂದು ಹೇಳಿಲ್ಲ. ಇದು ಬಹಳ ಅನ್ಯಾಯ ಎಂದರು.

## ಕಾಂಗ್ರೆಸ್‌ನವರ ತಪ್ಪುಗಳು ನಮ್ಮ ಮೇಲೆ ತೂಗುಗತ್ತಿ!: ಶೋಭಾ

• ಉದಯವಾಹಿನಿ, ಬೆಂಗಳೂರು

ಲವ್ ಜಿಹಾದ್ ಜೊತೆಗೆ ಲ್ಯಾಂಡ್ ಜಿಹಾದ್ ಸೇರಿಕೊಂಡಿದೆ. ಇದು ಭೂಮಿ ಕಸಿಯುವ ಷಡ್ಯಂತ್ರವಾಗಿದೆ ಎಂದು ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಆರೋಪಿಸಿದರು. ಭಾರತದ ಸಂವಿಧಾನದದಲ್ಲಿ ವಕ್ಫ್ ಎಂಬ ಯೋಚನೆ ಇರಲಿಲ್ಲ. ಬಳಿಕ ದೇಶ ವಿಭಜನೆ ಆದಾಗ ಬಿಟ್ಟು ಹೋದವರ ಸಲುವಾಗಿ ವಕ್ಫ್ ಜಾರಿಗೆ ಬಂತು ಎಂದರು. 10,000 ಆಸ್ತಿ ಇತ್ತು 9.50 ಲಕ್ಷ ಆಸ್ತಿ 38 ಲಕ್ಷ ಎಕರೆ ವಕ್ಫ್ ಆಸ್ತಿಯಾಗಿದೆ. ಅಲ್ಲಾನ ಹೆಸರಿನಲ್ಲಿ ದಾನ ಕೊಟ್ಟರೆ ನಮ್ಮ ತಕರಾರು ಇಲ್ಲ ಎಂದು ವಾಗ್ದಾಳಿ ನಡೆಸಿದರು.ಸಚಿವ ಜಮೀರ್ ಖಾನ್ ಗೆ ಕಾನೂನು ಪ್ರಕಾರ ವಕ್ಫ್ ಅದಾಲತ್ ಮಾಡಲು ಅವಕಾಶ ಇಲ್ಲ. ಒತ್ತಡದ ಮೂಲಕ ಆಸ್ತಿಗೆ ನೋಟಿಸ್ ಕೊಡಲಾಗುತ್ತಿದೆ. ವಕ್ಫ್ ಟ್ರಿಬ್ಯೂನಲ್ ನಲ್ಲಿ ಯಾರಿಗೂ ನ್ಯಾಯ ಸಿಗುವುದಿಲ್ಲ. ಕೇವಲ ಒಂದು ಧರ್ಮ ಓಲೈಕೆಗಾಗಿ ವಕ್ಫ್ ಬಳಕೆ ಮಾಡಲಾಗಿದೆ ಎಂದು ಆರೋಪಿಸಿದರು.

## ಸಿದ್ದರಾಮಯ್ಯ ಸರ್ಕಾರದ ಸಚಿವರೊಬ್ಬರ ತಲೆದಂಡಕ್ಕೆ ಸಿದ್ಧತೆ!

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಸರ್ಕಾರದ ಸಚಿವರೊಬ್ಬರ ತಲೆದಂಡವಾಗುವ ಸಾಧ್ಯತೆಯಿದೆ. ಹೌದು. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ್ ರಾಜೀನಾಮೆ ಪಡೆಯಲು ಸಿದ್ಧತೆ ನಡೆಯುತ್ತಿದೆ ಎಂಬ ಚರ್ಚೆ ಕಾಂಗ್ರೆಸ್ ವಲಯದಲ್ಲೇ ಕೇಳಿ ಬಂದಿದೆ. ಅಬಕಾರಿ ಇಲಾಖೆಯಲ್ಲಿ 700 ಕೋಟಿ ರೂ. ಹಗರಣದ ಆರೋಪ ರಾಷ್ಟ್ರ ಮಟ್ಟದಲ್ಲಿ ಕಾಂಗ್ರೆಸ್‌ಗೆ ಮುಜುಗರ ಉಂಟು ಮಾಡಿತ್ತು. ಮಹಾರಾಷ್ಟ್ರ ಚುನಾವಣೆಯಲ್ಲೂ ಕಾಂಗ್ರೆಸ್ ಪಾಲಿಗೆ ಕಿರಿಕಿರಿಯಾಗಿತ್ತು. ರಾಜ್ಯಪಾಲರಿಗೆ ದೂರು ನೀಡಿ, ಬಂದ್‌ಗೂ ಬಾರ್ ಮಾಲೀಕರು ಮುಂದಾಗಿದ್ದರು. ಮಹಾರಾಷ್ಟ್ರ ಚುನಾವಣೆಯ ಸಮಯದಲ್ಲೂ ವಿಪಕ್ಷಗಳು ಈ ವಿಚಾರವನ್ನು ಪ್ರಸ್ತಾಪ ಮಾಡಿದ್ದು ಕಾಂಗ್ರೆಸ್‌ಗೆ ಇರುಸು ಮುರುಸು ತಂದಿತ್ತು. ಈ ವಿಚಾರದಿಂದ ಸಚಿವ ತಿಮ್ಮಾಪುರ್ ಮೇಲೆ ಹೈಕಮಾಂಡ್ ಭಾರೀ ಅಸಮಾಧಾನಗೊಂಡಿತ್ತು. ತಿಮ್ಮಾಪುರ್ ರಾಜೀನಾಮೆ ವಿಚಾರದಲ್ಲಿ ಸ್ಪಷ್ಟವಾದ ನಿರ್ಧಾರ ತೆಗೆದುಕೊಂಡು ಬನ್ನಿ ಎಐಸಿಸಿ ನಾಯಕರು ಸಿದ್ದರಾಮಯ್ಯಗೆ ಸೂಚಿಸಿದ್ದರು. ಎಐಸಿಸಿ ಪ್ರಮುಖ ನಾಯಕರ ಜೊತೆಗಿನ ಮಾತುಕತೆಯ ವೇಳೆ ಹೈಕಮಾಂಡ್ ನಿರ್ಧಾರಕ್ಕೆ ಬದ್ದ ಎಂಬ ಸಂದೇಶವನ್ನು ಸಿಎಂ ರವಾನೆ ಮಾಡಿದ್ದಾರೆ ಎನ್ನಲಾಗಿದೆ. ಹೀಗಾಗಿ ಎರಡು ಕರ್ನಾಟಕದ ಉಪಚುನಾವಣೆ ಮತ್ತು ಜಾರ್ಖಂಡ್, ಮಹಾರಾಷ್ಟ್ರ ಚುನಾವಣೆಯ ಬಳಿಕ ತಿಮ್ಮಾಪೂರ್ ವಿಚಾರದಲ್ಲಿ ಹೈಕಾಂಡ್ ಸ್ಪಷ್ಟವಾದ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಯಿದೆ.

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ವಕ್ಫ್ ಮಂಡಳಿಯಿಂದ ರೈತರು, ಹಿಂದೂ ಮಠ-ಮಂದಿರ ಭೂಮಿಯನ್ನು ವಕ್ಫ್ ಮಂಡಳಿಗೆ ಸೇರಿದ್ದು ಎಂದು ಆಸ್ತಿ ದಾಖಲೆಯಲ್ಲಿ ಹೆಸರು ಸೇರಿದ್ದನ್ನು ಗಂಭೀರವಾಗಿ ಪರಿಗಣಿಸಿ ಬಿಜೆಪಿಯಿಂದ ರಾಜ್ಯಾದ್ಯಂತ ತೀವ್ರ ಪ್ರತಿಭಟನೆ ನಡೆಸಲಾಯಿತು.

ಬೆಂಗಳೂರಿನಲ್ಲಿ ನಡೆದ ಬಿಜೆಪಿ ನಾಯಕರ ಪ್ರತಿಭಟನೆಯಲ್ಲಿ ವಕ್ಫ್ ಮಂಡಳಿಯನ್ನು ರದ್ದುಗೊಳಿಸಬೇಕು. ಜೊತೆಗೆ, ಈಗ ರೈತರ ಪಹಣಿಯಲ್ಲಿ ಸೇರ್ಪಡೆ ಮಾಡಲಾಗಿರುವ ವಕ್ಫ್ ಹೆಸರನ್ನು ತೆಗೆದು ಹಾಕಬೇಕು ಎಂದು ಪಟ್ಟು ಆಗ್ರಹಿಸಿದೆ.

ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಶುಕ್ರವಾರ ಬಿಜೆಪಿ ನಾಯಕರಿಂದ ನಡೆಸಲಾದ ಪ್ರತಿಭಟನೆಯಲ್ಲಿ ಮಾತನಾಡಿದ ವಿಪಕ್ಷ ನಾಯಕ ಆರ್ ಅಶೋಕ್ ಅವರು, ವಿಶ್ವವಿಖ್ಯಾತ ಎಂಜಿನಿಯರ್ ಸರ್ ಎಂ.ವಿಶ್ವೇಶ್ವರಯ್ಯನವರು ಓದಿದ ಶಾಲೆಯ ಆವರಣವನ್ನು ವಕ್ಫ್ ಮಂಡಳಿ ಕಬಳಿಸಿದೆ. ಕೇಂದ್ರದಲ್ಲಿದ್ದ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ವಕ್ಫ್ ಮಂಡಳಿಗೆ ನ್ಯಾಯಾಂಗದ ಅಧಿಕಾರ ನೀಡಿದೆ. ಇದನ್ನು ಬಳಸಿಕೊಂಡು ವಕ್ಫ್ ಮಂಡಳಿ ರೈತರ ಜಮೀನು ನುಂಗುತ್ತಿದೆ. ಕಾಂಗ್ರೆಸ್ ಅಧಿಕಾರ ಪಡೆಯುವ ರಾಜ್ಯಗಳಲ್ಲಿ ಮಿನಿ ಪಾಕಿಸ್ತಾನ ನಿರ್ಮಿಸುತ್ತಿದೆ.

ವಿಧಾನಸೌಧ, ಲಾಲ್‌ಬಾಗ್ ಕೂಡ ನಮ್ಮದು ಎಂದು ಇವರು ಹೇಳುತ್ತಾರೆ. ರಾಜ್ಯದಲ್ಲಿ ವಕ್ಫ್ ಮಂಡಳಿ ರದ್ದಾಗಬೇಕು, ರೈತರ ಜಮೀನಿನ ಪಹಣಿಯಲ್ಲಿ ಬರೆದ ವಕ್ಫ್ ಹೆಸರು ತೆಗೆಸಿಹಾಕಬೇಕು ಎಂದು ಆಗ್ರಹಿಸಿದರು. ಬೆಂಗಳೂರಿನಲ್ಲಿ ಬೌರಿಂಗ್ ಆಸ್ಪತ್ರೆ ಭೂಮಿ 2 ಎಕರೆ ಇದ್ದು, ಅದನ್ನು ಕೂಡ ವಕ್ಫ್ ಮಂಡಳಿ ಕಬಳಿಕೆ ಮಾಡಿತ್ತು. ನಾನು ಸಚಿವನಾಗಿದ್ದಾಗ ಅದರ ದಾಖಲೆಗಳನ್ನು ತರಿಸಿ ನೋಡಿದರೆ ಯಾವುದೋ ಹಳೆ ದಾಖಲೆಗಳನ್ನು ತಂದರು. ಬಳಿಕ ಹೋರಾಟ ಮಾಡಿ ಆಸ್ತಿ ಉಳಿಸಿದೆ. ವಕ್ಫ್ ಮಂಡಳಿ ತಿಮಿಂಗಿಲದಂತೆ ಬಡವರ ಜಮೀನು ನುಂಗುತ್ತಿದೆ. ರೈತರು ಕಂಗಾಲಾಗಿ ತಮ್ಮ ಆಸ್ತಿಗಳ ದಾಖಲೆ ಪರಿಶೀಲನೆ ಮಾಡುತ್ತಿದ್ದಾರೆ. ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಬಳಿಕ ಮುಸ್ಲಿಮರಿಗೆ ಎರಡು ಕೊಂಬು ಬಂದಿದೆ. ಸಿದ್ದರಾಮಯ್ಯ ಎಂದರೆ ಅಹಿಂದ ನಾಯಕ ಅಲ್ಲ. ಅವರೀಗ ಮುಸ್ಲಿಮರ ಚಾಂಪಿಯನ್ ಆಗಲು ಮುಂದಾಗಿದ್ದಾರೆ.

ರಾಜ್ಯದಲ್ಲಿ ಹಂತ ಹಂತವಾಗಿ ಲವ್ ಜಿಹಾದ್, ಲ್ಯಾಂಡ್ ಜಿಹಾದ್ ಬಳಿಕ ರೇಷನ್ ಕಾರ್ಡ್ ಜಿಹಾದ್ ಆರಂಭಿಸಿದ್ದಾರೆ. 45 ವರ್ಷದಿಂದ ರೇಷನ್ ಕಾರ್ಡ್ ಹೊಂದಿದ್ದ ವೃದ್ಧೆಯೊಬ್ಬರು ಈಗ ಕಾರ್ಡ್ ಕಳೆದುಕೊಂಡಿದ್ದಾರೆ. ಆದರೆ ಸರ್ಕಾರ ಮರಳಿ ಅರ್ಜಿ ಹಾಕಿ ಎನ್ನುತ್ತಿದೆ. ಸರ್ಕಾರ ತಪ್ಪು ಮಾಡಿದರೆ, ಜನರು ಲಂಚ ಕೊಟ್ಟು ರೇಷನ್ ಕಾರ್ಡ್ ಮಾಡಿಸಿಕೊಳ್ಳಬೇಕಿದೆ. ಜಯನಗರ ಸರ್ಕಾರಿ ಆಸ್ಪತ್ರೆಯಲ್ಲಿ ಔಷಧಿ ಇಲ್ಲ. ಅದಕ್ಕಾಗಿ ಪ್ರತಿಯೊಂದಕ್ಕೂ ಶುಲ್ಕ ಏರಿಕೆ ಮಾಡಲಾಗಿದೆ. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಸಿಎಂ ಸಿದ್ದರಾಮಯ್ಯ ತೆರಿಗೆ ವಿಧಿಸದ ವಸ್ತುಗಳೇ ಇಲ್ಲ.

ಹರಿಯುವ ನದಿಗೂ ತೆರಿಗೆ ವಿಧಿಸಿದ್ದಾರೆ. ಇನ್ನು ಗಾಳಿಗೂ ತೆರಿಗೆ ವಿಧಿಸಬಹುದು. ಸರ್ಕಾರ ಪಾಪರ್ ಆಗಿದೆ ಎಂಬುದಕ್ಕೆ ಇದಕ್ಕಿಂತ ದೊಡ್ಡ ಸಾಕ್ಷಿ ಬೇಡ. ಇನ್ನು ಸಿಎಂ ಸಿದ್ದರಾಮಯ್ಯ ಬಡವರ ಪರ ಎಂದು ಹೇಳಿಕೊಳ್ಳುತ್ತಾರೆ. ಹಾಲು ಹಾಗೂ ಆಲ್ಕೋಹಾಲ್ ದರ ಏರಿಕೆ, ಮುದ್ರಾಂಕ ಶುಲ್ಕ ಏರಿಕೆ, ಅನ್ನ ಪಡೆಯುವವರಿಗೆ ಕನ್ನ, ಔಷಧಿಗೆ ಕನ್ನ ಮೊದಲಾದ ಕ್ರಮಗಳ ಮೂಲಕ ಸಿಎಂ ಸಿದ್ದರಾಮಯ್ಯನವರು ಕನ್ನರಾಮಯ್ಯ ಎಂದು ಹೆಸರಾಗಿದ್ದಾರೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಲೇವಡಿ ಮಾಡಿದರು.


1 ವಕ್ಫ್ ತಿದ್ದುಪಡಿ ಮಸೂದೆ ಜಂಟಿ ಸಮಿತಿ; ಅಧಿಕಾರಾವಧಿ ವಿಸ್ತರಣೆಗೆ ವಿಪಕ್ಷ ಸದಸ್ಯರ ಒತ್ತಾಯ

2 ಪಹಣಿಯಲ್ಲಿ ಹೆಸರು ತೆಗೆಸಿಹಾಕಬೇಕು: ವಿಪಕ್ಷ ನಾಯಕ ಆರ್. ಅಶೋಕ್ ಆಗ್ರಹ

3 ಕರ್ನಾಟಕದಲ್ಲಿ ಲವ್ ಜಿಹಾದ್ ನಂತರ ಲ್ಯಾಂಡ್ ಜಿಹಾದನ್ನು ಜಾರಿಗೆ ತರಲಾಗಿದೆ: ಶೋಭಾ ಕರಂದ್ಲಾಜೆ

4 ವಕ್ಫ್ ಟ್ರಿಬ್ಯೂನಲ್ ನಲ್ಲಿ ಯಾರಿಗೂ ನ್ಯಾಯ ಸಿಗುವುದಿಲ್ಲ '

5 ಕೇವಲ ಒಂದು ಧರ್ಮ ಓಲೈಕೆಗಾಗಿ ವಕ್ಫ್ ಬಳಕೆ ಮಾಡಲಾಗಿದೆ'




# ವಕ್ಫ್ ಸುತ್ತ ವಿವಾದದ ಹುತ್ತ

ಮಂತ್ರಾಲಯ, ವಿಧಾನಸೌಧ, ವಿಶ್ವೇಶ್ವರಯ್ಯನವರ ಶಾಲೆ, ಬಡವರ ಭೂಮಿ ಉಳಿಯಲು ಸೂಪರ್

### ತಿದ್ದುಪಡಿ ಮಸೂದೆ ಬರಲಿದೆ

ಮ್ಯಾನ್ ಆಗಿ ಪ್ರಧಾನಿ ಮೋದಿ ಬರಲಿದ್ದಾರೆ. ಅವರು ತರಲಿರುವ ತಿದ್ದುಪಡಿ ಮಸೂದೆಯಿಂದ ಎಲ್ಲಾವೂ ನಿಯಂತ್ರಣಕ್ಕೆ ಬರಲಿದೆ. ಅಲ್ಲಿಯವರೆಗೆ ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾಗಿ ಇರುತ್ತಾರೋ ಇಲ್ಲವೋ ಗೊತ್ತಿಲ್ಲ ಎಂದು ಹೇಳಿದರು.

### ಸಚಿವ ಜಮೀರ್ ರಾಜೀನಾಮೆಗೆ ಬಿಗಿಪಟ್ಟು

ಇನ್ನು ಪ್ರತಿಭಟನೆಯಲ್ಲಿ ಕಾಂಗ್ರೆಸ್ ಸರ್ಕಾರ ಹಾಗೂ ಸಚಿವ ಜಮೀರ ವಿರುದ್ದ ಘೋಷಣೆ ಕೂಗಿ ಆಕ್ರೋಶ ಹೊರಹಾಕುತ್ತಿದ್ದಾರೆ. ಇದೇ ವೇಳೆ ಸಚಿವ ಜಮೀರ್ ರಾಜೀನಾಮೆಗೆ ಬಿಗಿಪಟ್ಟು ಹಿಡಿಯಲಾಗಿದೆ. ವಕ್ಫ್‌ನಿಂದ ತೊಂದರೆಗೀಡಾದ ರೈತರಿಂದ ದೂರು ಹಾಗೂ ಮಾಹಿತಿ ಸ್ವೀಕರಿಸಲಾಗುತ್ತಿದ್ದು, ಅಹವಾಲು ಸ್ವೀಕಾರಕ್ಕಾಗಿ ರೈತರು, ವಕೀಲರು ಮತ್ತು ಪ್ರಮುಖ ಪ್ರತಿನಿಧಿಗಳನ್ನೊಳಗೊಂಡ ಐವರು ಸದಸ್ಯರ ತಂಡವೊಂದನ್ನು ಎಲ್ಲಾ ಜಿಲ್ಲೆಗಳಲ್ಲಿ ಈಗಾಗಲೇ ರಚಿಸಲಾಗಿದೆ.

### ವಕ್ಫ್ ವಿವಾದ ಸಂಬಂಧ ಬಿಜೆಪಿ ಹೋರಾಟ

'ನಮ್ಮ ಭೂಮಿ, ನಮ್ಮ ಹಕ್ಕು' ಘೋಷಣೆಯಡಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸುವಂತೆ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರು ಕರೆ ನೀಡಿದ್ದರು. ಮೈಸೂರು, ವಿಜಯಪುರ, ಚಿಕ್ಕೋಡಿ, ಮಂಗಳೂರು, ದಾವಣಗೆರೆ, ರಾಮನಗರ, ರಾಯಚೂರು, ಬಾಗಲಕೋಟೆ, ಕೊಪ್ಪಳ, ಶಿವಮೊಗ್ಗ, ಬೆಳಗಾವಿ, ಕೋಲಾರ, ಗದಗ, ಚಿತ್ರದುರ್ಗ, ಮಂಡ್ಯ, ಹಾಸನ, ಚಾಮರಾಜನಗರ ಹಾಗೂ ಧಾರವಾಡ ಜಿಲ್ಲೆಗಳಾದ್ಯಂತ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಯಿತು.

## ● ವಕ್ಫ್ ವಿರುದ್ಧ ಬಿಜೆಪಿ ರಣಕಹಳೆ ● ಸರ್ಕಾರದ ವಿರುದ್ಧ ರಾಜ್ಯಾದ್ಯಂತ ಹೋರಾಟ; ● ಸಚಿವ ಜಮೀರ್ ರಾಜೀನಾಮೆಗೆ ಬಿಗಿಪಟ್ಟು



### ರಾಜ್ಯದ ವಿವಿಧೆಡೆ ಹೋರಾಟ

ಮೈಸೂರಲ್ಲಿ ಸಂಸದ ಯದುವೀರ್ ಒಡೆಯರ್ ನೇತೃತ್ವದಲ್ಲಿ ಪ್ರೊಟೆಸ್ಟ್ ನಡೆಯುತ್ತಿದೆ. ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆ ವರೆಗೆ ಬೃಹತ್ ಪ್ರತಿಭಟನೆ ನಡೆಯಲಿದೆ. ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಸಂಸದ ಪ್ರತಾಪಸಿಂಹ ಸೇರಿ ಹಲವು ಮುಖಂಡರು ಭಾಗಿಯಾಗಿದ್ದಾರೆ. ಚಿಕ್ಕೋಡಿಯ ಎ.ಸಿ ಕಛೇರಿ ಎದುರು ಪ್ರತಿಭಟನೆ ಹಮ್ಮಿಕೊಂಡಿದ್ದು, ಸಂಪಾದನಾ ಚರಮೂರ್ತಿ ಮಠದ ಶ್ರೀಗಳ ನೇತೃತ್ವದಲ್ಲಿ ಕಾಂಗ್ರೆಸ್ ವಿರುದ್ದ ಹೋರಾಟ ನಡೆಯುತ್ತಿದೆ. ಪ್ರತಿಭಟನೆಯಲ್ಲಿ ನಿಪ್ಪಾಣಿ ಶಾಸಕಿ ಮಾಜಿ ಸಚಿವೆ ಶಶಿಕಲಾ ಜೋಲ್ಲೆ ಹಾಗೂ ಸ್ಥಳೀಯ ನಾಯಕರು ಭಾಗಿಯಾಗಲಿದ್ದು, ಪಟ್ಟಣದ ಎ.ಸಿ ಕಛೇರಿ ಎದುರು ಪ್ರತಿಭಟನೆ ನಡೆಯುತ್ತಿದೆ. ಕಾಂಗ್ರೆಸ್ ಸರ್ಕಾರ ಹಾಗೂ ಸಚಿವ ಜಮೀರ ವಿರುದ್ದ ಘೋಷಣೆ ಕೂಗಿ ಆಕ್ರೋಶ ಹೊರಹಾಕುತ್ತಿದ್ದಾರೆ.

### ಸಿಎಂ ಹಾಗೂ ಜಮೀರ್ ವಿರುದ್ಧ ಆಕ್ರೋಶ ವ್ಯಕ್ತ

ಮಂಗಳೂರಿನಲ್ಲಿ ವಕ್ಫ್ ಅಕ್ರಮದ ವಿರುದ್ಧ ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ಪ್ರತಿಭಟನೆ ನಡೆಸುತ್ತಿದೆ. ನಗರದ ಟೌನ್ ಹಾಲ್ ಮುಂಭಾಗ ಗಾಂಧಿ ಪ್ರತಿಮೆ ಎದುರು ಹೋರಾಟ ನಡೆಸಲಾಗುತ್ತಿದೆ. ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಸ್ಥಳೀಯ ಮುಖಂಡರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ. ಈ ವೇಳೆ ರಾಜ್ಯ ಸರಕಾರದ ವಿರುದ್ದ ವಾಗ್ದಾಳಿ ನಡೆಸಿದ ಬಿಜೆಪಿ ನಾಯಕರು, ರಾಜ್ಯದಲ್ಲಿರುವುದು ಟಿಪ್ಪು ಮಾದರಿಯ ಆಡಳಿತ ಕಾಂಗ್ರೆಸ್ ನಡಸುತ್ತಿದೆ. ಸಿದ್ದರಾಮಯ್ಯ ನಡೆಸಿತ್ತಿರುವುದು ಮೊಗಲ್ ಹಾಗು ಟಿಪ್ಪು ಮಾದರಿಯ ಆಡಳಿತ. ಸಿದ್ದರಾಮಯ್ಯ ಮತ್ತು ಜಮೀರ್ ವಕ್ಪ್ ಮುಖಾಂತರ ಜನರ ಆಸ್ತಿ ಕಬಳಿಕೆ ಮಾಡುತ್ತಿದ್ದಾರೆ. ಭೂ ಕಬಳಿಕೆಗೆ ಸಿದ್ದರಾಮಯ್ಯ ಮತ್ತು ಜಮೀರ್ ಅವರ ಜೊಯಿಂಟ್ ವೆಂಚರ್ ನಡೆಯುತ್ತಿದೆ. ರಾಜ್ಯದಲ್ಲಿ ವಕ್ಫ ಮೂಲಕ ಲ್ಯಾಂಡ್ ಜಿಹಾದ್ ನಡೆಸಲಾಗುತ್ತಿದೆ ಎಂದು ಬಿಜೆಪಿ ಮುಖಂಡರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.


## ಅಧಿಕಾರ ಕೊಟ್ಟು ಶಿಕ್ಷೆ ಅನುಭವಿಸುತ್ತಿರುವ ರಾಜ್ಯದ ಜನ

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕರ್ನಾಟಕವು ಬೆಲೆ ಏರಿಕೆಯ ರಾಜ್ಯವಾಗಿ ಮಾರ್ಪಟ್ಟಿದೆ ಎಂದು ಜೆಡಿಎಸ್ ಟೀಕಿಸಿದೆ.

ಈ ಸಂಬಂಧ ಎಕ್ಸ್ ನಲ್ಲಿ ಸರಣಿ ಪೋಸ್ಟ್ ಮಾಡಿರುವ ಜೆಡಿಎಸ್, ಹಾಲಿನಿಂದ ಇಂಧನದವರೆಗೆ, ವಿದ್ಯುತ್‌ನಿಂದ ಸಾರಿಗೆವರೆಗೆ, ಆರೋಗ್ಯ ಸೇರಿದಂತೆ ಪ್ರತಿಯೊಂದು ದಿನಬಳಕೆಯ ಅಗತ್ಯ ವಸ್ತುಗಳು ಮತ್ತು ಸೇವೆಗಳು ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ದುಪ್ಪಟ್ಟು, ದುಬಾರಿಯಾಗಿವೆ ಎಂದು ಆರೋಪಿಸಿದೆ.ಭ್ರಷ್ಟ ಕಾಂಗ್ರೆಸ್ ದುರಾಡಳಿತದಲ್ಲಿ ಬೆಲೆ ಏರಿಕೆ ದುಪ್ಪಟ್ಟು, ದುಬಾರಿಯಾಗಿದೆ. ಕಾಂಗ್ರೆಸ್‌ಗೆ ಅಧಿಕಾರ ಕೊಟ್ಟಿದ್ದಕ್ಕೆ ಕರ್ನಾಟಕದ ಜನರಿಗೆ ಏಕೆ ಬೆಲೆ ಏರಿಕೆ ಶಿಕ್ಷೆ ಸಿದ್ದರಾಮಯ್ಯ ಅವರೇ ಇದೇನಾ, ನೀವು ಜನರಿಗೆ ಭರವಸೆ ನೀಡಿದ ಗ್ಯಾರಂಟಿ ಎಂದು ಟೀಕಿಸಿದೆ.ರಾಜ್ಯ ಕಾಂಗ್ರೆಸ್ ಸರ್ಕಾರ ಜನರ ಜೇಬಿಗೆ ಹೇಗೆಲ್ಲಾ ಕತ್ತರಿ ಹಾಕುತ್ತಿದೆ, ಪಿಕ್ ಪಾಕೆಟ್ ಮಾಡುತ್ತಿದೆ ಎನ್ನುವುದಕ್ಕೆ ಸಾಕ್ಷಿಗಳು ಕಣ್ಣ ಮುಂದಿವೆ ಎಂದಿರುವ ಜೆಡಿಎಸ್, ಪೆಟ್ರೋಲ್, ಡಿಸೆಲ್ ಬೆಲೆ ಲೀಟರ್‌ಗೆ 3 ರೂ. ಜೂನ್ 8ರಿಂದ ಏರಿಕೆಯಾಗಿದೆ.

ನಂದಿನಿ ಹಾಲು ಲೀಟರ್‌ಗೆ 2 ರೂ. ಜೂನ್ 26ರಿಂದ ಹೆಚ್ಚಳ, ಒಂದು ಯೂನಿಟ್ ವಿದ್ಯುತ್ ಗೆ ಜೂನ್ ನಿಂದ 2.89 ರೂ. ಏರಿಕೆ, ಶೇ. 20ರಷ್ಟು ಅಬಕಾರಿ ಸುಂಕ ಹೆಚ್ಚಳ, ಸಾರಿಗೆ ಸೆಸ್,ವಾಣಿಜ್ಯ ವಾಹನಗಳ ಮೇಲೆ ಶೇ. 3 ರಷ್ಟು ಏರಿಕೆ ಹಾಗೂ ಮುದ್ರಾಂಕ ಶುಲ್ಕವನ್ನು ಶೇ. 200-300ರಷ್ಟು ಹೆಚ್ಚಳ ಮಾಡಲಾಗಿದೆ ಎಂದು ಬೆಲೆ ಏರಿಕೆ ಪಟ್ಟಿ ಮಾಡಿ ಆರೋಪಿಸಿದೆ. ವೋಟಿಗಾಗಿ ಉಚಿತ, ಚುನಾವಣೆ ಬಳಿಕ ದರ ಏರಿಕೆ ಖಚಿತ ಎಂದು ವ್ಯಂಗ್ಯವಾಡಿದೆ. ಸರ್ಕಾರಿ ಆಸ್ಪತ್ರೆ ಸೇವೆಗಳ ದರ ಹೆಚ್ಚಳ ಯಾವ ಮಾದರಿ ಸರ್ಕಾರಿ ಆಸ್ಪತ್ರೆಗಳು ಜನಸಾಮಾನ್ಯರಿಗೆ ಕೊನೆಯ ಆಶಾಕಿರಣವಾಗಿದ್ದವು. ಆದರೆ ಕಾಂಗ್ರೆಸ್ ಆಡಳಿತದಲ್ಲಿ ಬಡವರಿಗೆ ದುಬಾರಿಯಾಗುತ್ತಿವೆ. ಈಗ ಸರ್ಕಾರಿ ಆಸ್ಪತ್ರೆಯಲ್ಲಿ 30 ರೂ. ಇದ್ದ ಒಳರೋಗಿ ಹಾಸಿಗೆ ಈಗ 50 ರೂ., 750 ರೂ. ಯಾರ ಅಭಿವೃದ್ಧಿಗಾಗಿ ಈ ದರ ಏರಿಕೆ ಇದು ನಿಮ್ಮ ಜನತಾ ಸ್ನೇಹಿ ಆಡಳಿತವೇ, ವಿಕ್ಟೋರಿಯಾ, ಮಿಂಟೋ ಸೇರಿದಂತೆ ಇನ್ನಿತರ ಆಸ್ಪತ್ರೆಗಳಲ್ಲಿ ಶೇ. 20ರಷ್ಟು ದರ ಏರಿಕೆ. ಸ್ಪೆಷಲ್ ವಾರ್ಡ್ ದರ 750 ರೂ.ನಿಂದ 1000 ರೂ.ಗೆ ಏರಿಕೆಯಾಗಿದ್ದು, ಒಪಿಡಿ ಶುಲ್ಕ ದ್ವಿಗುಣವಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಇನ್ಮುಂದೆ ಬಡವರಿಗೆ ಆರೋಗ್ಯಕ್ಕೂ ಸಾಲದ ಅಗತ್ಯವಿದೆ ಎಂದು ವಾಗ್ದಾಳಿ ಮಾಡಿರುವ ಜೆಡಿಎಸ್, ಆರೋಗ್ಯ ಸೇವೆ ದುಬಾರಿ, ಬೆಲೆ ಏರಿಕೆ ಬರೆ, ಕಾಂಗ್ರೆಸ್ ಹಗಲು ದರೋಡೆ ಮೊದಲಾದ ಹ್ಯಾಶ್ ಟ್ಯಾಗ್ ಮಾಡಿದೆ.



### ಹೆಚ್.ಡಿ ಕುಮಾರಸ್ವಾಮಿಗೆ ತಾತ್ಕಾಲಿಕ ರಿಲೀಫ್

## ಬೆದರಿಕೆ ಕೇಸ್ ವಿಚಾರಣೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು



ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿಗೆ ಸದ್ಯಕ್ಕೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ. ಉದ್ಯಮಿ ವಿಜಯ್ ಟಾಟಾಗೆ 50 ಕೋಟಿ ರೂಪಾಯಿ ನೀಡುವಂತೆ ಬೆದರಿಕೆ ಹಾಕಿದ್ದಾರೆ ಎನ್ನಲಾದಂತ ಆರೋಪದಡಿ ದಾಖಲಾಗಿದ್ದಂತ ಎಫ್‌ಐಆರ್ ರದ್ದು ಕೋರಿ ಸಲ್ಲಿಸಿದ್ದಂತ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಡಿ.12ಕ್ಕೆ ಮುಂದೂಡಿಕೆ ಮಾಡಿದೆ. ಹೈಕೋರ್ಟ್ ನ ನ್ಯಾಯಮೂರ್ತಿ ಎಂ.ನಾಗಪಸನ್ನ ಅವರನ್ನೊಳಗೊಂಡಂತ ಏಕಸದಸ್ಯ ಪೀಠದಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ತಮ್ಮ ವಿರುದ್ಧ ಬೆದರಿಕೆ ಪ್ರಕರಣದಲ್ಲಿ ದಾಖಲಾಗಿದ್ದಂತ ಎಫ್‌ಐಆರ್ ರದ್ದು ಕೋರಿ ಸಲ್ಲಿಸಲಾಗಿದ್ದಂತ ಅರ್ಜಿಯ ವಿಚಾರಣೆ ನಡೆಸಲಾಯಿತು. ಈ ಸಂದರ್ಭದಲ್ಲಿ ಹಿಂದೆ ಪ್ರಕರಣಕ್ಕೆ ನೀಡಿದಂತ ಮಧ್ಯಂತರ ಆದೇಶವನ್ನು ವಿಸ್ತರಿಸಿ ಆದೇಶಿ, ವಿಚಾರಣೆ ಮುಂದೂಡಿತು. ಹೀಗಾಗಿ ಹೆಚ್.ಡಿ ಕುಮಾರಸ್ವಾಮಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತೆ ಆಗಿದೆ. ಅಂದಹಾಗೆ ಉದ್ಯಮಿ ವಿಜಯ್ ಟಾಟಾ ಅವರು ನೀಡಿದಂತ ದೂರು ಆಧರಿಸಿ ಬೆಂಗಳೂರಿನ ಅಮೃತಹಳ್ಳಿ ಪೊಲೀಸ್ ಠಾಣೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ವಿಧಾನ ಪರಿಷತ್ ಮಾಜಿ ಸದಸ್ಯ ಹೆಚ್ ಎಂ ರಮೇಶ್ ಗೌಡ ವಿರುದ್ಧ ಬೆದರಿಕೆ ಆರೋಪದಡಿ ಎಫ್‌ಐಆರ್ ದಾಖಲಾಗಿತ್ತು.

# ಯತ್ನಾಳ್ ತಂಡಕ್ಕೆ ಕಡಿವಾಣ: ವಿಜಯೇಂದ್ರ ಬಿಗಿ ಪಟ್ಟು

■ ಸುಮಾರು 17ಕ್ಕೂ ಹೆಚ್ಚು ಬಿಜೆಪಿ ಮಾಜಿ ಶಾಸಕರು ಸಭೆ ಸೇರಿ ಈ ನಿರ್ಣಯ ■ ಜನ ಜಾಗೃತಿ ಅಭಿಯಾನಕ್ಕೆ ಬಿಜೆಪಿ ಹೈಕಮಾಂಡ್ ತತ್‌ಕ್ಷಣ ಕಡಿವಾಣ ಹಾಕಬೇಕೆಂದು ಪಟ್ಟು

• ಉದಯವಾಹಿನಿ, ಬೆಂಗಳೂರು

ವಕ್ಫ್ ಬೋರ್ಡ್ ವಿರುದ್ಧ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣ ನಡೆಸಲು ಉದ್ದೇಶಿಸಿರುವ ಜನ ಜಾಗೃತಿ ಅಭಿಯಾನಕ್ಕೆ ಬಿಜೆಪಿ ಹೈಕಮಾಂಡ್ ತತ್‌ಕ್ಷಣ ಕಡಿವಾಣ ಹಾಕಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬಣ ಪಟ್ಟು ಹಿಡಿದಿದೆ. ಮಾಜಿ ಸಚಿವ ಕಟ್ಟಾ ಸುಬ್ರಹ್ಮಣ್ಯ ನಾಯ್ಡು ನಿವಾಸದಲ್ಲಿ ಸುಮಾರು 17ಕ್ಕೂ ಹೆಚ್ಚು ಬಿಜೆಪಿ ಮಾಜಿ ಶಾಸಕರು ಸಭೆ ಸೇರಿ ಈ ನಿರ್ಣಯ ತೆಗೆದು ಕೊಂಡಿದ್ದಾರೆ.

ವಿಜಯೇಂದ್ರ ಅವರ ಸಾರಥ್ಯದಲ್ಲಿ ನಡೆಸಲು ಉದ್ದೇಶಿಸಿರುವ ''ನಮ್ಮ ಭೂಮಿ ನಮ್ಮ ಹಕ್ಕು' ಹೋರಾಟದಲ್ಲಿ ಎಲ್ಲಾರೂ ಭಾಗಿಯಾಗಬೇಕು. ಪ್ರತ್ಯೇಕ ಅಭಿಯಾನ ನಡೆಸದಂತೆ ಸೂಚಿಸಬೇಕು ಎಂದು ಮನವಿ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ. ಭಿನ್ನಮತೀಯ ನಾಯಕರಿಗೆ ತತ್‌ಕ್ಷಣ ವರಿಷ್ಠರು ಈ ಸೂಚನೆ ನೀಡಬೇಕು. ಅಗತ್ಯಬಿದ್ದರೆ ದಿಲ್ಲಿ ನಾಯಕರ ಭೇಟಿಗೆ ಸಮಯ ಕೋರೋಣ ಎಂದು ನಿರ್ಣಯ ತೆಗೆದುಕೊಳ್ಳಲಾಗಿದೆ.



**ಪ್ರತ್ಯೇಕ ಅಭಿಯಾನ ನಡೆಸದಂತೆ ಮನವಿ**

ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಮಾಜಿ ಸಚಿವ ಬಿ.ಸಿ. ಪಾಟೀಲ್, ಮಾಜಿ ಶಾಸಕರಾದ ರೂಪಾಲಿ ನಾಯಕ, ಸುನೀಲ್ ನಾಯ್ಕ, ಸುನೀಲ್ ಹೆಗಡೆ, ವೈ.ಸಂಪಂಗಿ, ಎಸ್. ಕೆ.ಬೆಳ್ಳುಬ್ಬಿ, ರಾಮಚಂದ್ರಪ್ಪ, ಮಾಡಾಳ್ ವಿರೂಪಾಕ್ಷಪ್ಪ, ವೆಂಕಟ ಮುನಿಯಪ್ಪ, ನಾಗೇಂದ್ರ, ನಿರಂಜನ್‌ಕುಮಾರ್ ಸೇರಿದಂತೆ ಹಲವರು ಈ ಸಭೆಯಲ್ಲಿ ಹಾಜರಿದ್ದರು. ಸುಮಾರು 3 ಗಂಟೆಗೂ ಹೆಚ್ಚು ಕಾಲ ಸಭೆ ನಡೆಸಿದ ಮಾಜಿ ಶಾಸಕರು, ವಿಜಯೇಂದ್ರ ನೇತೃತ್ವದಲ್ಲೇ ಅಭಿಯಾನ ನಡೆಯಬೇಕು.

ಯಾವುದೇ ಕಾರಣಕ್ಕೂ ಯತ್ನಾಳ್ ಸಾರಥ್ಯಕ್ಕೆ ಅವಕಾಶ ನೀಡಬಾರದು. ಈ ಬಗ್ಗೆ ಕಾರ್ಯಕರ್ತರಿಗೆ ಮನವರಿಕೆ ಮಾಡಿ ಕೊಡಬೇಕು ಎಂಬ ತೀರ್ಮಾನವನ್ನು ತೆಗೆದುಕೊಂಡಿದ್ದಾರೆ.

### ಯಾವುದೇ ಕಾರಣಕ್ಕೂ ನಾಲ್ಕನೇ ತಂಡಕ್ಕೆ ಅವಕಾಶ ಕೊಡಬಾರದು.

ಮಧ್ಯ ಕರ್ನಾಟಕದ ಕೆಲವು ಜಿಲ್ಲೆಗಳಿಗೆ ಭೇಟಿ ನೀಡಿ ಸರಕಾರದ ಜನ ವಿರೋಧಿ ನೀತಿಯ ವಿರುದ್ಧ ಹೋರಾಟದ ಬಗ್ಗೆಯೂ ಚರ್ಚೆ ನಡೆದಿದೆ. ವಿಜಯೇಂದ್ರ ಅವರು ವಕ್ಫ್ ವಿರುದ್ಧ ಹೋರಾಟ ನಡೆಸಲು ತಂಡ ರಚಿಸುತ್ತಾರೆ ಎಂಬ ಸುದ್ದಿಯನ್ನು ಗ್ರಹಿಸಿದವರು, ಅದಕ್ಕೆ ಪರ್ಯಾಯವಾಗಿ ಅಭಿಯಾನ ನಡೆಸಲು ಮುಂದಾಗಿದ್ದಾರೆ. ವಾಸ್ತವವಾಗಿ ಇದನ್ನು ಹೈಜಾಕ್ ಮಾಡಿದವರೇ ಯತ್ನಾಳ್ ಮತ್ತು ಅವರ ತಂಡ ಎಂದು ಸಭೆಯ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಕಿಡಿಕಾರಿದರು. ಮೊದಲ ಹಂತದಲ್ಲಿ 15 ಜನ ಸೇರಿದ್ದೇವೆ. ಬಿಜೆಪಿ ಬಲಿಷ್ಠವಾಗಿದೆ. ಈಗಾಗಲೇ 3 ತಂಡದಿಂದ ಪ್ರವಾಸ ನಡೆಯಲಿದೆ. ಯಾವುದೇ ಕಾರಣಕ್ಕೂ ನಾಲ್ಕನೇ ತಂಡಕ್ಕೆ ಅವಕಾಶ ಕೊಡಬಾರದು. ನಾವೆಲ್ಲರೂ ರಾಜ್ಯಾಧ್ಯಕ್ಷರ ಬೆಂಬಲಕ್ಕೆ ನಿಂತು ಕೆಲಸ ಮಾಡುತ್ತೇವೆ. ಈಗಾಗಲೇ 3 ತಂಡ ರಚನೆ ಮಾಡಲಾಗಿದೆ. ವಕ್ಫ್ ವಿಚಾರದಲ್ಲಿ ಸರಕಾರದ ವಿರುದ್ಧ ಹೋರಾಟ ಮಾಡುತ್ತೇವೆ. ಪಕ್ಷದ ಜತೆಗೆ ನಾವು ಇದ್ದೇವೆ ಎಂದು ರೇಣುಕಾಚಾರ್ಯ ಹೇಳಿದರು.

**ಶಿಸ್ತು ಕ್ರಮಕ್ಕೆ ತೀರ್ಮಾನ**

ಅಗತ್ಯಬಿದ್ದರೆ ದಿಲ್ಲಿಗೆ ತೆರಳಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ರಾಷ್ಟ್ರೀಯ ಸಂಘಟನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಸೇರಿದಂತೆ ಹಲವು ನಾಯಕರನ್ನು ಭೇಟಿ ಮಾಡಿ ವಸ್ತು ಸ್ಥಿತಿ ಮನವರಿಕೆ ಮಾಡಿ ಕೊಡಬೇಕೆಂಬ ಒತ್ತಾಯ ವ್ಯಕ್ತವಾಗಿದೆ. ಯಡಿಯೂರಪ್ಪ ಹಾಗೂ ವಿಜಯೇಂದ್ರ ನಾಯಕತ್ವದ ವಿರುದ್ಧ ಅಪಸ್ವರ ಎತ್ತುತ್ತಿರುವವರ ವಿರುದ್ಧ ಶಿಸ್ತು ಕ್ರಮ ಜರಗಿಸಬೇಕು ಎಂಬ ನಿರ್ಣಯಕ್ಕೆ ಬರಲಾಗಿದೆ. ಯಡಿಯೂರಪ್ಪ ಪಕ್ಷ ಕಟ್ಟುವಾಗ ಕೆಲವರು ಇನ್ನೂ ರಾಜಕೀಯಕ್ಕೆ ಬಂದಿರಲಿಲ್ಲ. ದಕ್ಷಿಣ ಭಾರತದಲ್ಲಿ ಮೊದಲ ಬಾರಿಗೆ ಕರ್ನಾಟಕದಲ್ಲಿ ಬಿಜೆಪಿಯನ್ನು ಅಧಿಕಾರಕ್ಕೆ ತಂದವರು ಯಡಿಯೂರಪ್ಪ. ಅಂತಹವರ ಬಗ್ಗೆ ಲಘುವಾಗಿ ಮಾತನಾಡುವವರ ಬಾಯಿಗೆ ಬೀಗ ಹಾಕಬೇಕು. ವಿಜಯೇಂದ್ರ ಅಧ್ಯಕ್ಷರಾದ ಬಳಿಕ ಸಂಘಟನೆ ಬಲಿಷ್ಠವಾಗುತ್ತಿದೆ. ಈಗ ಅವರ ಬಗ್ಗೆಯೇ ಹಗುರವಾಗಿ ಕೆಲವರು ಮಾತನಾಡುತ್ತಾರೆ ಎಂದು ಸಭೆಯಲ್ಲಿ ಅಸಮಾಧಾನ ವ್ಯಕ್ತವಾಯಿತು.

**ಕೋಲಾರದಿಂದ ರಾಜ್ಯ ಪ್ರವಾಸ**

ನ. 29ರಂದು ಕೋಲಾರ ಜಿಲ್ಲೆ ಶ್ರೀನಿವಾಸಪುರ ತಾಲ್ಲೂಕಿನ ಕುರುಡುಮಲೆಯಲ್ಲಿರುವ ಗಣಪತಿ ದೇವಸ್ಥಾನಕ್ಕೆ ಭೇಟಿ ನೀಡಿ ಅಲ್ಲಿಂದಲೇ ರಾಜ್ಯ ಪ್ರವಾಸ ಆರಂಭಿಸಲು ಸಭೆ ತೀರ್ಮಾನ ತೆಗೆದು ಕೊಂಡಿದೆ. ಅನಂತರ ಡಿ. 1ರಂದು ಮೈಸೂರಿನಲ್ಲಿರುವ ನಾಡದೇವತೆ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ಬಳಿಕ ಗೋಕರ್ಣಕ್ಕೆ ತೆರಳಲು ಸಭೆ ನಿರ್ಧರಿಸಿದೆ.

**ಈ ದಿನದ ದರ**

| | |
|---|---|
| ಪೆಟ್ರೋಲ್: | 103.44 ₹/L |
| ಡೀಸೆಲ್ : | 89.97 ₹/L |
| ಬಂಗಾರ: | ₹7,882/Gram24ct ₹7,225/Gram22ct |
| ಬೆಳ್ಳಿ: | ₹92.00/Gram |



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಇದಂ ಸ್ವಸ್ತ್ಯಯನಂ ಶ್ರೇಷ್ಠಮ್

ಮನುಸ್ಮೃತಿಯ ಪ್ರಥಮಾಧ್ಯಾಯದ ಶ್ಲೋಕ. ಈ ಧರ್ಮಶಾಸ್ತ್ರ, ಅಧ್ಯಾತ್ಮ ವಿದ್ಯೆ ಒಳ್ಳೆಯದು ಉತ್ತಮ ಕಣ್ಣು. ಬುದ್ಧಿ ವಿಕಾಸಗೊಳಿಸುವುದು, ಆಯುಷ್ಯ ಕೀರ್ತಿ ಪರಮ ಸುಖವನ್ನು ಉಂಟುಮಾಡುವುದು. ಧರ್ಮಶಾಸ್ತ್ರವು ವಿನಯಾದಿ ಸದ್ಗುಣಗಳನ್ನು ಬೆಳೆಸುವುದು. ದುರ್ಗುಣ ದುಶ್ಚಟಗಳನ್ನು ಬಿಡಿಸುವುದು. ಕೈ ಕಾಲು ಮಾತು ಮುಂತಾದ ಕರ್ಮೇಂದ್ರಿಯಗಳು ಉತ್ತಮ ಕೆಲಸಗಳನ್ನೇ ಮಾಡುವಂತೆ ಪ್ರಚೋದಿಸುವುದು. ಮನಸ್ಸು ಬುದ್ಧಿಗಳಿಗೆ ಉತ್ತಮ ತಿಳುವಳಿಕೆ ಸಂಸ್ಕಾರ ನೀಡುವುದು. ನಮಗೆ ಕಣ್ಣು ಬಹು ಮುಖ್ಯ. ಕಣ್ಣಾರೆ ಕಂಡು ಮಾಡುವುದನ್ನು ಮಾಡುತ್ತೇವೆ, ಬಿಡುವುದನ್ನು ಬಿಡುತ್ತೇವೆ. ಹಾಗೆ ಧಾರ್ಮಿಕ ಆಧ್ಯಾತ್ಮಿಕ ತಿಳುವಳಿಕೆ ಗಟ್ಟಿಯಾಗಿದ್ದರೆ ಜೀವನ ಚೆನ್ನಾಗಿ ನಡೆಸಬಹುದು. ಸಮಸ್ಯೆಗಳನ್ನು ಎದುರಿಸಬಹುದು. ಕಷ್ಟ ಸಹಿಸಿ ದಿಟ್ಟತನ ತೋರಿ ಮುನ್ನುಗ್ಗಬಹುದು. ಸರಿ ದಾರಿ ನೈತಿಕತೆ ಇದ್ದವ ಅಜಾತಶತ್ರು. ಅಕಾಲ ಮೃತ್ಯುವಿಗೆ ಒಳಗಾಗದೇ ದೀರ್ಘ ಕಾಲ ಕೀರ್ತಿಶಾಲಿಯಾಗಿ ಬಾಳಬಹುದು. ಧರ್ಮ ಅಧ್ಯಾತ್ಮವಿಲ್ಲದವರು ಮೂರೂ ಬಿಟ್ಟವರಾಗಿ ಸಮಾಜಕ್ಕೂ ತಮ್ಮವರಿಗೂ ಬೇಡವಾಗಿ ಭೂಮಿಗೆ ಭಾರವಾಗಿ ಮದ್ಯಾದಿ ವ್ಯಸನಿಗಳಾಗಿ ಅಹಂಕಾರಿಗಳಾಗಿ ತಾರುಣ್ಯದಲ್ಲಿಯೇ ಅಪಮೃತ್ಯುವಿಗೆ ತುತ್ತಾಗುವುದನ್ನು ಕಾಣುತ್ತೇವೆ.

## ಜನವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ದಿನಗಣನೆ ಆರಂಭವಾಯಿತೇ?

### ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಕಾಂಗ್ರೆಸ್ ಸರ್ಕಾರದ ವಿರುದ್ಧ ವ್ಯಂಗ್ಯವಾಡಿದ್ದಾರೆ

• ಉದಯವಾಹಿನಿ, ಬೆಂಗಳೂರು

ಮೈಸೂರು ಕಾಂಗ್ರೆಸ್ ಕಚೇರಿಯನ್ನು ಆದನ್ನು ಬೇಗ ಕಟ್ಟಿಬಿಡಿ. ಮುಂದೆ ಏನಾಗುತ್ತೋ ಗೊತ್ತಾಗಲ್ಲ ಮುಂದೆ ರಾಜಕೀಯ ಹೇಗೋ ಏನೋ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ನೀಡಿರುವ ಹೇಳಿಕೆ ರಾಜ್ಯ ರಾಜಕಾರಣದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ರಾಜ್ಯದಲ್ಲಿ ಆಡಳಿತದಲ್ಲಿರುವ ಪಕ್ಷದ ಸಚಿವರೇ ಈ ರೀತಿ ಹೇಳಿಕೆ ನೀಡಿರುವುದು ವಿಪಕ್ಷಗಳಿಗೆ ಸರ್ಕಾರದ ಮೇಲೆ ಸಚಿವರಿಗೆ ನಂಬಿಕೆ ಇಲ್ಲ ಎನ್ನುವ ಹೊಸ ಅಸ್ತ್ರ ಸಿಕ್ಕಂತಾಗಿದೆ. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿಕೆಯನ್ನು ಪ್ರಸ್ತಾಪಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಕಾಂಗ್ರೆಸ್ ಸರ್ಕಾರದ ವಿರುದ್ಧ ವ್ಯಂಗ್ಯವಾಡಿದ್ದಾರೆ. ಸದ್ಯದ ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಎಲ್ಲವೂ ಸರಿಯಿಲ್ಲ ಎನ್ನುವುದು ಎಷ್ಟು ವಾಸ್ತವವೋ, ಅಷ್ಟೇ ಕಟು ಸತ್ಯ ಎಂಬುದು ಆಗಿಂದಾಗ್ಗೆ ಬಯಲಾಗುತ್ತಲೇ ಇದೆ ಎಂದು ಹೇಳಿದ್ದಾರೆ. ಅನುದಾನವಿಲ್ಲದೇ ಆಡಳಿತ ಪಕ್ಷದ ಶಾಸಕರುಗಳೇ ಸರ್ಕಾರದ ವಿರುದ್ಧ ತಿರುಗಿ ಬಿದ್ದಿದ್ದಾರೆ. ಈ ಹುಳುಕುಗಳನ್ನು ಮುಚ್ಚಿಕೊಳ್ಳಲು ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಶಾಸಕರ ಒತ್ತಡಗಳನ್ನು ಸಹಿಸಲಾಗದೇ ಆಪರೇಷನ್ ಕಮಲದ ಗಾಳಿಯಲ್ಲಿ ಗುಂಡು ಪ್ರಯೋಗಿಸಿದ್ದರು. ಇದೀಗ ಗೃಹ ಸಚಿವ



ಉದಯವಾಹಿನಿ ಚಿತ್ರ

**ರಾಜಕಾರಣದಲ್ಲಿ ತೀವ್ರ ಚರ್ಚೆ**

ಡಾ.ಜಿ.ಪರಮೇಶ್ವರ್ ಅವರು ಬೇಗ ಮೈಸೂರು ಕಾಂಗ್ರೆಸ್ ಕಚೇರಿ ಕಟ್ಟಿಬಿಡಿ, ಮುಂದೆ ರಾಜಕೀಯ ಹೇಗೋ ಏನೋ? ಎಂದು ಅವರ ಪಕ್ಷದ ವೇದಿಕೆಯಲ್ಲಿ ಆಡಿರುವ ಮಾತುಗಳು ಈ ಜನವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ದಿನಗಣನೆ ಆರಂಭವಾಯಿತೇ ಎಂಬ ಸಂಶಯ ಹುಟ್ಟುಹಾಕಿದೆ ಎಂದಿದ್ದಾರೆ.

ನಮ್ಮ ಬಿಜೆಪಿ ಸರ್ಕಾರದ ಮೇಲೆ 40% ಎಂಬ ಸುಳ್ಳು ಅಪಪ್ರಚಾರ ಬಿತ್ತರಿಸಿ, ಸುಳ್ಳುಗಳ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ಸಿಗರಿಗೆ ಸುಳ್ಳು ಹಾಗೂ ಆಮಿಷಗಳ ಮೂಲಕ ಅಧಿಕಾರಕ್ಕೆ ಬಂದ ಯಾವ ಸರ್ಕಾರವೂ ಜನಾಕ್ರೋಶದ ಮುಂದೆ ಉಳಿದ ಇತಿಹಾಸವಿಲ್ಲ ಎಂಬುದು ಜ್ಞಾನೋದಯವಾಗುತ್ತಿರುವಂತಿದೆ

> **ಜನರ ಕ್ಷಮೆ ಕೇಳಿ: ದೆಹಲಿಯಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಪ್ರಾಮಾಣಿಕರಾಗಿದ್ದರೆ ಗ್ಯಾರಂಟಿ ಈಡೇರಿಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿ ಜನರ ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು. ಬಿಪಿಎಲ್ ಕಾರ್ಡ್ ವಿಷಯದಲ್ಲಿ ಒಂದೇ ಕಲ್ಲಿಗೆ ಎರಡು ಹಕ್ಕಿ ಹೊಡೆಯುವ ಕೆಲಸವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಅನರ್ಹರ ಕಾರ್ಡ್ ಬದಲಿಸಲು ಆಕ್ಷೇಪವಿಲ್ಲ. ಆದರೆ, ರಾಜ್ಯ ಸರ್ಕಾರವು ಸಮರ್ಪಕ ಮಾನದಂಡವೇ ಇಲ್ಲದೆ ಪ್ಯಾನ್ ಕಾರ್ಡ್, ಆದಾಯ ತೆರಿಗೆ ವಿಚಾರಗಳನ್ನು ಮುಂದಿಟ್ಟುಕೊಂಡು 10 ರಿಂದ 20 ಲಕ್ಷ ಬಿಪಿಎಲ್ ಕಾರ್ಡ್‌ಗಳನ್ನು ವಜಾ ಮಾಡಿದೆ ಎಂದು ಟೀಕಿಸಿದರು.**

ಎಂದು ಕಾಂಗ್ರೆಸ್ ಸರ್ಕಾರ ಹಾಗೂ ಕಾಂಗ್ರೆಸ್ ನಾಯಕರ ವಿರುದ್ಧ ವ್ಯಂಗ್ಯವಾಡಿದ್ದಾರೆ. ಉಕ್ಕಿನ ಮಹಿಳೆ ಶ್ರೀಮತಿ ಇಂದಿರಾ ಗಾಂಧಿಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದೇನು..? ನಿನ್ನೆ ಗುರುವಾರ ಮೈಸೂರು ನಗರದ ಕಾಂಗ್ರೆಸ್ ಭವನದಲ್ಲಿ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, 18 ಕೋಟಿಯಲ್ಲಿ ಈಗ ಮೈಸೂರು

#### ಬಡವರಿಗೆ ಬರೆ ಎಳೆಯಲು ಮುಂದಾಗುತ್ತಿರಲಿಲ್ಲ

**ಬಿಪಿಎಲ್ ಕಾರ್ಡಿಗೆ ಕತ್ತರಿ ಹಾಕಿದರೆ, ಗೃಹಲಕ್ಷ್ಮಿ ಹಣ ಉಳಿತಾಯ ಆಗುತ್ತದೆ. ಗೃಹಲಕ್ಷ್ಮಿ ಹಣ ಇವರಿಗೆ ಕೊಡಲು ಸಾಧ್ಯವಾಗುತ್ತಿಲ್ಲ. 5 ಕೆಜಿ ಅಕ್ಕಿಗೆ ಕೊಡುವ ಹಣವೂ ಉಳಿಯಲಿದೆ. ಸಾವಿರಾರು ಕೋಟಿ ರೂ. ಉಳಿತಾಯಕ್ಕಾಗಿ ಈ ಕ್ರಮಕ್ಕೆ ಮುಂದಾಗಿದ್ದಾರೆ ಎಂದು ಆಕ್ಷೇಪಿಸಿದರು. ಬಿಪಿಎಲ್ ಕಾರ್ಡ್ ರದ್ದು ಮಾಡಿ ವಂಚನೆ ಮಾಡುವ ಸರ್ಕಾರ ಇದು. ಮನುಷ್ಯತ್ವ ಇರುವ ಸರ್ಕಾರ ಬಡವರಿಗೆ ಬರೆ ಎಳೆಯಲು ಮುಂದಾಗುತ್ತಿರಲಿಲ್ಲ ಎಂದರು**

ಕಾಂಗ್ರೆಸ್ ಕಚೇರಿ ನಿರ್ಮಾಣಕ್ಕೆ ಹೊರಟಿರುವುದು ಉತ್ತಮ ಬೆಳವಣಿಗೆ ಇವತ್ತಿನ ರಾಜಕೀಯ ಬೆಳವಣಿಗೆ ನೋಡಿದರೆ ಏನೂ ಹೇಳಲಿಕ್ಕೆ ಆಗಲ್ಲ ರಾಜಕೀಯ ಹೇಗೋ ಏನೋ ಗೊತ್ತಿಲ್ಲ, ಆದಷ್ಟು ಬೇಗ ನಿರ್ಮಾಣವಾಗಲಿ, ನಮ್ಮ ಸರ್ಕಾರ ಇರುವಾಗಲೇ ಶಂಕುಸ್ಥಾಪನೆ ನೆರವೇರಿಸಿ, ಕಾಂಗ್ರೆಸ್ ಕಚೇರಿ ಕಟ್ಟಲೇಬೇಕು ಎಂದು ಕೋಪದಲ್ಲಿ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರಿಗೆ ಹಿಂದೆಯೇ ಹೇಳಿದ್ದೆ ಎಂದು ಸಭೆಯಲ್ಲಿ ಹೇಳಿದ್ದರು.

## ವೆಂಕಟಗಿರಿ ಮಹಾತ್ಮೆ

• ಉದಯವಾಹಿನಿ, ಬೆಂಗಳೂರು



ವಿಜಯ ಮಧ್ವ ಸಂಘದ ವತಿಯಿಂದ ನವೆಂಬರ್ 24 ರಿಂದ ಡಿಸೆಂಬರ್ 1ರ ವರೆಗೆ ಪ್ರತಿದಿನ ಸಂಜೆ 6-30ಕ್ಕೆ ಮ॥ಶಾ॥ಸಂ॥ ಶ್ರೀ ಚಂದ್ರಶೇಖರ ಆಚಾರ್ಯರಿಂದ ವೆಂಕಟಗಿರಿ ಮಹಾತ್ಮೆ ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಿದೆ. ಸ್ಥಳ : ವಿಜಯ ಮಧ್ವ ಸಂಘ, 37/2, ಗಂಗಾಧರ ಬಡಾವಣೆ, 2ನೇ ಮುಖ್ಯರಸ್ತೆ, ವಿಜಯನಗರ, ಬೆಂಗಳೂರು-560040

## 6 ತಿಂಗಳಿಂದ ಇಂದಿರಾ ಕ್ಯಾಂಟೀನ್ ಸಿಬ್ಬಂದಿಗೆ ಸಂಬಳ ನೀಡದ ದಿವಾಳಿ ಸರ್ಕಾರ : ಜೆಡಿಎಸ್




• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಹಣ ಬಾಕಿ ಉಳಿಸಿಕೊಂಡಿರುವ ಕಾರಣ ಬೆಂಗಳೂರಿನ ಹಲವೆಡೆ ಇಂದಿರಾ ಕ್ಯಾಂಟೀನ್‌ಗಳು ಬಂದ್ ಆಗಿವೆ ಎಂದು ಜೆಡಿಎಸ್ ಆರೋಪಿಸಿದೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ರಾಜ್ಯದ ಆರ್ಥಿಕ ಸ್ಥಿತಿಯನ್ನು ಪಾತಳಕ್ಕೆ ತಳ್ಳಿರುವ ಭ್ರಷ್ಟ ಸರ್ಕಾರ ಬಡವರಿಗೆ ಶಾಪವಾಗಿ ಪರಿಣಮಿಸಿದೆ ಎಂದು ಟೀಕಿಸಿದೆ. ಊಟ ಪೂರೈಸಲು ಗುತ್ತಿಗೆ ಪಡೆದಿರುವ ಕಂಪನಿಗೆ ಬಿಬಿಎಂಪಿ ಹಣ ಪಾವತಿಸಿಲ್ಲ. ಜೊತೆಗೆ ಕ್ಯಾಂಟೀನ್ ಸಿಬ್ಬಂದಿಗೂ 6 ತಿಂಗಳಿಂದ ವೇತನ ನೀಡಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ದಿವಾಳಿ ಅಂಚಿಗೆ ತಲುಪಿದ್ದು, ಅವೈಜ್ಞಾನಿಕ ಗ್ಯಾರಂಟಿ ಹೊರೆಯಿಂದ ಜನಸಾಮಾನ್ಯರ ಹೊಟ್ಟೆ ಮೇಲೆ ಹೊಡೆಯುತ್ತಿದೆ ಎಂದು ವಾಗ್ದಾಳಿ ನಡೆಸಿದೆ.

## ಊರೊಳಗೆ ಬಂದ ನರಿ ಮರಿ, ಆರೈಕೆ ಮಾಡಿ ಅರಣ್ಯ ಇಲಾಖೆಗೊಪ್ಪಿಸಿದ ಗ್ರಾಮಸ್ಥರು

• ಉದಯವಾಹಿನಿ, ದೊಡ್ಡಬಳ್ಳಾಪುರ

ತಾಲ್ಲೂಕಿನ ತೂಬಗೆರೆ ಬಸ್ ನಿಲ್ದಾಣದಲ್ಲಿ ನರಿ ಮರಿಯೊಂದು ಪತ್ತೆಯಾಗಿದೆ. ಗ್ರಾಮದ ನಿವಾಸಿ ಸಾಲಿ ಮುನಿರಾಜು ಮತ್ತು ಸ್ನೇಹಿತರು ಮುಂಜಾನೆ ವಾಕಿಂಗ್ ಹೋಗುವಾಗ ನಾಯಿಗಳ ಹಿಂಡು ಈ ಪುಟ್ಟ ನರಿ ಮರಿ ಮೇಲೆ ದಾಳಿ ಮಾಡುತ್ತಿರುವುದನ್ನು ಕಂಡ ದಾರಿಹೋಕರು ಅದನ್ನು ರಕ್ಷಿಸಿ ಆರೈಕೆ ಮಾಡಿ, ಅರಣ್ಯ ಇಲಾಖೆಯವರಿಗೆ ಸುದ್ದಿ ಮುಟ್ಟಿಸಿದ್ದಾರೆ. ಸ್ಥಳಕ್ಕೆ ಆಗಮಿಸಿದ ಉಪ ವಲಯ ಅರಣ್ಯಾಧಿಕಾರಿ ಚಂದ್ರಶೇಖರ್ ನರಿಯನ್ನು ವಶಕ್ಕೆ ಪಡೆದು, ಕಾಡುಪ್ರಾಣಿಯನ್ನು ರಕ್ಷಿಸಿದ ಮುನಿರಾಜು, ಶ್ರೀಧರ, ನಾಗರಾಜು ಅವರಿಗೆ ಕೃತಜ್ಞತೆ ತಿಳಿಸಿದ್ದಾರೆ. ನರಿಮರಿಗೆ ಸೂಕ್ತ ಚಿಕಿತ್ಸೆ ಕೊಡಿಸಿ ಮರಳಿ ಕಾಡಿಗೆ ಬಿಡಲಾಗಿದೆ ಎಂದು ಆರ್ ಎಫ್ ಒ ಕೃಷ್ಣೇಗೌಡ ತಿಳಿಸಿದ್ದಾರೆ.

## ಬೈಕ್ ಪಾರ್ಕಿಂಗ್ ವಿಚಾರಕ್ಕೆ ವಿದ್ಯಾರ್ಥಿಗಳ ಮಾರಾಮಾರಿ ಮೂವರಿಗೆ ಚಾಕುವಿನಿಂದ ಹಲ್ಲೆ

• ಉದಯವಾಹಿನಿ, ಬೆಂಗಳೂರು

ಬೈಕ್ ಪಾರ್ಕಿಂಗ್ ವಿಚಾರಕ್ಕೆ ವಿದ್ಯಾರ್ಥಿಗಳ ನಡುವಿನ ಗಲಾಟೆಯಲ್ಲಿ ಮೂವರಿಗೆ ಚಾಕುವಿನಿಂದ ಹಲ್ಲೆ ನಡೆಸಿದ ಘಟನೆ ರಾಜಾನುಕುಂಟೆ ಬಳಿಯ ಖಾಸಗಿ ಕಾಲೇಜಿನಲ್ಲಿ ನಡೆದಿದೆ. ಗಲಾಟೆಯಲ್ಲಿ ಇಬ್ಬರಿಗೆ ಗಂಭೀರ ಗಾಯಗಳಾಗಿವೆ. ಮತ್ತೋರ್ವನಿಗೂ ಸಣ್ಣಪುಟ್ಟ ಗಾಯಗಳಾಗಿವೆ. ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕಾಲೇಜಿನ ವಿದ್ಯಾರ್ಥಿಯೊಬ್ಬ ಆತನ ಸ್ನೇಹಿತರೊಂದಿಗೆ ಸೇರಿಕೊಂಡು, ಮತ್ತೊಂದು ವಿದ್ಯಾರ್ಥಿಗಳ ಗುಂಪಿನ ಮೇಲೆ ಹಲ್ಲೆ ನಡೆಸಿದ್ದಾರೆ. ಈ ವೇಳೆ ಹೆಲ್ಮೆಟ್‌ಗಳಲ್ಲಿ ಪರಸ್ಪರ ಬಡಿದಾಡಿಕೊಂಡಿದ್ದಾರೆ. ಈ ಸಂಬಂಧ ರಾಜಾನುಕುಂಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಫೋಟೋ ಕಳಿಸಿ ಸರ್ಕಾರಿ ನೌಕರನಿಂದ 2.5 ಕೋಟಿ ವಸೂಲಿ ನಾಲ್ವರು ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಖಾಸಗಿ ವಿಡಿಯೋ ಇದೆ ಎಂದು ಬೆದರಿಸಿ ಕೇಂದ್ರ ಸರ್ಕಾರದ ಸಂಸ್ಥೆಯೊಂದರ ನೌಕರನಿಂದ 2.5 ಕೋಟಿ ರೂ. ಹಣ ವಸೂಲಿ ಮಾಡಿದ್ದ ಹನಿಟ್ರ್ಯಾಪ್ ಗ್ಯಾಂಗ್ ಸಿಸಿಬಿ ಪೊಲೀಸರ ಬಲೆಗೆ ಬಿದ್ದಿದೆ. ಬಂಧಿತ ಆರೋಪಿಗಳನ್ನು ತಬ್ಸಂ ಬೇಗಂ, ಅಜೀಮ್ ಉದ್ದಿನ್, ಆನಂದ್ ಹಾಗೂ ಅಭಿಷೇಕ್ ಎಂದು ಗುರುತಿಸಲಾಗಿದೆ. ವಂಚನೆಗೊಳಗಾದ ವ್ಯಕ್ತಿಯನ್ನು ಆರ್‌ಟಿ ನಗರದ ಜಿಮ್ ಒಂದರಲ್ಲಿ ಆರೋಪಿ ತಬ್ಸಂ ಬೇಗಂ ಪರಿಚಯ ಮಾಡಿಕೊಂಡಿದ್ದಳು. ನಂತರದ ದಿನಗಳಲ್ಲಿ, ಮಗು ಒಂದನ್ನು ದತ್ತು ಪಡೆದಿದ್ದೇನೆ ಎಂದು ಅವರೊಂದಿಗೆ ಸಹಾಯ ಪಡೆದಿದ್ದಳು. ಬಳಿಕ ವಾಟ್ಸಾಪ್ ಮೂಲಕ ಖಾಸಗಿ ಫೋಟೊ ಕಳಿಸಿ ಅವರಿಗೆ ಗ್ಯಾಂಗ್ ಬೆದರಿಸಿತ್ತು. ಪೊಲೀಸ್ ಹಾಗೂ ವಕೀಲ ಎಂದು ಹೇಳಿ ಹೆದರಿಸಿ, 2021ರಿಂದ ನಿರಂತರವಾಗಿ ಹಂತ ಹಂತವಾಗಿ 2.5 ಕೋಟಿ ರೂ. ಹಣ ವಸೂಲಿ ಮಾಡಿದ್ದರು. ಈ ಸಂಬಂಧ 3 ವರ್ಷಗಳ ನಂತರ ಸಂತ್ರಸ್ತ ವ್ಯಕ್ತಿ ಸಿಸಿಬಿಗೆ ದೂರು ನೀಡಿದ್ದರು. ಈ ಸಂಬಂಧ ನಾಲ್ವರನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ.

## ಮಾನಸಿಕ ಸಿದ್ಧತೆ ಕೊರತೆ ದರ್ಶನ್‌ಗೆ ಶಸ್ತ್ರಚಿಕಿತ್ಸೆ ನಡೆಸಿಲ್ಲ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಬಂಧಿತನಾಗಿ ಜಾಮೀನಿನ ಮೇಲೆ ಬಿಡುಗಡೆಯಾಗಿರುವ ನಟ ದರ್ಶನ್ ಅವರು ಇನ್ನೂ ಮಾನಸಿಕವಾಗಿ ಸಿದ್ಧರಾಗದ ಹಿನ್ನೆಲೆಯಲ್ಲಿ ಶಸ್ತ್ರಚಿಕಿತ್ಸೆ ನಡೆಸಿಲ್ಲ ಎಂದು ವಕೀಲರು ಹೈಕೋರ್ಟ್‌ಗೆ ತಿಳಿಸಿದ್ದಾರೆ.

ಅನಾರೋಗ್ಯದ ಕಾರಣ ನೀಡಿದ ದರ್ಶನ್ ಅವರಿಗೆ ಹೈಕೋರ್ಟ್ 6 ವಾರಗಳ ಜಾಮೀನು ನೀಡಿತ್ತು. ಜಾಮೀನು ನೀಡಿದರೂ ದರ್ಶನ್ ಅವರಿಗೆ ಇನ್ನೂ ಶಸ್ತ್ರಚಿಕಿತ್ಸೆ ನಡೆದಿಲ್ಲ. ಹೀಗಾಗಿ ಶಸ್ತ್ರ ಚಿಕಿತ್ಸೆ ಏಕೆ ನಡೆದಿಲ್ಲ ಎಂಬ ಪ್ರಶ್ನೆಗೆ ದರ್ಶನ್ ಪರ ವಕೀಲರು ಆರೋಗ್ಯಕ್ಕೆ ಸಂಬಂಧಿಸಿದ ಕಾರಣವನ್ನು ವರದಿಯಲ್ಲಿ ಹೈಕೋರ್ಟ್‌ಗೆ ಸಲ್ಲಿಸಿದ್ದಾರೆ. ದರ್ಶನ್ ಅವರಿಗೆ ಶಸ್ತ್ರ ಚಿಕಿತ್ಸೆ ಮಾಡುವುದಕ್ಕೆ ತಯಾರಿ ಮಾಡಲಾಗುತ್ತಿದೆ. ದರ್ಶನ್ ಕೂಡ ಶಸ್ತ್ರಚಿಕಿತ್ಸೆಗೆ ತಯಾರಾಗುತ್ತಿದ್ದಾರೆ. ಆದರೆ ಅತಿಯಾದ ರಕ್ತದೊತ್ತಡ ಸಮಸ್ಯೆ



ಉದಯವಾಹಿನಿ ಚಿತ್ರ

ಎದುರಾಗಿದೆ. ಆಪರೇಷನ್ ಮಾಡಬೇಕಾದರೆ ರಕ್ತದೊತ್ತಡ ಸಮತೋಲನ ಆಗಿರಬೇಕು. ದರ್ಶನ್ ರಕ್ತದೊತ್ತಡದ ಸಮಸ್ಯೆ ಸಮತೋಲನಕ್ಕೆ ಬರುತ್ತಿಲ್ಲ. ಇನ್ನೂ ದರ್ಶನ್ ಕೂಡ ಶಸ್ತ್ರ ಚಿಕಿತ್ಸೆಗೆ ಮಾನಸಿಕವಾಗಿ ಸಿದ್ಧರಾಗಬೇಕಿದೆ. ಸದ್ಯಕ್ಕೆ ಕನ್ಸರ್ವೇಟಿವ್ ಚಿಕಿತ್ಸೆ ಮುಂದುವರೆದಿದೆ. ಫಿಸಿಯೋಥೆರಪಿ, ಔಷಧಗಳಿಂದ ಸಮಸ್ಯೆ ನಿಯಂತ್ರಣದಲ್ಲಿಡುವ ಪ್ರಯತ್ನ ನಡೆಯುತ್ತಿದೆ.

ಬೆನ್ನುಹುರಿ ನೋವಿಗೆ ಪರಿಹಾರ ಪಡೆಯಲು ಶಸ್ತ್ರ ಚಿಕಿತ್ಸೆಗೆ ಅವಕಾಶ ಕಲ್ಪಿಸಿಕೊಂಡಬೇಕೆಂದು ಕೋರಿ ದರ್ಶನ್ ಸಲ್ಲಿಸಿದ್ದ ಮನವಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ ಅಕ್ಟೋಬರ್ 30 ರಂದು ಮಧ್ಯಂತರ ಜಾಮೀನು ಮಂಜೂರು ಮಾಡಿತ್ತು.

ಪ್ರತಿ ವಾರ ವೈದ್ಯಕೀಯ ವರದಿಯನ್ನು ಸಲ್ಲಿಕೆ ಮಾಡಬೇಕು. ಪಾಸ್‌ಪೋರ್ಟ್ ಅನ್ನು ನ್ಯಾಯಾಲಯಕ್ಕೆ ಒಪ್ಪಿಸಬೇಕೆಂದು ಕೋರ್ಟ್ ಷರತ್ತು ವಿಧಿಸಿತ್ತು. ದರ್ಶನ್ ಪರ ವಕೀಲರು ಮೂರು ತಿಂಗಳ ಜಾಮೀನು ಕೋರಿದ್ದರು. ಆದರೆ ಕೋರ್ಟ್ 6 ವಾರಗಳ ಜಾಮೀನು ಮಾತ್ರ ಮಂಜೂರು ಮಾಡಿ ದರ್ಶನ್ ಅವರಿಗೆ ತಾತ್ಕಾಲಿಕ ರಿಲೀಫ್ ನೀಡಿತ್ತು.

## ಇಬ್ಬರು ಮಕ್ಕಳನ್ನು ಕೊಂದು ಆತ್ಮಹತ್ಯೆಗೆ ಯತ್ನಿಸಿದ ತಾಯಿ

• ಉದಯವಾಹಿನಿ, ಬೆಂಗಳೂರು

ಹೆತ್ತ ತಾಯಿಯೇ ತಮಿಬ್ಬರು ಕರುಳ ಕುಡಿಗಳನ್ನು ಸಾಯಿಸಿ ನಂತರ ಆತಹತ್ಯೆಗೆ ಯತ್ನಿಸಿರುವ ಘಟನೆ ಸುಬ್ರಮಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ. ಗಂಡು ಮಗು ಶಂಭು ಸಾಹು(7) ಮತ್ತು ಹೆಣ್ಣುಮಗು ಶ್ರೇಯಾ(3) ತನ್ನ ತಾಯಿಯಿಂದಲೇ ಕೊಲೆಯಾದ ಮಕ್ಕಳು.



ಜಾರ್ಖಂಡ್ ಮೂಲದ ಸುನೀಲ್ ಸಾಹು-ಮಮತಾ ಸಾಹು ದಂಪತಿ ತನ್ನಿಬ್ಬರು ಮಕ್ಕಳೊಂದಿಗೆ ಎಂಟು ತಿಂಗಳ ಹಿಂದೆಯಷ್ಟೇ ನಗರಕ್ಕೆ ಬಂದು ಉತ್ತರಹಳ್ಳಿಯ ಮುನಿಸ್ವಾಮಿ ಲೇಔಟ್‌ನಲ್ಲಿ ಬಾಡಿಗೆ ಮನೆ ಮಾಡಿಕೊಂಡು ವಾಸಿಸುತ್ತಿದ್ದರು. ಸುನೀಲ್ ಸಾಹು ಓಲಾ ಆಟೋ ಚಾಲಕ ವೃತ್ತಿ ಮಾಡುತ್ತಿದ್ದರು.

ಈ ನಡುವೆ ಸುನೀಲ್ ಮೊಬೈಲ್‌ನಲ್ಲಿ ಜಾರ್ಖಂಡ್ ಯುವತಿ ಜೊತೆ ಮಾತನಾಡುತ್ತಿದ್ದುದನ್ನು ಪತ್ನಿ ಮಮತಾ ಗಮನಿಸಿ ಜಗಳವಾಡಿದ್ದಾಳೆ.

ನಿನ್ನೆ ರಾತ್ರಿ ಇದೇ ವಿಚಾರಕ್ಕೆ ದಂಪತಿ ನಡುವೆ ಜಗಳವಾಗಿದೆ. ಆ ವೇಳೆ ಸುನೀಲ್ ಸಾಹು ಹೊರಗೆ ಹೋಗಿದ್ದಾನೆ. ಆ ಸಂದರ್ಭದಲ್ಲಿ ತನ್ನಿಬ್ಬರು ಮಕ್ಕಳನ್ನು ದಾರದಿಂದ ಕುತ್ತಿಗೆ ಬಿಗಿದು ಕೊಲೆ ಮಾಡಿ ನಂತರ ಹಗ್ಗದಿಂದ ನೇಣು ಬಿಗಿದುಕೊಳ್ಳಲು ಯತ್ನಿಸಿದ್ದಾಳೆ.

ಆ ವೇಳೆ ಹಗ್ಗ ತುಂಡಾಗಿದೆ. ನಂತರ ಚಾಕುವಿನಿಂದ ಕುತ್ತಿಗೆ ಕೊಯ್ದುಕೊಂಡು ಕುಸಿದು ಬಿದ್ದಿದ್ದಾಳೆ. ಹೊರಗೆ ಹೋಗಿದ್ದ ಪತಿ ರಾತ್ರಿ 10.30ರ ಸುಮಾರಿಗೆ ಮನೆಗೆ ಬಂದಾಗ ಮಕ್ಕಳು ಕೊಲೆಯಾಗಿರುವುದು ಕಂಡುಬಂದಿದೆ. ಪತ್ನಿ ರಕ್ತದ ಮಡುವಿನಲ್ಲಿ ಇರುವುದು ಗಮನಿಸಿ ತಕ್ಷಣ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆಗೆ ದಾಖಲಿಸಿದ್ದು, ಮಮತಾ ಪ್ರಾಣಾಪಾಯದಿಂದ ಪಾರಾಗಿದ್ದಾಳೆ. ಮಕ್ಕಳು ಸಾವನ್ನಪ್ಪಿರುವ ಬಗ್ಗೆ ಸುನೀಲ್ ಸಾಹು ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಪಡಿತರ ಚೀಟಿ ತಿದ್ದುಪಡಿಗಾಗಿ ನ್ಯಾಯಬೆಲೆ ಅಂಗಡಿ ಮುಂದೆ ಮುಗಿಬಿದ್ದ ಜನ

• ಉದಯವಾಹಿನಿ, ಬೆಂಗಳೂರು

ಕಳೆದ ಹಲವು ದಿನಗಳಿಂದ ಗೊಂದಲದ ಗೂಡಾದ ಬಿಪಿಎಲ್ ಕಾರ್ಡ್ ಪರಿಷ್ಕರಣೆ ಕೈಬಿಟ್ಟ ಹಿನ್ನೆಲೆಯಲ್ಲಿ ರದ್ದಾಗಿರುವ ಕಾರ್ಡ್‌ಗಳನ್ನು ಸರಿಪಡಿಸಿಕೊಳ್ಳಲು ಪಡಿತರ ಚೀಟಿದಾರರು ಕೊರೆಯುವ ಚಳಿಯಲ್ಲೂ ನ್ಯಾಯಬೆಲೆ ಅಂಗಡಿಗಳ ಮುಂದೆ ಕ್ಯೂ ನಿಂತಿದ್ದಾರೆ.

ಪಡಿತರ ಚೀಟಿ ಪರಿಷ್ಕರಣೆ ಮಾಡಲು ಸರ್ಕಾರ ಮುಂದಾಗಿದ್ದು, ಭಾರೀ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಪರಿಷ್ಕರಣೆಯನ್ನು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಕೈಬಿಟ್ಟಿದ್ದು, ಇನ್ನೊಂದು ವಾರದಲ್ಲಿ ರದ್ದಾಗಿರುವ ಕಾರ್ಡ್ಗಳನ್ನು ಮತ್ತೆ ಸರಿಪಡಿಸಲು ಸೂಚನೆ ನೀಡಿದ್ದು, ರದ್ದಾಗಿರುವ ಕಾರ್ಡ್ಗಳ



ಉದಯವಾಹಿನಿ ಚಿತ್ರ

ಪಟ್ಟಿ ಪಡೆದುಕೊಂಡುಕಾರ್ಡ್‌ಗಳನ್ನು ಸರಿಪಡಿಸಲಾಗುತ್ತಿದೆ. ಹೀಗಾಗಿ ದಾಖಲಾತಿಗಳನ್ನು ಕೈಯಲ್ಲಿ ಹಿಡಿದು ಕೊಂಡು ಫಲಾನುಭವಿಗಳು ನಮ ಕಾರ್ಡ್ ರದ್ದಾಗಿದೆಯೋ ಅಥವಾ ಚಾಲ್ತಿಯಲ್ಲಿದೆಯೋ? ಎಂಬುದನ್ನು ಖಾತ್ರಿಪಡಿಸಿಕೊಳ್ಳಲು ಹಾಗೂ ಒಂದು ವೇಳೆ ರದ್ದಾಗಿದ್ದರೆ ಸೇರ್ಪಡೆ ಮಾಡಲು ನ್ಯಾಯಬೆಲೆ ಅಂಗಡಿಗಳ ಮುಂದೆ ಸಾಲುಗಟ್ಟಿ ನಿಂತಿದ್ದಾರೆ.

ವಿನಾಯಕ ನಗರದ ಸಿಂಗಾಪುರ ಮುಖ್ಯ ರಸ್ತೆಯ ನ್ಯಾಯಬೆಲೆ ಅಂಗಡಿಯೊಂದರಲ್ಲಿ ಮೈ ಕೊರೆಯುವ ಚಳಿಯ ನಡುವೆಯೂ ಇಂದು ಬೆಳಿಗ್ಗೆ 4 ಗಂಟೆಗೆ ಫಲಾನುಭವಿಗಳು ದಾಖಲೆಗಳನ್ನು ಹಿಡಿದುಕೊಂಡು ಸರತಿ ಸಾಲಿನಲ್ಲಿ ನಿಂತಿದ್ದ ದೃಶ್ಯಗಳು ಸಾಮಾನ್ಯವಾಗಿತ್ತು. ಕಾದುಕಾದು ಬಳಲಿ ಬೆಂಡಾದ ಫಲಾನುಭವಿಗಳು ರಸ್ತೆಯ ಡಿವೈಡರ್‌ಗಳ ಮೇಲೆ ಕುಳಿತು ತಮ ಸರದಿಗಾಗಿ ಎದುರು ನೋಡುತ್ತಿದ್ದರು. ಕೆಲವರು ಊಟ, ತಿಂಡಿ, ಕಾಫಿ ಇಲ್ಲದೆ ನಿಂತಲ್ಲೇ ನಿಂತಿದ್ದರು. ಇನ್ನು ಸರದಿ ಸಾಲು ಎಲ್ಲಿ ಕೈ ತಪ್ಪಿ ಹೋಗುತ್ತದೆಯೋ ಎಂದು ಕೆಲವರು ಮನೆಗಳಿಗೆ ಫೋನ್ ಮಾಡಿ ಅಲ್ಲಿಯೇ ತಿಂಡಿ ಹಾಗೂ ಕಾಫಿ ತರಿಸಿಕೊಂಡು ಸೇವಿಸುತ್ತಿದ್ದ ದೃಶ್ಯಗಳು ಕಂಡುಬಂದವು. ಲೋಪದೋಷಗಳ ತಿದ್ದುಪಡಿಗಾಗಿ 3 ಗಂಟೆ ನಂತರ ಕಾಲಾವಕಾಶ ನೀಡಲಾಗಿದೆ. ಆದರೆ ಮುಂಜಾನೆಯಿಂದಲೇ ಫಲಾನುಭವಿಗಳು ಸರದಿ ಸಾಲಿನಲ್ಲಿ ನಿಂತು ಹೈರಾಣರಾಗಿ ಕಾಯುತ್ತಿದ್ದರು.

## ಅಧಿವೇಶನಕ್ಕೆ ಮುನ್ನ ಸಂಪುಟಕ್ಕೆ ಸರ್ಜರಿ ಸಾಧ್ಯತೆಗಳೇನು?

• ಉದಯವಾಹಿನಿ, ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣಕಾಸು ಅವ್ಯವಹಾರ ಪ್ರಕರಣದಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಬಿ. ನಾಗೇಂದ್ರ ಅವರನ್ನು ಮರಳಿ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿಕೊಳ್ಳುವ ಸಾಧ್ಯತೆ ದಟ್ಟವಾಗಿದ್ದು, ಈ ಮಾಸಾಂತ್ಯಕ್ಕೆ ಮುಖ್ಯಮಂತ್ರಿ ಸಿದ್ದ ರಾಮಯ್ಯ ತಮ್ಮ ಸಚಿವ ಸಂಪುಟಕ್ಕೆ ಪುಟ್ಟ ಸರ್ಜರಿ ಮಾಡುವ ಚರ್ಚೆ ಈಗ ಕಾಂಗ್ರೆಸ್ ವಲಯದಲ್ಲಿ ದಟ್ಟವಾಗಿದೆ.

ಸಿಎಂ ಸಿದ್ದರಾಮಯ್ಯ ಅವರ ದಿಲ್ಲಿ ಪ್ರವಾಸದ ಬೆನ್ನಲ್ಲೇ ಈ ಚರ್ಚೆ ಮುನ್ನೆಲೆಗೆ ಬಂದಿದೆ. ಆದರೆ ನಾಗೇಂದ್ರ ಅವರ ಸಂಪುಟ ಸೇರ್ಪಡೆ ವಿಷಯ ಸಂಡೂರು ಕ್ಷೇತ್ರದ ಫಲಿತಾಂಶವನ್ನು ಅವಲಂಬಿಸಿದೆ. ಅಲ್ಲಿ ಕಾಂಗ್ರೆಸ್ ಗೆದ್ದರೆ ಬೆಳಗಾವಿ ಅಧಿವೇಶನಕ್ಕೆ ಮುನ್ನ ಅಂದರೆ ನ. 27 ಅಥವಾ 29ರಂದು ನಾಗೇಂದ್ರ ಅವರನ್ನು ಸಂಪುಟಕ್ಕೆ ಮರಳಿ ಸೇರ್ಪಡೆ ಮಾಡಿಕೊಳ್ಳಬಹುದೆಂದು ಕಾಂಗ್ರೆಸ್‌ನ ಉನ್ನತ ಮೂಲಗಳು ತಿಳಿಸಿವೆ.

ಸಿಎಂ ಇತ್ತೀಚೆಗೆ ಚಾಮರಾಜನಗರಕ್ಕೆ ಭೇಟಿ ಕೊಟ್ಟ ಸಂದರ್ಭದಲ್ಲೇ ಈ ವಿಷಯ ಮುನ್ನೆಲೆಗೆ ಬಂದಿತ್ತು. ಅನಿಲ್ ಚಿಕ್ಕಮಾದು ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂತೆ

- **ಈ ಮಾಸಾಂತ್ಯಕ್ಕೆ ಸಿಎಂ ಸಿದ್ದರಾಮಯ್ಯ ಅವರಿಂದ ಸಚಿವ ಸಂಪುಟಕ್ಕೆ ಕಿರು ಸರ್ಜರಿ**
- **ಸಿದ್ದರಾಮಯ್ಯ ದಿಲ್ಲಿ ಪ್ರವಾಸದ ಬೆನ್ನಲ್ಲೇ ಈ ಚರ್ಚೆ**
- **ಸಂಡೂರಿನಲ್ಲಿ ಕಾಂಗ್ರೆಸ್ ಗೆದ್ದರೆ ಬೆಳಗಾವಿ ಅಧಿವೇಶನಕ್ಕೆ ಮುನ್ನ ನಾಗೇಂದ್ರ ಮರಳಿ ಸಂಪುಟಕ್ಕೆ**
- **7ರಿಂದ 8 ಮಂದಿ ಅಸಮರ್ಥ ಸಚಿವರನ್ನು ಕೈ ಬಿಟ್ಟು ಹೊಸಬರಿಗೆ ಅವಕಾಶ**



ಬೆಂಬಲಿಗರು ಆಗ್ರಹಿಸಿದಾಗ, ''ನಾಗೇಂದ್ರ ಅವರಿಗೆ ಮಾತು ಕೊಟ್ಟಿದ್ದೇನೆ' ಎಂದು ಸಿಎಂ ಹೇಳಿದ್ದರು. ಅನಂತರ ಸಂಪುಟ ಪುನಾರಚನೆ ಚರ್ಚೆ ತೀವ್ರವಾಗಿತ್ತು. ಇದರ ಬೆನ್ನಲ್ಲೇ ಕಾಂಗ್ರೆಸ್‌ನ ಹಿರಿಯ ಶಾಸಕರೊಬ್ಬರಿಗೆ ಸಿಎಂ ಸಿದ್ದರಾಮಯ್ಯ ಅವರು ಸಚಿವ ಸಂಪುಟ ಪುನಾರಚನೆಯ ಮುನ್ಸೂಚನೆ ನೀಡಿದ್ದಾರೆ. 7ರಿಂದ 8 ಅಸಮರ್ಥ ಸಚಿವರನ್ನು ಕೈ ಬಿಟ್ಟು ಹೊಸಬರಿಗೆ ಅವಕಾಶ ನೀಡುವ ಭರವಸೆ

> **ನಾಗೇಂದ್ರ ಸೇರ್ಪಡೆ ಸಾಧ್ಯತೆಯ ಬಗ್ಗೆ ಕಾಂಗ್ರೆಸ್ ಮೂಲಗಳು ಸ್ಪಷ್ಟವಾಗಿ ತಿಳಿಸಿವೆ. ಸಚಿವ ಸಂಪುಟ ಪುನಾರಚನೆ ಬಜೆಟ್ ಮಂಡನೆಯ ಬಳಿಕ ನಡೆಯಬಹುದು ಎಂಬ ನಿರೀಕ್ಷೆ ವ್ಯಕ್ತಪಡಿಸಿವೆ. ಆದರೆ ಹೈಕಮಾಂಡ್ ಒಪ್ಪಿಗೆ ಕೊಟ್ಟರೆ ಅಧಿವೇಶನಕ್ಕೆ ಮುನ್ನವೇ ಸಿಎಂ ಈ ತೀರ್ಮಾನ ಕೈಗೊಳ್ಳಬಹುದು ಎನ್ನಲಾಗುತ್ತಿದೆ.**

ನೀಡಿದ್ದಾರೆ. ಆದರೆ ತಮ್ಮ ದಿಲ್ಲಿ ಪ್ರವಾಸ ಸಂದರ್ಭದಲ್ಲಿ ಸಿದ್ದರಾಮಯ್ಯ ಈ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ. ಮುಡಾ ನಿವೇಶನ ಹಂಚಿಕೆ ಪ್ರಕರಣ ಕುರಿತು ಇ.ಡಿ. ತನಿಖೆ ಚುರುಕು ಗೊಳಿಸುತ್ತಿರುವ ಬೆನ್ನಲ್ಲೇ ಉದ್ದೇಶಿತ ಈ ಪ್ರಕರಣದಲ್ಲಿ ತಮ್ಮ ಪರ ವಕಾಲತ್ತು ಮಾಡುತ್ತಿರುವ ಹಿರಿಯ ವಕೀಲಅಭಿಷೇಕ್ ಮನು ಸಿಂಘ್ವಿ ಅವರನ್ನು ಮುಖ್ಯ ಮಂತ್ರಿ ಸಿದ್ದರಾಮಯ್ಯ ಭೇಟಿ ಮಾಡಿದರು. ಇದೇ ವೇಳೆ ಹೈಕಮಾಂಡ್ ಭೇಟಿಗೂ ಯತ್ನಿಸಿದರು. ಆದರೆ ಮಹಾರಾಷ್ಟ್ರ, ಝಾರ್ಖಂಡ್ ವಿಧಾನಸಭಾ ಚುನಾವಣೆ ಫಲಿತಾಂಶದ ಹಿನ್ನೆಲೆಯಲ್ಲಿ ಪಕ್ಷದ ರಾಷ್ಟ್ರೀಯ ನಾಯಕರ್ಯಾರೂ ಲಭ್ಯವಿಲ್ಲದ ಕಾರಣ ಭೇಟಿ ಸಾಧ್ಯವಾಗಿಲ್ಲ ಎನ್ನಲಾಗಿದೆ.

## ಡ್ಯಾನ್ಸ್ ವಿಚಾರಕ್ಕೆ ಗಲಾಟೆ 3 ವರ್ಷಗಳ ದ್ವೇಷಕ್ಕೆ ಸೆಕ್ಯೂರಿಟಿ ಗಾರ್ಡ್ ಕೊಲೆ

• ಉದಯವಾಹಿನಿ, ಬೆಂಗಳೂರು

ಗಣೇಶ ಹಬ್ಬದಲ್ಲಿ ಡ್ಯಾನ್ಸ್ ಮಾಡುವ ವಿಚಾರಕ್ಕೆ ಗಲಾಟೆ ನಡೆದಿದ್ದು, ಅದೇ ದ್ವೇಷವಿಟ್ಟುಕೊಂಡುಸೆಕ್ಯೂರಿಟಿ ಗಾಡ್‌ನನ್ನು ಕೊಚ್ಚಿ ಕೊಲೆಗೈದಿರುವ ಘಟನೆ ಬೆಂಗಳೂರು ಗ್ರಾಮಾಂತರದ ದೇವನಹಳ್ಳಿಯಲ್ಲಿ ನಡೆದಿದೆ.

ಮೃತ ವ್ಯಕ್ತಿಯನ್ನು ದೇವನಹಳ್ಳಿ ತಾಲ್ಲೂಕಿನ ಬೋವಿಪಾಳ್ಯದ ನಿವಾಸಿ ಶ್ರೀನಿವಾಸ್ (32) ಎಂದು ಗುರುತಿಸಲಾಗಿದೆ.

ಶ್ರೀನಿವಾಸ್ ಸೆಕ್ಯೂರಿಟಿ ಗಾರ್ಡ್ ಆಗಿ ಕೆಲಸ ಮಾಡುತ್ತಿದ್ದ. ಗೋವಿಂದ್ ಮತ್ತು ಶ್ರೀನಿವಾಸ್ ಮಧ್ಯೆ 3 ವರ್ಷಗಳಿಂದ ಗ್ಯಾಂಗ್ ವಾರ್ ನಡೆಯುತ್ತಿತ್ತು.

ಗ್ರಾಮದಲ್ಲಿ ಹೆಸರು ಮಾಡಬೇಕು ಎಂಬ ಉದ್ದೇಶದಿಂದ ಗೋವಿಂದ್ ಗುಂಪೊಂದನ್ನು ಕಟ್ಟಿಕೊಂಡಿದ್ದ. ಕಳೆದ ವರ್ಷ ಗಣೇಶ ಹಬ್ಬದ ಸಂದರ್ಭದಲ್ಲಿ ಗೋವಿಂದ್ ಮತ್ತು ಶ್ರೀನಿವಾಸ್ ನಡುವೆ ಡ್ಯಾನ್ಸ್ ಮಾಡುವ ವಿಚಾರಕ್ಕೆ ಗಲಾಟೆಯಾಗಿತ್ತು.



ಉದಯವಾಹಿನಿ ಚಿತ್ರ

ಇದೇ ವಿಚಾರ ಹಾಗೂ ಮೂರು ವರ್ಷಗಳ ದ್ವೇಷದಿಂದ ನಾಲ್ವರು ಸ್ನೇಹಿತರು ಸೇರಿ ಬೋವಿಪಾಳ್ಯ ಹೊರವಲಯದ ಎಂಬಾಸಿ ಕಂಪನಿ ಜಾಗದಲ್ಲಿ ಚಾಕು, ಮಚ್ಚಿನಿಂದ ಚುಚ್ಚಿ ಬರ್ಬರವಾಗಿ ಕೊಲೆಮಾಡಿದ್ದಾರೆ.

ಕೊಲೆ ಮಾಡಿದ ನಾಲ್ವರಾದ ಗೋವಿಂದರಾಜು, ತಿಮ್ಮರಾಜು, ಮನೋಜ್, ಮಂಜುನಾಥ್ ಪೊಲೀಸರಿಗೆ ಶರಣಾಗಿದ್ದಾರೆ. ವಿಶ್ವನಾಥಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಟ್ರೋಲ್‌ಗಳಿಗೆ ನಾನು ತಲೆ ಕೆಡಿಸಿಕೊಳ್ಳೊಲ್ಲ: ಮಧು ಬಂಗಾರಪ್ಪ

### ಶಿಕ್ಷಣ ಸಚಿವರಿಗೆ ಕನ್ನಡ ಬರುವುದಿಲ್ಲ ಎಂದಿದ್ದ ವಿದ್ಯಾರ್ಥಿ ವಿರುದ್ಧ ಕ್ರಮಕ್ಕೆ ಸೂಚನೆ

• ಉದಯವಾಹಿನಿ, ಬೆಂಗಳೂರು

ನಾನು ವಿದ್ಯಾರ್ಥಿ ವಿರುದ್ಧ ಕ್ರಮಕ್ಕೆ ಸೂಚನೆ ನೀಡಿಲ್ಲ. ಹೆಡ್ ಮಾಸ್ಟರ್ ಮತ್ತು ಬಿಇಓ ವಿರುದ್ಧ ಕ್ರಮಕ್ಕೆ ಸೂಚನೆ ನೀಡಿದ್ದು ಎಂದು ಹೇಳುವ ಮೂಲಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಯೂಟರ್ನ್ ಹೊಡೆದಿದ್ದಾರೆ. ಶಿಕ್ಷಣ ಸಚಿವರಿಗೆ ಕನ್ನಡ ಬರುವುದಿಲ್ಲ ಎಂದಿದ್ದ ವಿದ್ಯಾರ್ಥಿ ವಿರುದ್ಧ ಕ್ರಮಕ್ಕೆ ಸೂಚನೆ ನೀಡಿದ ವಿಚಾರಕ್ಕೆ ಪ್ರತಿಕ್ರಿಯೆ ನೀಡುವಾಗ ಮತ್ತೆ ಮಾಧ್ಯಮಗಳ ಮೇಲೆ ಗರಂ ಆದರು. ನಾನು ಟ್ರೋಲ್‌ಗೆ ಹೆದರುವುದಿಲ್ಲ.

ವಿದ್ಯಾರ್ಥಿ ವಿರುದ್ಧ ಕ್ರಮ ತೆಗೆದುಕೊಳ್ಳಿ ಎಂದು ನಾನು ಹೇಳಿಲ್ಲ. ಹೆಡ್ ಮಾಸ್ಟರ್, ಬಿಇಓ ವಿರುದ್ಧ ಕ್ರಮ ತೆಗೆದುಕೊಳ್ಳಿ ಅಂತ ಹೇಳಿದ್ದು. ನಾನೇ ಅದನ್ನು ಹೇಳಿದ್ದೇನೆ ಎಂದರು.

ನಾನು ಶಿಕ್ಷಣ ಸಚಿವ. ನಿಮ್ಮ ಮಕ್ಕಳನ್ನ ಶಾಲೆಗೆ ಕಳುಹಿಸುತ್ತೀರಿ. ನಿಮ್ಮ ಮಕ್ಕಳನ್ನು ತಪ್ಪು ಮಾಡೋಕೆ ಬಿಡ್ತೀರಾ ಟ್ರೋಲ್‌ಗಳಿಗೆಲ್ಲಾ ತಲೆಕೆಡಿಸಿಕೊಳ್ಳೋ ಮಧು ಬಂಗಾರಪ್ಪ ಅಲ್ಲ ನಾನು. ಮಕ್ಕಳ

**ಹೆಡ್ ಮಾಸ್ಟರ್, ಬಿಇಓ ವಿರುದ್ಧ ಕ್ರಮ**




ಉದಯವಾಹಿನಿ ಚಿತ್ರ

ಮೇಲೆ ಆಕ್ಷನ್ ತಗೊಳ್ಳೋಕೆ ನಮಗೆ ಅಧಿಕಾರ ಇಲ್ಲ. ನಿಮ್ಮ ಮಕ್ಕಳನ್ನ ಹತೋಟಿಯಲ್ಲಿ ಇಡಬೇಕು ಅಂತ ಹೆಡ್ ಮಾಸ್ಟರ್, ಬಿಇಓ ವಿರುದ್ಧ ಕ್ರಮಕ್ಕೆ ಸೂಚನೆ ನೀಡಿದ್ದೇನೆ. ನಿಮ್ಮ ಮಗ ಹಾಗೆ ಮಾತನಾಡಿದ್ರೆ ನೀವು ಏನ್ ಮಾಡ್ತಿದ್ರಿ ನಾನಾಗಿದ್ರೆ ನನ್ನ ಮಗನ ಜೊತೆ ಮಾತಾಡುತ್ತಿದ್ದೆ ಅಂತ ಮತ್ತೆ ರಾಂಗ್ ಆದ್ರು. ಮಾಧ್ಯಮಗಳು ಸುಮ್ಮನೆ ಇಲ್ಲದೆ ಇರೋದು ತರಬೇಡಿ. ಪದೇ ಪದೇ ಇದನ್ನ ತರೋದು ಮಾಧ್ಯಮಗಳು ಕಿಡಿಕಾರಿದರು. ಮೊಟ್ಟೆ ಕೊಟ್ಟಿರೋ ವಿಚಾರ ಯಾರು ಹೇಳುವುದಿಲ್ಲ . ಶಿಕ್ಷಣ ಸಚಿವರಿಗೆ ಕನ್ನಡ ಬರುವುದಿಲ್ಲ ಎನ್ನುವುದನ್ನು ಹಾಕುತ್ತೀರಿ. 60-70 ಸಾವಿರ ಮಕ್ಕಳು ಇದ್ದಾಗ

> **ಟ್ರೋಲ್ ಮಾಡಿಕೊಂಡು ನನ್ನನ್ನ ಬಗ್ಗಿಸೋಕೆ ಯಾರಿಂದಲೂ ಸಾಧ್ಯವಿಲ್ಲ. ನನ್ನ ವಿರುದ್ಧ 7-8 ತಿಂಗಳಿಂದ ಟ್ರೋಲ್ ನಡೆಯುತ್ತಿದೆ. ಮಕ್ಕಳನ್ನ ಸರಿ ದಾರಿಗೆ ತರಬೇಕು. ಅಂತಹ ಕಾರ್ಯಕ್ರಮದಲ್ಲಿ ಹಾಗೆ ಮಾತಾಡಿದ್ರೆ ಹೇಗೆ ಹೇಳಿ. ನಾಳೆ ಸಿಎಂ, ನ್ಯಾಯಾಧೀಶರ ಕಾರ್ಯಕ್ರಮದಲ್ಲಿ ಇದ್ದಾಗ ಹಾಗೆ ಹೇಳಿದ್ರೆ ಹೇಗೆ. ತಲೆಯಲ್ಲಿ ಏನಾದ್ರು ಇದ್ದರೆ ಟ್ಯಾಕ್ಸ್ ಹಣವನ್ನು ಮಕ್ಕಳಿಗಾಗಿ ಖರ್ಚು ಮಾಡ್ತಿದ್ದೇವೆ. ಅದನ್ನ ಮಾಡಿ ಎಂದರು.**

ಮಾತಾಡೋದು ಮಕ್ಕಳು ಸರಿಯಲ್ಲ. ಇದನ್ನ ಶಾಲೆಯಲ್ಲಿ ಶಿಸ್ತು ತರೋಕೆ ಆಗುತ್ತಾ? ನಾನು ತಂದೆಯಾಗಿ ನಾನು ಇದನ್ನ ಹೇಳ್ತಿದ್ದೇನೆ. ನೀವು ಟ್ರೋಲ್ ಮಾಡಿದ್ರೆ ಪುಕ್ಸಟ್ಟೆ ನನಗೇನು ಆಗಬೇಕಿದೆ. ಮಧು ಬಂಗಾರಪ್ಪ ಮಧು ಬಂಗಾರಪ್ಪನೇ ಆಗಿರುತ್ತಾನೆ ಅಂತ ತಿಳಿಸಿದರು. ಬಿಸಿ ನಾಗೇಶ್ ಅವರು ಮಧು ಬಂಗಾರಪ್ಪಗೆ ಇಲಾಖೆ ಏನು ಗೊತ್ತಿಲ್ಲ ಅಂದರು. ಅದಕ್ಕೆ ನಮ್ಮಂತ ದಡ್ಡರನ್ನ ಹೈ ಲೀಡ್ ನಲ್ಲಿ ಗೆಲ್ಲಿಸಿ ಅವರನ್ನ ಸೋಲಿಸಿದ್ದಾರೆ. ಸಭಾಪತಿ

> **ನನಗೆ ಕನ್ನಡ ಬರಲ್ಲ ಅಂದರೆ ನೀವು ಹೇಳಿಕೊಟ್ರೆ ನಾನೇನು ಉದ್ದಾರ ಆಗಲ್ಲ. ನನ್ ರಕ್ತದಲ್ಲಿ ಕನ್ನಡ ಇದೆ. ನಾವು ಚಿಕ್ಕವರು ಇದ್ದಾಗ ನಮಗೆ ಹೇಳಿ ಕೊಟ್ಟಿದ್ದೇ ಇಷ್ಟು. ನಾನು ನಿಮಗೆ ಎಕ್ಸಾಂ ಮಾಡ್ತೀನಿ. 1 ರಾಂಕ್ ನಿಂದ 30 ರಾಂಕ್ ಬರ್ತಿರಾ. 30 ರಾಂಕ್ ಇರೋನು ಕೆಟ್ಟೋನು ಅಂತೀರಾ. ಇದೆಲ್ಲ ಬಿಟ್ಟು ಬಿಡಬೇಕು. ಇದೆಲ್ಲ ಸಾಕು ಅಂತ ಮಾಧ್ಯಮಗಳ ಮೇಲೆ ಕಿಡಿಕಾರಿದರು.**

ಹೊರಟ್ಟಿ ಅವರು ನನಗೆ ಕರೆ ಮಾಡಿ ಒಳ್ಳೆ ಕೆಲಸ ಮಾಡಿದ್ದೀಯಾ ಅಂದರು. ನನ್ನ ಜವಾಬ್ದಾರಿ ನಾನು ಮಾಡಿದ್ದೇನೆ. ಟ್ರೋಲ್ ಮಾಡಿದವರು ನಿಮ್ಮ ಮಕ್ಕಳು ಹೀಗೆ ಮಾಡಿದ್ರೆ ಏನ್ ಮಾಡ್ತೀರಾ ಯೋಚನೆ ಮಾಡಿ. ಸಿದ್ದರಾಮಯ್ಯ ಕೊಟ್ಟ ಜವಾಬ್ದಾರಿ ನಾನು ನನ್ನ ಮಕ್ಕಳನ್ನ ನೋಡಿಕೊಂಡಂತೆ ಶಾಲಾ ಮಕ್ಕಳನ್ನು ನೋಡಿಕೊಳ್ತೀನಿ. ಇನ್ನು ಮೇಲೆ ಇದೆಲ್ಲ ರಬ್ಬಿಶ್ ಅನ್ನ ನಿಲ್ಲಿಸಿ ಸಾಕು ಇದು ಸರಿಯಲ್ಲ ಅಂತ ಮಾಧ್ಯಮಗಳ ಮೇಲೆ ಕಿಡಿಕಾರಿದರು.

# ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಗೆಲ್ಲಲಿದೆ: ಡಿಸಿಎಂ ಡಿಕೆಶಿ ವಿಶ್ವಾಸ

## ಬೆಂಗಳೂರಿಗೆ ಮರಳುವ ಮುನ್ನ ಮುರುಡೇಶ್ವರ ಗಾಲ್ಫ್ ಕ್ಲಬ್‌ನ ಹೆಲಿಪ್ಯಾಡ್ ಬಳಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ

• ಉದಯವಾಹಿನಿ, ಚನ್ನಪಟ್ಟಣ

ನಿಮ್ಮ ಎಕ್ಸಿಟ್ ಪೋಲ್ ಫಲಿತಾಂಶಗಳೆಲ್ಲಾ ತಲೆಕೆಳಗಾಗುತ್ತವೆ. ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಲಿದ್ದಾರೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದರು. ಬೆಂಗಳೂರಿಗೆ ಮರಳುವ ಮುನ್ನ ಮುರುಡೇಶ್ವರ ಗಾಲ್ಫ್ ಕ್ಲಬ್‌ನ ಹೆಲಿಪ್ಯಾಡ್ ಬಳಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು. ಉಪಚುನಾವಣೆ ಫಲಿತಾಂಶ ನಾಳೆ ಪ್ರಕಟವಾಗುತ್ತಿದ್ದು, ಮಹಾರಾಷ್ಟ್ರ ಚುನಾವಣೋತ್ತರ ಸಮೀಕ್ಷೆ ಕುರಿತು ಬಗ್ಗೆ ಕೇಳಿದಾಗ, ನಾವು ಅಲ್ಲಿಯೂ ಗೆದ್ದೇ ಗೆಲ್ಲುತ್ತೇವೆ ಎನ್ನುವ ಆತ್ಮವಿಶ್ವಾಸವಿದೆ. ನನಗೆ ಆ ರಾಜ್ಯದ ಬಗ್ಗೆ ಹೆಚ್ಚು ತಿಳುವಳಿಕೆ ಇಲ್ಲ, ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಸರಳ ಬಹುಮತ ಪಡೆದು ಸರ್ಕಾರ ರಚನೆ ಮಾಡುತ್ತೇವೆ ಎಂದು ಹೇಳಿದ್ದಾರೆ. ನಾನು ಕೂಡ ಪ್ರಚಾರಕ್ಕೆ ಹೋಗಿದ್ದೆ, ಆಗ ಕಾಂಗ್ರೆಸ್ ಪರ ಅಲೆ ಕಂಡಿತು. ಆದರೆ ಮತ ಪೆಟ್ಟಿಗೆಯಲ್ಲಿ ಏನಿದೆ ಎಂಬುದು ಯಾರಿಗೂ ತಿಳಿಯುವುದಿಲ್ಲ, ಜಾರ್ಖಂಡ್ ಬಗ್ಗೆ ಗೊತ್ತಿಲ್ಲ ಎಂದು ಹೇಳಿದರು.

**ಚನ್ನಪಟ್ಟಣದಲ್ಲಿ ಗೆಲುವು ಖಂಡಿತ**

ಎಲ್ಲಾ ಎಕ್ಸಿಟ್ ಪೋಲ್‌ಗಳು ಚನ್ನಪಟ್ಟಣದಲ್ಲಿ ಕಾಂಗ್ರೆಸ್‌ಗೆ ಸೋಲು, ಜಮೀರ್ ಅವರ ಮೈ ಬಣ್ಣ ಹೇಳಿಕೆ ಪರಿಣಾಮ ಬೀರಿದೆ ಎನ್ನುವ ಬಗ್ಗೆ ಕೇಳಿದಾಗ, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕೇವಲ 16 ಸಾವಿರ ಮತಗಳು ಮಾತ್ರ ದೊರಕಿದ್ದವು. ಆದರೆ ಈ ಬಾರಿ ಗೆದ್ದೇ ಗೆಲ್ಲುತ್ತೇವೆ ಎನ್ನುವ ಆತ್ಮವಿಶ್ವಾಸ ನನಗಿದೆ. ರಾಮನಗರದಲ್ಲಿ ಇಕ್ಬಾಲ್ ಹುಸೇನ್, ಮಾಗಡಿಯಲ್ಲಿ ಬಾಲಕೃಷ್ಣ, ಕನಕಪುರದಲ್ಲಿ ನಾನು ಗೆದ್ದಿದ್ದೆವು. ಚನ್ನಪಟ್ಟಣದಲ್ಲಿ ಮಾತ್ರ ಗೆದ್ದಿರಲಿಲ್ಲ, ಈ ಬಾರಿ ಗೆಲುವು ಖಂಡಿತ ಎಂದರು.

**ಜಮೀರ್ ತಪ್ಪಿನ ಅರಿವಾಗಿ ಕ್ಷಮೆ ಕೇಳಿದ್ದಾರೆ**



ಕುಮಾರಸ್ವಾಮಿ ಅವರ ಮೈ ಬಣ್ಣದ ಬಗ್ಗೆ ಮಾತನಾಡಿದ ಸಚಿವ ಜಮೀರ್ ಅವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಂಡಿಲ್ಲ, ಅವರ ಹೇಳಿಕೆ ಕುರಿತು ಪ್ರಶ್ನೆಗೆ ಅಸಮಾಧಾನ ಇರುವ ಬಗ್ಗೆ ಕೇಳಿದಾಗ, ಜಮೀರ್ ಅವರು ಉತ್ತಮ ಕೆಲಸಗಾರ. ಇದು ಪಕ್ಷದ ಆಂತರಿಕ ವಿಚಾರ. ಅವರಿಗೆ ಈ ಬಗ್ಗೆ ಬುದ್ಧಿ ಹೇಳಲಾಗಿದೆ. ಅವರು ಆತುರವಾಗಿ ಒಂದು ಹೇಳಿಕೆ ಕೊಟ್ಟಿದ್ದಾರೆ. ಇದು ತಪ್ಪು ಎಂದು ನಾವು ಹೇಳಿದ್ದೇವೆ. ಪಕ್ಷದ ಅಧ್ಯಕ್ಷನಾಗಿ ನಾನೇ ಅವರಿಗೆ ಬುದ್ಧಿ ಹೇಳಿದ್ದೇನೆ. ನನ್ನ ಹೊರತಾಗಿ ಮತ್ತಿನ್ನಾರು ಅವರಿಗೆ ಬುದ್ಧಿವಾದ ಹೇಳಬೇಕು ಜಮೀರ್ ಅವರು ಈಗಾಗಲೇ ಅವರ ಹೇಳಿಕೆಯ ಬಗ್ಗೆ ಕ್ಷಮೆ ಕೇಳಿದ್ದಾರೆ. ಅವರಿಗೆ ತಮ್ಮ ತಪ್ಪಿನ ಅರಿವಾಗಿದೆ ಎಂದರು.

> ಇಲ್ಲಿನ ಸಮುದ್ರ, ಕಿನಾರೆಗಳು ಗೋವಾಕ್ಕಿಂತ ಹೆಚ್ಚು ಸುಂದರವಾಗಿದೆ. ಅದಕ್ಕಾಗಿ ಸ್ವತಃ ಕಣ್ಣಾರೆ ನೋಡಲು ಬಂದೆ. ನಾನು ಕಿವಿಗಳಿಗಿಂತ ಹೆಚ್ಚು ಕಣ್ಣನ್ನು ನಂಬುತ್ತೇನೆ. ಸ್ಕೂಬಾ ಡೈವಿಂಗ್ ಮಾಡಿದೆ. ಮೀನುಗಾರಿಕೆ ಸಚಿವರಾದ ಮಂಕಾಳ ವೈದ್ಯ, ಶಾಸಕ ಭೀಮಣ್ಣ ನಾಯ್ಕ ಇದ್ದರು ಎಂದರು. ಸಂಪುಟ ವಿಸ್ತರಣೆಯ ಬಗ್ಗೆ ಊಹಾಪೋಹಗಳು ಹರಡಿರುವ ಬಗ್ಗೆ ಕೇಳಿದಾಗ, ನಾನು ಮುಖ್ಯಮಂತ್ರಿ ಅಲ್ಲ, ಸಿದ್ದರಾಮಯ್ಯನವರು ನಮ್ಮ ಮುಖ್ಯಮಂತ್ರಿ. ಅವರು ಇದರ ಬಗ್ಗೆ ಉತ್ತರ ಹೇಳುತ್ತಾರೆ ಎಂದರು.

> ನಾನು 15-20 ವರ್ಷಗಳ ಹಿಂದೆ ಬ್ಯಾಂಕಾಕ್‌ಗೆ ಹೋಗಿದ್ದ ವೇಳೆ ಗಮನಿಸಿದಂತೆ ಅಲ್ಲಿನ ಯುವಕರಿಗಿಂತ ನಮ್ಮ ಕರಾವಳಿಯ ಹುಡುಗರು ಹೆಚ್ಚು ಕ್ರಿಯಾಶೀಲವಾಗಿದ್ದಾರೆ. ಇಲ್ಲಿ ಅಂತರರಾಷ್ಟ್ರೀಯ ಮಟ್ಟದ ಅನುಕೂಲತೆ ನೀಡುವಂತಹ ವಾತಾವರಣ ಇದೆ. ಈ ಕಾರಣಕ್ಕಾಗಿ ಇಲ್ಲಿ ಉಳಿದುಕೊಂಡು ಅನುಕೂಲತೆಗಳನ್ನು ವೀಕ್ಷಣೆ ಮಾಡಿದೆ ಎಂದರು.

**ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ಜಾರಿಗೆ ಚರ್ಚೆ**

ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ಕುರಿತು ಮುಖ್ಯಮಂತ್ರಿಗಳು ಹಾಗೂ ಸಚಿವರಾದ ಎಚ್.ಕೆ. ಪಾಟೀಲ್ ಅವರ ಬಳಿ ಚರ್ಚೆ ಮಾಡಲಾಗುವುದು. ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲಾಗುವುದು. ಕರಾವಳಿಯ ಪ್ರಕೃತಿ ಸಂಪತ್ತು ಸದ್ಬಳಕೆಯಾಗಬೇಕು. ಬಂಡವಾಳ ಹೂಡಿಕೆದಾರರು ಬಂದರೆ ಉತ್ತಮ ರೀತಿಯಲ್ಲಿ ಉದ್ಯೋಗ ಸೃಷ್ಟಿಯಾಗುತ್ತದೆ. ಇದರಿಂದ ಜನರಿಗೆ ಅನುಕೂಲವಾಗುತ್ತದೆ ಎಂದರು.

# ತುಮಕೂರಿನಲ್ಲಿ ದಲಿತ ಮಹಿಳೆ ಡಾಬಾ ಹೊನ್ನಮ್ಮ ಹತ್ಯೆ ಪ್ರಕರಣ

• ಉದಯವಾಹಿನಿ, ತುಮಕೂರು



ಗೋಪಾಲಪುರ ಡಾಬಾ ಹೊನ್ನಮ್ಮ ಹಂತಕರಿಗೆ ಜೀವಾವಧಿ ಶಿಕ್ಷೆ ವಿಧಿಸಿ ತುಮಕೂರು ಜಿಲ್ಲಾ 3ನೇ ಅಧಿಕ ಮತ್ತು ಸತ್ರ ನ್ಯಾಯಾಲಯ ಆದೇಶಿಸಿದೆ. 2010ರಲ್ಲಿ ನಡೆದಿದ್ದ ಹತ್ಯೆ ಪ್ರಕರಣದಲ್ಲಿ ಒಂದೇ ಗ್ರಾಮದ 21 ಆರೋಪಿಗಳ ಅಪರಾಧ ಸಾಬೀತಾಗಿದ್ದು, ನ್ಯಾಯಾಲಯ ಶಿಕ್ಷೆ ಪ್ರಕಟಿಸಿದೆ.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗೋಪಾಲಪುರದಲ್ಲಿ 2010 ಜೂನ್ 28ರಂದು ಡಾಬಾ ಹೊನ್ನಮ್ಮ ಎಂಬ 45 ವರ್ಷದ ದಲಿತ ಮಹಿಳೆಯ ಬರ್ಬರ ಹತ್ಯೆಯಾಗಿತ್ತು. 27 ಮಂದಿ ಗ್ರಾಮಸ್ಥರು ಸೇರಿ ಜಾತಿನಿಂದನೆ ಮಾಡಿ, ಕಲ್ಲು ಎತ್ತಿಹಾಕಿ ಹತ್ಯೆಗೈದಿದ್ದರು. ಅವರಲ್ಲಿ 6 ಮಂದಿ ಈಗಾಗಲೇ ಮೃತಪಟ್ಟಿದ್ದು, ಇಬ್ಬರು ಮಹಿಳೆಯರು ಸೇರಿದಂತೆ 21 ಮಂದಿಗೆ ತಲಾ 13,500 ರೂ.ನಂತೆ 2.83 ಲಕ್ಷ ರೂ. ದಂಡ ಹಾಗೂ ಜೀವಾವಧಿ ಶಿಕ್ಷೆ ವಿಧಿಸಿ ನ್ಯಾಯಾಧೀಶ ಎ.ನಾಗಿರೆಡ್ಡಿ ಗುರುವಾರ ಆದೇಶಿಸಿದ್ದಾರೆ.


ಗೋಪಾಲಪುರದಲ್ಲಿ ಡಾಬಾ ನಡೆಸುತ್ತಿದ್ದ ಹೊನ್ನಮ್ಮ ಎಂಬ ದಲಿತ ಮಹಿಳೆ ಎರಡು ಬಾರಿ ಗ್ರಾಪಂ ಚುನಾವಣೆಗೆ ಸ್ಪರ್ಧಿಸಿ ಸೋತಿದ್ದರು. ಗ್ರಾಮದಲ್ಲಿ ದೇವಾಲಯ ನಿರ್ಮಿಸಲು ಸಂಗ್ರಹಿಸಿಟ್ಟಿದ್ದ ಮರದ ತುಂಡುಗಳನ್ನು ಕೆಲವರು ಕಳವು ಮಾಡಿದ್ದರು. ಆ ಬಗ್ಗೆ ಆಕೆ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಆಗ ಗ್ರಾಮಸ್ಥರು ಮತ್ತು ಹೊನ್ನಮ್ಮ ನಡುವೆ ದ್ವೇಷ ಉಂಟಾಗಿತ್ತು. 2010 ಜೂನ್ 28ರಂದು ಗ್ರಾಮದ 27 ಮಂದಿ ಜಾತಿ ನಿಂದನೆ ಮಾಡಿ, ಆಕೆಯ ಮೇಲೆ ಕಲ್ಲು ಎತ್ತಿಹಾಕಿ, ಹಳ್ಳಕ್ಕೆ ನೂಕಿ ಹತ್ಯೆಗೈದಿದ್ದರು. ಅದೇ ದಿನ ರಾತ್ರಿ ಹಂದನಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಹುಳಿಯಾರು ಗ್ರಾಮದಿಂದ ಮನೆಗೆ ತೆರಳುತ್ತಿದ್ದಾಗ ಕೊಲೆ ನಡೆದಿತ್ತು. ಹತ್ಯೆಗೆ 15 ದಿನಗಳ ಮೊದಲು ತನ್ನ ಜೀವಕ್ಕೆ ಅಪಾಯವಿದೆ ಎಂದು ಹಂದನಕೆರೆ ಪೊಲೀಸ್ ಠಾಣೆಗೆ ಹೊನ್ನಮ್ಮ ದೂರು ನೀಡಿದ್ದರು. ಹೀಗಾಗಿ ಕರ್ತವ್ಯ ಲೋಪದ ಹಿನ್ನೆಲೆಯಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಸೇರಿದಂತೆ ಇಬ್ಬರು ಪೊಲೀಸರು ಆ ವೇಳೆ ಅಮಾನತುಗೊಂಡಿದ್ದರು. ಅಂದಿನ ಡಿವೈಎಸ್‌ಪಿ ಶಿವರುದ್ರಸ್ವಾಮಿ ತನಿಖೆ ನಡೆಸಿ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಹೊನ್ನಮ್ಮ ಮೃತದೇಹದ ಮೇಲೆ 27 ಮಾರಣಾಂತಿಕ ಗಾಯಗಳಾಗಿತ್ತು ಎಂದು ವೈದ್ಯರು ದೃಢೀಕರಿಸಿದ್ದರು. ಸುದೀರ್ಘ 14 ವರ್ಷಗಳ ಕಾಲ ವಾದ-ಪ್ರತಿವಾದ ಆಲಿಸಿ, ವಿಚಾರಣೆ ನಡೆಸಿದ ನ್ಯಾಯಾಲಯ 21 ಅಪರಾಧಿಗಳಿಗೆ ಶಿಕ್ಷೆ ಪ್ರಕಟಿಸಿದೆ.

> ಗ್ರಾಮಸ್ಥರ ವಿರುದ್ಧ ದೂರು ನೀಡಿದ್ದ ಹೊನ್ನಮ್ಮ ಎರಡು ಬಾರಿ ಗ್ರಾಪಂ ಚುನಾವಣೆಗೆ ಸ್ಪರ್ಧಿಸಿ ಸೋತಿದ್ದ ಹೊನ್ನಮ್ಮ ದೇವಸ್ಥಾನ ನಿರ್ಮಾಣಕ್ಕೆ ಮುಂದಾಗಿದ್ದರು. ಅದಕ್ಕಾಗಿ ಸಂಗ್ರಹಿಸಿಟ್ಟಿದ್ದ ಮರದ ದಿಮ್ಮಿಗಳು ಕಳುವಾದಾಗ ಕೆಲವು ಗ್ರಾಮಸ್ಥರ ವಿರುದ್ಧ ದೂರು ನೀಡಿದ್ದರು. ಅವತ್ತಿಂದ ಗ್ರಾಮಸ್ಥರು ಹಾಗೂ ಹೊನ್ನಮ್ಮ ನಡುವೆ ಮನಸ್ತಾಪ ಮೂಡಿತ್ತು. ಹುಳಿಯಾರು ಗ್ರಾಮದಿಂದ ಮನೆಗೆ ನಡೆದುಕೊಂಡು ಹೋಗುತ್ತಿದ್ದಾಗ 25ಕ್ಕೂ ಹೆಚ್ಚು ಮಂದಿ ಆಕೆಯ ಮೇಲೆ ಕಲ್ಲುಗಳಿಂದ ಮಾರಣಾಂತಿಕ ಹಲ್ಲೆ ನಡೆಸಿ ಹತ್ಯೆಗೈದು ಚರಂಡಿಗೆ ಶವ ಎಸೆದಿದ್ದರು. ಆಕೆಯ ದೇಹದ ಮೇಲೆ 27 ಮಾರಣಾಂತಿಕ ಗಾಯಗಳಾಗಿದ್ದವು ಎಂಬುದನ್ನು ವೈದ್ಯರು ದೃಢಪಡಿಸಿದ್ದರು. ನ್ಯಾಯಾಲಯ ಅಪರಾಧಿಗಳಿಗೆ ಜೀವಾವಧಿ ಶಿಕ್ಷೆ ವಿಧಿಸಿದೆ ಎಂದು ಸರಕಾರಿ ಅಭಿಯೋಜಕಿ ಬಿ.ಎಸ್. ಜ್ಯೋತಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಜಾನುವಾರು ಗಣತಿಗೆ ವೇಗ

• ಉದಯವಾಹಿನಿ, ಕೋಲಾರ


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ 21ನೇ ಜಾನುವಾರುಗಳ ಗಣತಿಗೆ ವೇಗ ಲಭಿಸಿದ್ದು, ಸಿಬ್ಬಂದಿ ಮನೆಮನೆಗೆ ಹೋಗಿ ದನ, ಎತ್ತು ಎಮ್ಮೆ, ಕುರಿ, ಮೇಕೆ, ಕತ್ತೆ, ಹಂದಿ, ನಾಯಿ, ಕುದುರೆ, ಬಾತುಕೋಳಿ, ಮೊಲಗಳ ಎಣಿಕೆಯಲ್ಲಿ ತೊಡಗಿದ್ದಾರೆ. ಕೇಂದ್ರ ಪಶುಸಂಗೋಪನೆ ಮತ್ತು ಹೈನುಗಾರಿಕೆ ಇಲಾಖೆ ಅನುದಾನದಲ್ಲಿ ಗಣತಿ ನಡೆಸಲಾಗುತ್ತಿದ್ದು, ಮೊಬೈಲ್ ಆ್ಯಪ್‌ನಲ್ಲಿ ದತ್ತಾಂಶ ಸಂಗ್ರಹ ಮಾಡಲಾಗುತ್ತಿದೆ.

ಇದರಿಂದಾಗಿ ಜಿಲ್ಲೆಯ ಜಾನುವಾರುಗಳ ಸಂಪೂರ್ಣ ಚಿತ್ರಣ ಸಿಗಲಿದೆ. ಇದಕ್ಕಾಗಿ ಕೇಂದ್ರ ಪಶು ಇಲಾಖೆಯು 'ಲೈವ್‌ಸ್ಟಾಕ್ ಸೆನ್ಸಸ್' ಎಂಬ ಆಯಪ್ ಅಭಿವೃದ್ಧಿಪಡಿಸಿದೆ. ಈ ಮೂಲಕ ಈ ಬಾರಿ ಡಿಜಿಟಲ್ ಸ್ಪರ್ಶ ನೀಡಲಾಗಿದೆ. ಹಿಂದೆಲ್ಲಾ ನೋಟ್ ಪುಸ್ತಕದಲ್ಲಿ ನಮೂದಿಸುತ್ತಿದ್ದರಿಂದ ವ್ಯತ್ಯಾಸವಾಗುತಿತ್ತು. ಜಾನುವಾರುಗಳ ಲಿಂಗ, ವಯಸ್ಸು, ಆರೋಗ್ಯದ ಸ್ಥಿತಿಗತಿ, ಯಾವ ತಳಿ, ಸಾಕುತ್ತಿರುವ ರೈತ ಕುಟುಂಬಗಳ ವಿವರವನ್ನು ಆ್ಯಪ್‌ನಲ್ಲೇ ದಾಖಲಿಸಲಾಗುತ್ತಿದೆ.

'ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಅಕ್ರಂ ಪಾಷಾ ಅವರು ಜಾನುವಾರು ಗಣತಿಗೆ ಚಾಲನೆ ನೀಡಿದ್ದಾರೆ. ಜನರಿಂದ ಉತ್ತಮ ಸ್ಪಂದನೆ ಸಿಗುತ್ತಿದೆ. ಗ್ರಾಮಾಂತರ ಹಾಗೂ ನಗರ ಪ್ರದೇಶದಲ್ಲಿ ಮನೆಮನೆಗೆ ಹೋಗಿ ಜಾನುವಾರುಗಳ ದತ್ತಾಂಶ ಸಂಗ್ರಹಿಸುತ್ತಿದ್ದಾರೆ. ನಮ್ಮ ಎಲ್ಲಾ ಸಹಾಯಕ ನಿರ್ದೇಶಕರು, ಸಿಬ್ಬಂದಿ ಸಹಕಾರ ನೀಡುತ್ತಿದ್ದಾರೆ' ಎಂದರು.

> ಪ್ರತಿ ಐದು ವರ್ಷಕ್ಕೊಮ್ಮೆ ಜಾನುವಾರು ಗಣತಿ ನಡೆಯಲಿದ್ದು, ಈ ಹಿಂದೆ 2019ರಲ್ಲಿ 20ನೇ ಗಣತಿ ನಡೆದಿತ್ತು. 'ಅ.25ರಂದು ಜಾನುವಾರು ಗಣತಿ ಆರಂಭವಾಗಿದ್ದು, ಫೆ.25ರವರೆಗೆ ನಡೆಯಲಿದೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ ನಡೆಯುತ್ತಿದ್ದು, ಪಶುಪಾಲನಾ ವಲಯದ ಯೋಜನೆ ಹಾಗೂ ನೀತಿ ರೂಪಿಸಲು ಜಾನುವಾರು ಅಂಕಿಅಂಶಗಳು ಸಹಾಯವಾಗುತ್ತದೆ' ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಉಪನಿರ್ದೇಶಕ(ಆಡಳಿತ) ಡಾ.ಗಂಗಾ ತುಳಸಿ ರಾಮಯ್ಯ ತಿಳಿಸಿದರು.

# ಹಾಲು ಉತ್ಪಾದಕರ ಸಂಘದಲ್ಲಿ ಅವ್ಯವಹಾರ ಆರೋಪ

• ಉದಯವಾಹಿನಿ, ಬಂಗಾರಪೇಟೆ

ಐನೋರಹೊಸಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪ ದಿನಕ್ಕೊಂದು ತಿರುವು ಪಡೆಯುತ್ತಿದ್ದು, ಈ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಗುರುವಾರ ಆಡಳಿತ ಮಂಡಳಿಯ 9 ನಿರ್ದೇಶಕರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದರು. ತಾಲ್ಲೂಕಿನ ಐನೋರಹೊಸಹಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಕಳದ ಹತ್ತು ತಿಂಗಳಲ್ಲಿ ರೂ.3.38 ಲಕ್ಷ ಹಣವನ್ನು ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ ಮಂಗಳವಾರ ಪ್ರತಿಭಟನೆ ನಡೆಸಿದ ರೈತ ಸಂಘದ ಸದಸ್ಯರು ಸೂಕ್ತ ತನಿಖೆಗೆ ಆಗ್ರಹಿಸಿದ್ದರು. ಇದರ ಬೆನ್ನಲ್ಲೇ ಸಂಘದ ಅಧ್ಯಕ್ಷ ಮತ್ತು


ಉದಯವಾಹಿನಿ ಚಿತ್ರ

ಕಾರ್ಯದರ್ಶಿ ಸಂಘದಲ್ಲಿ ಯಾವುದೇ ಅವ್ಯವಹಾರ ನಡೆದಿಲ್ಲ ಎಂದು ಬುಧವಾರ ಸ್ಪಷ್ಟನೆ ನೀಡಿದ್ದರು. ಘಟನೆಗೆ ಸಂಬಂಧಿಸಿದಂತೆ ಗುರುವಾರ ಮತ್ತೊಂದು ಘಟನೆ ನಡೆದಿದ್ದು, ಸಂಘದಲ್ಲಿ ಅವ್ಯವಹಾರ ನಡೆದಿರುವುದು ನಿಜ ಅದನ್ನು ಸೂಕ್ತ ರೀತಿಯಲ್ಲಿ ತನಿಖೆ ಮಾಡಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿ, ಸಂಘದ ಉಪಾಧ್ಯಕ್ಷ ನಾಗರಾಜ ರೆಡ್ಡಿ. ಆಡಳಿತ ಮಂಡಳಿಯ ನಿರ್ದೇಶಕರಾದ ಜಗದೀಶ್, ರಾಜಣ್ಣ, ಪ್ರಸಾದ್, ಮಾಲಾ, ಚಂದ್ರಪ್ಪ, ಪಾರ್ವತಮ್ಮ ರತ್ನಮ್ಮ ಮತ್ತು ಶಾರದ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಸಂಘದ ಕಾರ್ಯದರ್ಶಿಗೆ ಒಪ್ಪಿಸಿದರು.

ಸಂಘದ ನಿರ್ದೇಶಕ ಜಗದೀಶ್ ಮಾತನಾಡಿ, ಸಂಘದಲ್ಲಿ ಕಳೆದ ಐದು ವರ್ಷಗಳಿಂದ ಅವ್ಯವಹಾರ ನಡೆದಿರುವುದು ನಿಜ. ನಕಲಿ ಸಹಿ ಮಾಡುವ ಮೂಲಕ ಸಂಘದ ಕಾರ್ಯದರ್ಶಿ ಬೇರೆಯವರಿಗೆ ಹಣ ವರ್ಗಾವಣೆ ಮಾಡಿದ್ದಾರೆ. ಇದರಿಂದ ಸಂಘಕ್ಕೆ ಲಕ್ಷಾಂತರ ರೂಪಾಯಿಗಳ ನಷ್ಟ ಉಂಟಾಗಿದೆ. ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಪ್ರಯೋಜನವಾಗಿಲ್ಲ. ಶಿವಮೊಗ್ಗ ಅವ್ಯವಹಾರದ ಬಗ್ಗೆ ರೈತ ಸಂಘದ ಜಿಲ್ಲಾಧ್ಯಕ್ಷ ರಾಮೇಗೌಡರಿಗೆ ತಿಳಿಸಿದಾಗ ರೈತ ಸಂಘದ ಸದಸ್ಯರು ರೈತರ ಪರವಾಗಿ ಪ್ರತಿಭಟನೆ ಮಾಡಿ ತನಿಖೆಗೆ ಒತ್ತಾಯ ಮಾಡಿದ್ದಾರೆ. ಸಂಘದಲ್ಲಿ ಆಡಳಿತ ಮಂಡಳಿಗೆ ಯಾವುದೇ ಮಾಹಿತಿ ನೀಡದೇ ಮತ್ತು ಸಭೆಯಲ್ಲಿ ತೀರ್ಮಾನಿಸಿದೆ, ಹಣಕಾಸಿನ ಅವ್ಯವಹಾರ ನಡೆದಿದೆ. ಈ ಬಗ್ಗೆ ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ, ಹಣ ದುರ್ಬಳಕೆ ಮಾಡಿಕೊಂಡವರ ವಿರುದ್ಧ ಕ್ರಮ ಜರುಗಿಸಿ ಬಡ ರೈತರಿಗೆ ನ್ಯಾಯ ಕೊಡಿಸಬೇಕೆಂದು ಒತ್ತಾಯಿಸಿ 9 ನಿರ್ದೇಶಕರು ರಾಜೀನಾಮೆ ನೀಡಿದ್ದೇವೆ ಎಂದರು.

# ಯಡಿಯೂರಪ್ಪ ತಮ್ಮ ಮಗನನ್ನು ಸಿಎಂ ಮಾಡಲು ಹೊರಟಿದ್ದಾರೆ

• ಉದಯವಾಹಿನಿ, ಮೈಸೂರು



ಬಿಎಸ್ ಯಡಿಯೂರಪ್ಪ ಮಗನನ್ನು ಸಿಎಂ ಮಾಡಲು ಹೊರಟಿದ್ದಾರೆ. ವಿಜಯೇಂದ್ರನಿಗೆ ಏನು ರೈಟ್ಸ್ ಇದೆ. ಅವನ ಹೇಳಿಕೆಯನ್ನು ನೀವು ಹಾಕಲೇಬಾರದು ಎಂದು ಸಿಎಂ ಸಿದ್ದರಾಮಯ್ಯ ಕಿಡಿಕಾರಿದರು.

ಮೈಸೂರಿನಲ್ಲಿ ಮಾತನಾಡಿದ ಅವರು, 5 ರಿಂದ 10 ಕೆಜಿ ಅಕ್ಕಿ ಮಾಡಿದ್ದು ನಾವು. ನಾವು ಕೊಟ್ಟ 7 ಕೆಜಿ ಅಕ್ಕಿಯನ್ನು, ಯಡಿಯೂರಪ್ಪ 5 ಕೆಜಿಗೆ ಇಳಿಸಿದ್ರು. ಮತ್ತೆ 10ಕೆಜಿ ಕೊಟ್ಟಿದ್ದು ನಾವು, ಐಟಿ ಕಟ್ಟುವವರಿಗೆ ಅಕ್ಕಿ ಯಾಕೇ ಕೊಡಬೇಕು. ಅಶೋಕ್ ಫೋಟೋ ತೆಗೆಸಿ ಕೊಂಡಿದ್ದೇ ತೆಗೆಸಿಕೊಂಡಿದ್ದು. ಫುಡ್ ಸೆಕ್ಯೂರಿಟಿ ಆಕ್ಟ್ ಬಗ್ಗೆ ಅವರು ಆಲೋಚನೆ ಮಾಡಿಲ್ಲ. ಕಾಂಗ್ರೆಸ್ ನವರು ಪಾಪಿಗಳು ಅಂಥಾರೆ, ಅವರಾ ಪಾಪಿಗಳು ನಾವಾ ಎಂದು ಹೇಳಿದರು. ನಿರ್ಮಾಲಾ ಸೀತಾರಾಮಾನ್‌ಗೆ ಎಲ್ಲವನ್ನೂ ಹೇಳಿದ್ದೇನೆ. ಐದು ವರ್ಷದಿಂದ ಹೆಚ್ಚು ಮಾಡಿಕೊಂಡು ಬಂದು ಬಾರಿ ಏಕಾಏಕಿ 58% ಕಡಿತ ಮಾಡಿದರೆ ಹೇಗೆ ಎಂದು ಹೇಳಿದ್ದೇನೆ. ರೈತರಿಗೆ ಅನ್ಯಾಯ ಮಾಡಿದ್ದು ಸರಿ ಅಂಥ ಪ್ರಹ್ಲಾದ್ ಜೋಶಿ ಹೇಳುತ್ತಿದ್ದಾರೆ. ಕುಮಾರಸ್ವಾಮಿ ರೈತರ ಮಗ ಮಣ್ಣಿನ ಮಗ ಏನು ಮಾಡುತ್ತಿದ್ದಾರೆ, ನಿರ್ಮಲಾ ಸೀತಾರಾಮನ್‌ಗೆ ನಬಾರ್ಡ್ ಅಧಿಕಾರಿಗಳ ಜೊತೆ ಮಾತನಾಡಲು ಹೇಳುತ್ತೇನೆ. ಬಿಜೆಪಿ ಅವರು ಮಾಡುವುದನ್ನು ತೋರಿಸಲೇಬಾರದು. ಜನರಿಗೆ ಸತ್ಯವನ್ನು ತೋರಿಸಿ. ಅದಾನಿಗೆ ವಾರೆಂಟ್ ಕೊಟ್ಟಿದ್ದಾರೆ. ವಾರೆಂಟ್ ಕೊಟ್ಟ ಮೇಲೆ ಅವರನ್ನು ಅರೆಸ್ಟ್ ಮಾಡಲೇಬೇಕು, ದೇಶದ ಗೌರವ ಹೋಗಿದೆ. ಇವರಿಗೆ ಸಪೋರ್ಟ್ ಮಾಡುತ್ತಿರುವುದು ಬಿಜೆಪಿ ಎಂದು ಹೇಳಿದರು.

> ನನ್ನ ಪ್ರಕಾರ ಮಹಾರಾಷ್ಟ್ರದಲ್ಲಿ ಕ್ಲೋಸ್ ಫೈಟ್ ಇದೆ. ಯಾರು ಬೇಕಾದರೂ ಅಧಿಕಾರಕ್ಕೆ ಬರಬಹುದು. ನಾನು ಎಲ್ಲಾ ಕಡೆ ಪ್ರಚಾರಕ್ಕೆ ಹೋಗಿಲ್ಲ, ಹಾಗಾಗಿ ಹೆಚ್ಚು ಗೊತ್ತಿಲ್ಲ. ಚನ್ನಪಟ್ಟಣ ಚುನಾವಣೆಯಲ್ಲಿ ನಾವು ಗೆಲ್ಲುತ್ತೇವೆ. ಎಷ್ಟು ಅಂತರದಲ್ಲಿ ಗೆಲ್ಲುತ್ತೇವೆ ಎಂದು ಹೇಳಲು ಸಾಧ್ಯವಿಲ್ಲ. ನಾನು ಶಾಸ್ತ್ರ ಹೇಳಲು ಸಾಧ್ಯವಿಲ್ಲ. ನಾನು ಸಹ ಎರಡು ದಿನ ಕೆಲಸ ಮಾಡಿದ್ದೇನೆ. ನಾವು 3 ಕ್ಷೇತ್ರದಲ್ಲೂ ಗೆದ್ದೇ ಗೆಲ್ಲುತ್ತೇವೆ ಎಂದು ಹೇಳಿದರು.

# ಚನ್ನಪಟ್ಟಣ ಉಪ ಚುನಾವಣೆಯ ಮತ ಎಣಿಕೆಗೆ ಸಿದ್ಧತೆ, ಬಿಗಿ ಭದ್ರತೆ

• ಉದಯವಾಹಿನಿ, ರಾಮನಗರ



ತೀವ್ರ ಕುತೂಹಲ ಕೆರಳಿಸಿರುವ, ರಾಷ್ಟ್ರದ ಗಮನ ಸೆಳೆದಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಮತ ಎಣಿಕೆ ಕಾರ್ಯ ನಾಳೆ ರಾಮನಗರ ತಾಲ್ಲೂಕಿನ ಅರ್ಚಕರಹಳ್ಳಿಯಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದ್ದು, ಇದಕ್ಕಾಗಿ ಜಿಲ್ಲಾಡಳಿತ ಎಲ್ಲಾ ರೀತಿಯ ಅಗತ್ಯ ಸಿದ್ದತೆಗಳನ್ನು ಮಾಡಿಕೊಂಡಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮತ್ತು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ತಿಳಿಸಿದ್ದಾರೆ.

ವಿವಿಧ ರಾಜಕೀಯ ಪಕ್ಷಗಳ ಮುಖಂಡರುಗಳ ಸಮಕ್ಷಮದಲ್ಲಿ ನಾಳೆ ಬೆಳಿಗ್ಗೆ 6.45ಗಂಟೆಗೆ ಮತಯಂತ್ರಗಳನ್ನಿಟ್ಟಿರುವ ಸ್ಟ್ರಾಂಗ್ ರೂಂ ಅನ್ನು ತೆರೆಯಲಾಗುವುದು. ಬೆಳಿಗ್ಗೆ 7.30ಕ್ಕೆ ಅಂಚೆ ಮತಗಳ ಎಣಿಕೆ ಕಾರ್ಯ ಪ್ರಾರಂಭಿಸಲಾಗುವುದು. ಬೆಳಿಗ್ಗೆ 8 ಗಂಟೆಗೆ ಇವಿಎಂ ಯಂತ್ರಗಳ ಮತ ಎಣಿಕೆ ಆರಂಭವಾಗಲಿದೆ. ಒಟ್ಟಾರೆ 20 ಸುತ್ತುಗಳಲ್ಲಿ ಮತ ಎಣಿಕಾ ಕಾರ್ಯ ನಡೆಯಲಿದೆ ಎಂದು ಅವರು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ. ರಾಮನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ 3 ಕೊಠಡಿಗಳಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದ್ದು, ಒಂದು ಕೊಠಡಿಯಲ್ಲಿ ಅಂಚೆ ಮತಗಳ ಎಣಿಕೆ ನಡೆಯಲಿದೆ. ಇನ್ನೆರಡು ಕೊಠಡಿಗಳಲ್ಲಿ ಇವಿಎಂ ಮತ ಯಂತ್ರಗಳ ಮತ ಎಣಿಕೆ ನಡೆಯಲಿದೆ,ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,06,886 (ಶೇ.88.81) ಮತಗಳು ಚಲಾವಣೆಗೊಂಡಿವೆ ಎಂದು ಅವರು ಹೇಳಿದ್ದಾರೆ.

14 ಟೇಬಲ್‌ಗಳಲ್ಲಿ ಮತ ಎಣಿಕೆ ನಡೆಯಲಿದ್ದು, ಪ್ರತಿಯೊಂದು ಟೇಬಲ್‌ಗಳಿಗೂ ಎರಡು ರಾಜಕೀಯ ಪಕ್ಷದ ಏಜೆಂಟರುಗಳಿಗೆ ಪಾಸ್ ನೀಡಲಾಗಿದೆ. ಪಕ್ಷೇತರ ಅಭ್ಯರ್ಥಿಗಳ ಏಜೆಂಟರುಗಳಿಗೂ ಸಹ ಪಾಸ್ಗಳನ್ನು ನೀಡಲಾಗಿದೆ. ಟೇಬಲ್ವಾರು ರಾಂಡಮ್ ಆಗಿ 27 ಜನರಿಗೆ ಪಾಸ್‌ಗಳನ್ನು ನೀಡಲಾಗಿದೆ ಎಂದು ತಿಳಿಸಿದ್ದಾರೆ. ಮತ ಎಣಿಕೆಗೆ ಒಟ್ಟು 69 ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. 250 ಜನ ಏಜೆಂಟರುಗಳು ಇರುತ್ತಾರೆ.

ಬಿಗಿಯಾದ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ, ಜಿಲ್ಲೆಯಾದ್ಯಂತ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ ಸೆಕ್ಷನ್ 163ರ ಪ್ರಕಾರ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಜೆಡಿಎಸ್ನಿಂದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಪುತ್ರ ನಿಖಿಲ್ ಕುಮಾರಸ್ವಾಮಿ, ಕಾಂಗ್ರೆಸ್ನಿಂದ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಸೇರಿದಂತೆ ಚನ್ನಪಟ್ಟಣ ಕ್ಷೇತ್ರದಲ್ಲಿ ಒಟ್ಟು 31 ಅಭ್ಯರ್ಥಿಗಳು ಸ್ಪರ್ಧಿಸಿ ದ್ದಾರೆ. ಮತದಾರರು ನಿರ್ಧರಿಸಿರುವ ಅಭ್ಯರ್ಥಿ ಗಳ ಭವಿಷ್ಯ ನಾಳೆ ಮಧ್ಯಾಹ್ನದ ವೇಳೆಗೆ ಬಹಿರಂಗಗೊಳ್ಳಲಿದೆ.

# ಭಾರತಕ್ಕೂ ನಿಮಗೂ ಏನು ಸಂಬಂಧ: ಜಮೀರ್‌ಗೆ ಪ್ರತಾಪ್ ಸಿಂಹ ಪ್ರಶ್ನೆ

## ಬಿಜೆಪಿ ಕಾರ್ಯಕರ್ತರು ನಮ್ಮ ಭೂಮಿ ನಮ್ಮ ಹಕ್ಕು ಘೋಷವಾಕ್ಯದ ಅಡಿಯಲ್ಲಿ ರಾಜ್ಯಾದ್ಯಂತ ಪ್ರತಿಭಟನೆ

• ಉದಯವಾಹಿನಿ, ಮಡಿಕೇರಿ

ವಕ್ಫ್ ಆಸ್ತಿ ವಿವಾದ ಖಂಡಿಸಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿಂದು ಬಿಜೆಪಿ ಕಾರ್ಯಕರ್ತರು ನಮ್ಮ ಭೂಮಿ ನಮ್ಮ ಹಕ್ಕು ಘೋಷವಾಕ್ಯದ ಅಡಿಯಲ್ಲಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದ್ದಾರೆ. ಅದರಂತೆ ಮಡಿಕೇರಿ ನಗರದ ಚೌಡೇಶ್ವರಿ ದೇವಾಲಯದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಈ ವೇಳೆ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಸರ್ಕಾರ ಬಂದು 1 ವರ್ಷ ಆರು ತಿಂಗಳಾಯ್ತು. 2023ರ ಚುನಾವಣೆ ಸಂದರ್ಭದಲ್ಲೇ ನಾವು ಹೇಳಿದ್ದೆವು. ಕಾಂಗ್ರೆಸ್ ಬಂದ್ರೆ ಸ್ಥಾಪನೆ ಆಗೋದು ತಾಲಿಬಾನ್ ಸರ್ಕಾರ ಅಂತ, ಅದು ಈಗ ನಿಜ ಆಗ್ತಿದೆ ಎಂದು ವಾಗ್ದಾಳಿ ನಡೆಸಿದರು.

ನಮ್ಮ ಭೂಮಿ ನಮ್ಮ ಹಕ್ಕು ಬಿಜೆಪಿಯ ಘೋಷಣೆ ಅಲ್ಲ, ರಾಜ್ಯದ ಜನತೆಗೆ ಅನುಭವ. ಕಾಂಗ್ರೆಸ್ ಸರ್ಕಾರ ಬಂದಾಗ ಆ ಭಾಗ್ಯ, ಈ ಭಾಗ್ಯ ಅಂದವರು ಈಗ ಎಲ್ಲವನ್ನ ಕೊಡ್ತಿದ್ದಾರಾ 10 ಕೆ.ಜಿ. ಅಕ್ಕಿ ಕೊಡ್ತೀವಿ ಅಂದ್ರು, ಇವತ್ತು ಕೇಂದ್ರ ಸರ್ಕಾರದಿಂದ ಅನ್ನ ಕಲ್ಯಾಣ ಯೋಜನೆಯಿಂದ 5 ಕೆ.ಜಿ. ಅಕ್ಕಿ ಕೊಡುತ್ತಿದ್ದಾರೆ, ಉಳಿದ ಅಕ್ಕಿಗೆ ದುಡ್ಡು ಕೊಡ್ತೀವಿ ಅಂದ್ರು, ಅದನ್ನೂ ನೆಟ್ಟಗೆ ಕೊಡ್ತಿಲ್ಲ. ನಿರುದ್ಯೋಗ ಯುವಕರಿಗೆ 3,000 ರೂ. ಕೊಡ್ತೀವಿ ಅಂದ್ರು, ಉಚಿತ ವಿದ್ಯುತ್ ಅಂದ್ರು, ಈಗ ಎಲ್ಲವನ್ನ ಸರಿಯಾಗಿ ಕೊಡ್ತಿದ್ದಾರಾ? ಒಂದೂವರೆ ವರ್ಷದಲ್ಲಿ ಹಣ ದೋಚುವ ಕೆಲಸ ಬಿಟ್ಟು ಬೇರೆ ಯಾವ ಕೆಲಸ ಮಾಡಿದ್ದಾರೆ ಎಂದು ಪ್ರಶ್ನೆಗಳ ಮಳೆ ಸುರಿಸಿದರು.


ಉದಯವಾಹಿನಿ ಚಿತ್ರ

**ಕೇಂದ್ರ ಸರ್ಕಾರದಿಂದ ಅನ್ನ ಕಲ್ಯಾಣ ಯೋಜನೆ**

> ಚನ್ನಪಟ್ಟಣದಲ್ಲಿ ನಿಖಿಲ್ ಕುಮಾರಸ್ವಾಮಿ, ಶಿಗ್ಗಾಂವಿಯಲ್ಲಿ ಭರತ್ ಬೊಮ್ಮಾಯಿ, ಸಂಡೂರುನಲ್ಲಿ ಬಂಗಾರು ಹನುಮಂತು ಗೆಲ್ಲುತ್ತಾರೆ. ಈಗಾಗಲೇ ರಾಜ್ಯದ ಜನತೆ ಈ ಕಾಂಗ್ರೆಸ್ ಸರ್ಕಾರದ ನಡೆಯಿಂದ ಬೇಸತ್ತು ಹೋಗಿದ್ದಾರೆ. ಮೂರು ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಈ ಸರ್ಕಾರ ತೊಲಗಲಿ ಎನ್ನುವ ಸಂದೇಶ ಕೊಡುತ್ತಾರೆಂದು ನುಡಿದರು.

ರಾತ್ರಿ ಕಳೆದು, ಬೆಳಗಾಗುವಷ್ಟರಲ್ಲಿ ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗುತ್ತಿದೆ. ವಿಜಯಪುರದಲ್ಲೂ ಸಾವಿರಾರು ಎಕರೆ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಸಿದ್ದರಾಮಯ್ಯನವರು ಇಷ್ಟು ದಿನ ಅಲ್ಪಸಂಖ್ಯಾತರ ಮೇಲಿರುವ ಕೇಸ್‌ಗಳನ್ನ ವಾಪಸ್ ಪಡೆದು ಹಿಂದೂಗಳ ಹತ್ಯೆಗೆ ದಾರಿ ಮಾಡಿಕೊಡ್ತಿದ್ರು. ಈಗ ಹತ್ಯೆ ಮಾತ್ರ ಅಲ್ಲ, ಹಿಂದೂಗಳ ಭೂಮಿಗೂ ಕಂಟಕ ತಂದಿಡ್ತಿದ್ದಾರೆ ಎಂದು ಕೆಂಡಾಮಂಡಲವಾದರು.

**ಮೂರು ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿಗಳ ಗೆಲುವು ನಿಶ್ಚಿತ:**

ಇನ್ನೂ ಶನಿವಾರ (ನ.23) ರಾಜ್ಯದ ಚನ್ನಪಟ್ಟಣ, ಶಿಗ್ಗಾಂವಿ ಹಾಗೂ ಸಂಡೂರು ಕ್ಷೇತ್ರಗಳ ಉಪಚುನಾವಣಾ ಫಲಿತಾಂಶ ಪ್ರಕಟವಾಗಲಿದ್ದು, ಮೈತ್ರಿ ಅಭ್ಯರ್ಥಿಗಳೇ ಗೆಲುವು ಸಾಧಿಸುತ್ತಾರೆ ಎಂದು ಪ್ರತಾಪ್ ಸಿಂಹ ವಿಶ್ವಾಸ ವ್ಯಕ್ತಪಡಿಸಿದರು.

**ನೆಲೆ ಹುಡುಕಿಕೊಂಡು ಬಂದವರು ನೀವು**

ಇನ್ನೂ ವಕ್ಫ್ ಆಸ್ತಿ ಅಲ್ಲಾನ ಆಸ್ತಿ ಎಂಬ ಸಚಿವ ಜಮೀರ್ ಹೇಳಿಕೆ ಕುರಿತು ಮಾತನಾಡಿ, ಅಲ್ಲಾಗೂ ಭಾರತಕ್ಕೂ ಏನು ಸಂಬಂಧ? ನೀವು ನೆಲೆ ಹುಡುಕಿಕೊಂಡು ಭಾರತಕ್ಕೆ ಬಂದವರು. ನಿಮಗೂ ಭಾರತಕ್ಕೂ ಯಾವುದೇ ಸಂಬಂಧ ಇಲ್ಲ. ನಿಮಗೆ ಇಲ್ಲಿ ಯಾವ ಹಿನ್ನೆಲೆಯೂ ಇಲ್ಲ. ನಿಮ್ಮ ಧರ್ಮದ ಯಾವುದೇ ಕುರುಹುಗಳೂ ಇಲ್ಲಿಲ್ಲ. ಮುಸ್ಲಿಮರಲ್ಲೂ ಜಾತಿಗಳು ಸಾಕಷ್ಟು ಇವೆ. ಆದ್ರೆ ಧರ್ಮ ಅಂತ ಬಂದ್ರೆ ಎಲ್ಲಾರೂ ಒಟ್ಟಾಗಿ ಇರುತ್ತಾರೆ, ಆದ್ದರಿಂದ ಹಿಂದೂಗಳು ಒಟ್ಟಾಗಬೇಕು ಎಂದು ಕರೆ ನೀಡಿದರು.

## ಮಿನಿ ನ್ಯೂಸ್

### ಉಳುಮೆ ಮಾಡುತ್ತಿದ್ದಾಗ ಟ್ರಾಕ್ಟರ್ ಹಳ್ಳಕ್ಕೆ ಉರುಳಿಬಿದ್ದು ರೈತ ಸಾವು

• ಉದಯವಾಹಿನಿ, ಕುಣಿಗಲ್

ತೆಂಗಿನ ತೋಟದಲ್ಲಿ ಉಳುಮೆ ಮಾಡುತ್ತಿದ್ದಾಗ ಟ್ರಾಕ್ಟರ್ ಹಳ್ಳಕ್ಕೆ ಉರುಳಿಬಿದ್ದು ರೈತನೊಬ್ಬ ಸಾವನಪ್ಪಿರುವ ಘಟನೆ ಅಮೃತೂರು ಪೋಲಿಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ನಂದನ್(29) ಮೃಪಟ್ಟ ರೈತ. ತಾಲ್ಲೂಕಿನ ಬಸವಮತ್ತಿಕೆರೆ ಗ್ರಾಮದವರಾದ ಇವರು ತೋಟದಲ್ಲಿ ಉಳುಮೆ ಮಾಡುತ್ತಿದ್ದ ತೋಟದ ಪಕ್ಕದಲ್ಲೇ ಹಳ್ಳವಿದ್ದರಿಂದ ಆಯತಪ್ಪಿ ಟ್ರಾಕ್ಟರ್ ಉರುಳಿಬಿದ್ದಿದ್ದರಿಂದ ಚಕ್ರದಡಿ ಸಿಲುಕಿ ಮೃತಪಟ್ಟಿದ್ದಾರೆ. ರಾತ್ರಿಯಾದರೂ ಮನೆಗೆ ಗಂಡ ಬಾರದೆ ಇದ್ದುದ್ದನ್ನು ಕಂಡು ಪತ್ನಿ ತೋಟಕ್ಕೆ ಹೋಗಿ ನೋಡಿದಾಗ ನಂದನ್ ಸಾವನ್ನಪ್ಪಿರುವುದು ಗೊತ್ತಾಗಿದೆ. ತಕ್ಷಣವೇ ಗ್ರಾಮಸ್ಥರ ಸಹಾಯದಿಂದ ಜೆ.ಸಿ.ಬಿ ಮುಖಾಂತರ ಟ್ರಾಕ್ಟರ್ ಮೇಲೆತ್ತಿ ಶವ ಹೊರತೆಗೆಯಲಾಗಿದೆ. ಘಟನೆ ಸಂಬಂಧ ಅಮೃತೂರು ಪೋಲಿಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

### ಮಾಗಡಿ ಅಭಿವೃದ್ಧಿಗೆ ಒತ್ತು: ಪುರಸಭೆ ಅಧ್ಯಕ್ಷೆ ರಮ್ಯ ನರಸಿಂಹಮೂರ್ತಿ

• ಉದಯವಾಹಿನಿ, ಮಾಗಡಿ

ಪಟ್ಟಣದ ಸಮಗ್ರ ಅಭಿವೃದ್ಧಿಗೆ ಬದ್ಧ. ಎಲ್ಲಾ ವಾರ್ಡ್‌ಗಳಿಗೂ ಮೂಲ ಸೌಲಭ್ಯ ಒದಗಿಸವ ಕೆಲಸ ಪ್ರಾಮಾಣಿಕವಾಗಿ ಮಾಡಲಾಗುವುದು ಎಂದು ಪುರಸಭೆ ಅಧ್ಯಕ್ಷೆ ರಮ್ಯ ನರಸಿಂಹಮೂರ್ತಿ ಹೇಳಿದರು. ಪಟ್ಟಣದಲ್ಲಿ ಮುಖ್ಯಮಂತ್ರಿ ವಿಶೇಷ ಅನುದಾನದಡಿ ರೂ.4.5ಕೋಟಿ ವೆಚ್ಚದಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ ಶೀಘ್ರದಲ್ಲೇ ಆರಂಭವಾಗುವ ಹಿನ್ನೆಲೆಯಲ್ಲಿ ಜ್ಯೋತಿನಗರ ವಾರ್ಡ್‌ಗೆ ಭೇಟಿ ನೀಡಿ ಮಾತನಾಡಿದರು. ಪಟ್ಟಣದ ಸಮಗ್ರ ಅಭಿವೃದ್ಧಿಗೆ ಶಾಸಕ ಎಚ್.ಸಿ.ಬಾಲಕೃಷ್ಣ ಈಗಾಗಲೇ ಮುಖ್ಯಮಂತ್ರಿ ವಿಶೇಷ ಅನುದಾನದಡಿ ರೂ. 25ಕೋಟಿ ಅನುದಾನ ತಂದಿದ್ದಾರೆ. ಮಾಗಡಿ ಪುರಸಭೆ ವ್ಯಾಪ್ತಿಯಲ್ಲಿ ಚರಂಡಿ ಮತ್ತು ರಸ್ತೆ ಅಭಿವೃದ್ಧಿಗೆ ?4.5ಕೋಟಿ ಅನುದಾನ ನೀಡಿರುವ ಹಿನ್ನೆಲೆಯಲ್ಲಿ ಅಗತ್ಯವಾಗಿ ಬೇಕಾಗಿರುವ ವಾರ್ಡ್‌ಗಳಿಗೆ ಕಾಂಕ್ರೀಟ್ ರಸ್ತೆ, ಚರಂಡಿ ಮಾಡುವ ಕೆಲಸ ಆಗಲಿದ್ದು ಪಟ್ಟಣದ ಜ್ಯೋತಿನಗರದ ವಾರ್ಡ್ ?1.25ಕೋಟಿ ವೆಚ್ಚದಲ್ಲಿ ಸುಸಜ್ಜಿತ ರಸ್ತೆ, ಚರಂಡಿ ಮಾಡಿಸಲಾಗುತ್ತಿದೆ ಎಂದರು. ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಮಾಡಲಾಗುವುದು. ಕೆಶಿಪ್ ಕಾಮಗಾರಿಗೂ ಚಾಲನೆ ನೀಡಲಾಗುವುದು ಎಂದರು. ಪುರಸಭೆ ನಾಮಿನಿ ಸದಸ್ಯ ಆನಂದ್, ಪುರಸಭೆ ಎಂಜಿನಿಯರ್ ಪ್ರಶಾಂತ್, ಸಹಾಯಕ ಎಂಜಿನಿಯರ್ ಶೀಲಾ ಜೋಗೂರು, ಸಿಬ್ಬಂದಿ ದಿನೇಶ್, ಎಂಜಿಯರ್ ಮಹೇಶ್ ಸೇರಿದಂತೆ ಗುತ್ತಿಗೆದಾರರು ಭಾಗವಹಿಸಿದ್ದರು.

### ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ನಿರ್ಮಾಣಕ್ಕೆ ಭೂಮಿ ಪೂಜೆ

• ಉದಯವಾಹಿನಿ, ಮಂಡ್ಯ

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ-2024ರ ಹಿನ್ನೆಲೆ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಲು ಸಾಂಜೋ ಆಸ್ಪತ್ರೆ ಹಾಗೂ ಅಮರಾವತಿ ಹೋಟೆಲ್ ಹಿಂಭಾಗದಲ್ಲಿ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ಭೂಮಿ ಪೂಜೆಯನ್ನು ನೆರವೇರಿಸಿದರು. ಮನೋರಂಜನೆ ಪ್ರಯಾಣ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ಡಿ. 20,21 , 22 ರಂದು 3 ದಿನಗಳ ಕಾಲ 87ನೇ ಮಂಡ್ಯದಲ್ಲಿ ನಡೆಯಲಿದೆ ಎಂದು ಈಗಾಗಲೇ ತೀರ್ಮಾನವಾಗಿದೆ. ಸಮ್ಮೇಳನಕ್ಕೆ ಕೇವಲ ಒಂದು ತಿಂಗಳು ಬಾಕಿ ಇದೆ. ವೇದಿಕೆ ನಿರ್ಮಾಣಕ್ಕೆ ಇಂದು ಭೂಮಿ ಪೂಜೆಯು ಯಾವುದೇ 11 ರಾಜಕೀಯ 2. ಅಪರಾಧ ವಿಘ್ನಗಳಿಲ್ಲದೆ ನೆರವೇರಿದ್ದು, ಇಂದಿನಿಂದದ ವೇದಿಕೆ ನಿರ್ಮಾಣದ ಚಟುವಟಿಕೆಗಳು ಪ್ರಾರಂಭವಾಗಲಿದೆ. ತಂತ್ರಜ್ಞಾನ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಸಚಿವ ಎನ್.ಚಲುವರಾಯಸ್ವಾಮಿ, ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಗೊ.ರು.ಚನ್ನಬಸಪ್ಪ ಅವರನ್ನು ಆಯ್ಕೆ ಮಾಡಲಾಗಿದ್ದು, ಸೂಕ್ತ ವ್ಯಕ್ತಿಯನ್ನು ಆಯ್ಕೆ ಮಾಡಿರುವ ರಾಜ್ಯಾದ್ಯಂತ ಮೆಚ್ಚುಗೆ ವ್ಯಕ್ತವಾಗಿರುವುದು ಬಹಳ ಸಂತೋಷದ ವಿಷಯವಾಗಿದೆ. ಅವರಿಗೆ ಕೇಂದ್ರ ಸಾಹಿತ್ಯ ಪರಿಷತ್ತು, ಜಿಲ್ಲಾಡಳಿತ ಹಾಗೂ ಮಂಡ್ಯ ಜಿಲ್ಲೆಯ ಪರವಾಗಿ ಅವರಿಗೆ ತುಂಬು ಹೃದಯದ ಅಭಿನಂದನೆಗಳನ್ನು ತಿಳಿಸಿದರು.

### ಕಸ ಘಟಕ ಸ್ಥಾಪನೆಗೆ ರೈತರ ವಿರೋಧ

• ಉದಯವಾಹಿನಿ, ಕನಕಪುರ

ಕಸ ವಿಲೇವಾರಿ ಘಟಕಕ್ಕೆ ಮಂಜೂರಾಗಿದ್ದ 10 ಎಕರೆ ಸ್ಥಳ ಪರಿ ಶೀಲನೆ ನಡೆಸಿ ಜಿಲ್ಲಾ ಪಂಚಾಯಿತಿ ಸಿಇಒಗೆ ವರದಿ ನೀಡಲು ಬಂದಿದ್ದ ಅಧಿಕಾರಿಗಳನ್ನು ಸಾಮಾಜಿಕ ಹೋರಾಟಗಾರರು, ದಲಿತ ಮುಖಂಡರು, ಸ್ಥಳೀಯರು ತರಾಟೆಗೆ ತೆಗೆದುಕೊಂಡರು. ತಾಲ್ಲೂಕಿನ ಸಾತನೂರು ಹೋಬಳಿ ಕಬ್ಬಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಪೂಜಿ ಕಾಲೊನಿ ಬಳಿ ಸೂರನಹಳ್ಳಿ ಸರ್ವೆ ನಂ.17 ಗೋಮಾಳ ಜಾಗದಲ್ಲಿ ಕಸ ವಿಲೇವಾರಿ ಘಟಕಕ್ಕೆ 10 ಎಕರೆ ಜಾಗ ಮಂಜೂರು ಮಾಡಿ ಕೊಡಲಾಗಿದೆ. ಸಾರ್ವಜನಿಕರ ವಿರೋಧ ನಡುವೆಯೂ ಕಂದಾಯ ಇಲಾಖೆ ಜಾಗವನ್ನು ಕಬ್ಬಾಳು ಗ್ರಾಮ ಪಂಚಾಯಿತಿಗೆ ಹಸ್ತಾಂತರ ಮಾಡಿದ್ದು ಆ ಜಾಗದಲ್ಲಿ ಅಕ್ರಮವಾಗಿ ಗಣಿಗಾರಿಕೆ ಮಾಡಿ ಅಲ್ಲಿದ್ದ ಕಲ್ಲುಗಳನ್ನು ಮಾರಾಟ ಮಾಡುತ್ತಿರುವುದನ್ನು ವಿರೋಧಿಸಿ ಸಾಮಾಜಿಕ ಕಾರ್ಯಕರ್ತ ಕಂಚನಹಳ್ಳಿ ರವಿಕುಮಾರ್ ಗಣಿ ಮತ್ತು ವಿಜ್ಞಾನ ಇಲಾಖೆಗೆ ದೂರು ನೀಡಿದ್ದರು.

### ಟೋಲ್ ಕಟ್ಟದೇ ಕೈ ಮುಖಂಡನಿಂದ ದರ್ಪ ಮಹಿಳಾ ಸಿಬ್ಬಂದಿ ಮೇಲೆ ಹಲ್ಲೆ

• ಉದಯವಾಹಿನಿ, ಮಂಡ್ಯ

ಬೆಂಗಳೂರು ಎಕ್ಸ್‌ಪ್ರೆಸ್‌ವೇಯಲ್ಲಿ ರಾಜಕೀಯ ಪುಡಾರಿಗಳು ಪುಂಡಾಟ ನಡೆಸಿ ಟೋಲ್ ದುಡ್ಡು ಕಟ್ಟದೇ ಧಿಮಾಕು ಪ್ರದರ್ಶನ ತೋರಿದ್ದಾರೆ. ಟೋಲ್ ಕಟ್ಟಿ ಎಂದಿದ್ದಕ್ಕೆ ಕಾಂಗ್ರೆಸ್ ಮುಖಂಡ ಕ್ಯಾತೆ ತೆಗೆದು ಜಗಳ ಮಾಡಿದ್ದು ಅಲ್ಲದೇ ಹಲ್ಲೆ ನಡೆಸಿದ್ದಾರೆ.ಗುರುವಾರ ಮಧ್ಯಾಹ್ನ ಕಾಂಗ್ರೆಸ್ ಪಕ್ಷದ ಸಮಿತಿ ಒಂದರ ಪದಾಧಿಕಾರಿ ಬೋರ್ಡ್ ಹಾಕಿದ ಕಾರು ಶ್ರೀರಂಗಪಟ್ಟಣ ತಾಲ್ಲೂಕಿನ ಗಣಂಗೂರು ಟೋಲ್‌ಗೆ ಬಂದಿದೆ. ಮೈಸೂರು ಕಡೆಗೆ ಹೊರಟಿದ್ದ ಕಾರು ಚಾಲಕ ಮತ್ತು ಅದರ ಒಳಗಡೆ ಇದ್ದ ಪ್ರಯಾಣಿಕರು ಟೋಲ್ ಕಟ್ಟಲು ನಿರಾಕರಿಸಿದ್ದಾರೆ. ನಂತರ ಯಾಕೆ ಕಾರನ್ನು ಬಿಡುತ್ತಿಲ್ಲ ಎಂದು ಪ್ರಶ್ನಿಸಿ ಕೈ ಮುಖಂಡ ಕಾರಿನಿಂದ ಇಳಿದು ಅವಾಜ್ ಹಾಕಿದ್ದಾನೆ. ನಾನು ಕಾಂಗ್ರೆಸ್ ನಾಯಕ, ಟೋಲ್ ದುಡ್ಡು ಕಟ್ಟಲ್ಲ ಎಂದು ಕ್ಯಾತೆ ತೆಗೆದಿದ್ದಾನೆ. ಟೋಲ್ ದುಡ್ಡು ಕಟ್ಟಲೇಬೇಕೆಂದು ಸಿಬ್ಬಂದಿ ಪಟ್ಟು ಹಿಡಿದಿದ್ದಾರೆ.

ಅಂತರಾಳದಿಂದ.. EDITORIAL

# ನಕ್ಸಲ್‌ವಾದದತ್ತ ಯುವಕರು ರಾಜಕಾರಣಿಗಳ ಪಾಲೆಷ್ಟು?

ನಕ್ಸಲ್ ನಾಯಕ ವಿಕ್ರಂ ಗೌಡ ಎನ್‌ಕೌಂಟರ್‌ನ ಬೆನ್ನಿಗೇ ಆತನ ಮೃತದೇಹದ ಸುತ್ತ ರಾಜಕೀಯ ಪಕ್ಷಗಳು ರಣಹದ್ದುಗಳಂತೆ ನೆರೆದಿವೆ. ಸಾಧಾರಣವಾಗಿ ರಾಜಕಾರಣಿಗಳಿಗೆ ಇ ಎನ್‌ಕೌಂಟರ್‌ಗಳ ಹೇಗೆ ನಡೆಯಿತು ಎನ್ನುವುದರ ಬಗ್ಗೆ ವಿಶೇಷ ಅರಿವಿರುವುದಿಲ್ಲ. ಪೊಲೀಸ್ ಅಧಿಕಾರಿಗಳು ನೀಡಿರುವ ಮಾಹಿತಿಗಳ ಆಧಾರದಲ್ಲಿ ಅವರು ಹೇಳಿಕೆಗಳನ್ನು ನೀಡುತ್ತಾರೆ. ಆದರೆ ಈ ಸಂದರ್ಭದಲ್ಲಿ ರಾಜಕಾರಣಿಗಳು ಕೇವಲ ಪೊಲೀಸ್ ಅಧಿಕಾರಿಗಳ ಹೇಳಿಕೆಗಳಿಗಷ್ಟೇ ಸೀಮಿತವಾಗದೆ, ಈ ಎನ್‌ಕೌಂಟರ್‌ಗಳ ಬಗ್ಗೆ ಜನಸಾಮಾನ್ಯರ ಅಭಿಪ್ರಾಯಗಳಿಗೂ ಕಿವಿಯಾಗಬೇಕು. ಮೊನ್ನೆ ಉಡುಪಿಯಲ್ಲಿ ಮೃತಪಟ್ಟವನು ಯಾವುದೋ ವಿದೇಶಿ ಸಂಘಟನೆಗಳಿಗೆ ಸೇರಿದ ಉಗ್ರಗಾಮಿಯಲ್ಲ ನಮ್ಮದೇ ಊರಿನ ಆದಿವಾಸಿ ತರುಣ. ಆತನ ಸಾವು ನಮ್ಮ ಪಾಲಿಗೆ ಹಗುರ ವಿಷಯ ಖಂಡಿತ ಆಗಬಾರದು. ವಿಪರ್ಯಾಸವೆಂದರೆ, ಇಡೀ ಘಟನೆಯನ್ನು ಬಿಜೆಪಿಯ ಕೆಲವು ನಾಯಕರು ರಾಜಕೀಯಗೊಳಿಸಲು ಪ್ರಯತ್ನಿಸುತ್ತಿದ್ದಾರೆ. ತನ್ನದೇ ಊರಿನ ಮಲೆಕುಡಿಯ ತರುಣನ ಸಾವನ್ನು ಸಂಭ್ರಮಿಸಲು ಮುಂದಾಗಿದ್ದಾರೆ. ಇವರು ನಿಜಕ್ಕೂ ವಿರೋಧಿಸುತ್ತಿರುವುದು ನಕ್ಸಲ್ ಉಗ್ರವಾದವನ್ನೋ ಅಥವಾ ಬಡವರ ಮಕ್ಕಳ ಶಿಕ್ಷಣಕ್ಕೆ ನೆರಳಾಗಿರುವ ಹಾಸ್ಟೆಲ್‌ಗಳನ್ನೋ ಎಂದು ಜನರು ಸಂಶಯಿಸುವಂತಾಗಿದೆ. ಮುಖ್ಯವಾಗಿ, ವಿಕ್ರಂ ಗೌಡ ಯಾವುದೋ ಹಾಸ್ಟೆಲ್‌ಗಳಲ್ಲಿ ತಂಗಿ ಕಲಿತ ವಿದ್ಯಾರ್ಥಿಯಲ್ಲ ನಾಲ್ಕನೇ ತರಗತಿ ಯವರೆಗೆ ಕಲಿತು ಬಳಿಕ ಕೂಲಿ ಕೆಲಸ ಮಾಡುತ್ತಿದ್ದ ಯುವಕ. ಈತ ಬಾಳಿ ಬದುಕಿದ ತಾಲ್ಲೂಕು, ಗ್ರಾಮಗಳನ್ನು ಅವಲೋಕಿಸಿದರೆ ಸಾಕು, ಈತನನ್ನು ಉಗ್ರಗಾಮಿಯನ್ನಾಗಿಸಿದ್ದು ಯಾರು ಎನ್ನುವುದು ಗೊತ್ತಾಗಿ ಬಿಡುತ್ತದೆ. ಮೂಲಭೂತ ಸೌಕರ್ಯಗಳಿಲ್ಲದ ಕುಗ್ರಾಮಗಳಿಂದಲೇ ಯಾಕೆ ನಕ್ಸಲ್ ಉಗ್ರವಾದಿಗಳು ಹುಟ್ಟಿ ಬರುತ್ತಾರೆ ಎನ್ನುವುದು ಅರ್ಥವಾಗುತ್ತದೆ. ಚಿಕ್ಕಮಗಳೂರು ಜಿಲ್ಲೆಯಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಬಿಜೆಪಿ ನಾಯಕ ಸಿ.ಟಿ. ರವಿ ಆ ಜಿಲ್ಲೆಯ ಅಭಿವೃದ್ಧಿಗೆ ನೀಡಿದ ಕೊಡುಗೆಗಳೇನು ಎನ್ನುವುದರ ವಿವರಗಳನ್ನು ಮೊದಲು ನೀಡಲಿ. ಮೊದಲ ಬಾರಿ ಶಾಸಕನಾಗಿದ್ದಾಗ ಸಿ.ಟಿ. ರವಿಯ ಸಂಪತ್ತೆಷ್ಟಿತ್ತು ಮತ್ತು ಇವರ ಸಂಪತ್ತಿನ ಮೌಲ್ಯವೆಷ್ಟು ಎನ್ನುವುದನ್ನು ಲೆಕ್ಕ ಹಾಕಿದರೆ, ಚಿಕ್ಕಮಗಳೂರಿನ ಕೆಲವು ತಾಲ್ಲೂಕುಗಳು ಯಾಕೆ ಇನ್ನೂ ಕತ್ತಲಲ್ಲೇ ಇವೆ ಎನ್ನುವುದು ಗೊತ್ತಾಗಿ ಬಿಡುತ್ತದೆ. ಜನಸಾಮಾನ್ಯರ ತೆರಿಗೆ ಹಣವನ್ನು ಸರಿಯಾಗಿ ಬಳಸಿ ಬಡವರ ಬದುಕನ್ನು ಹಸನುಗೊಳಿಸುವ ಹೊಣೆಗಾರಿಕೆಯನ್ನು ರಾಜಕಾರಣಿಗಳು ನಿಭಾಯಿಸಿದ್ದರೆ ಇಂದು ಚಿಕ್ಕಮಗಳೂರಿನಲ್ಲಿ ನಕ್ಸಲರು ತಲೆಯೆತ್ತುವ ಪ್ರಶ್ನೆ ಉದ್ಭವಿಸುತ್ತಿರಲಿಲ್ಲವೇನೋ. ಪ್ರತಿಬಾರಿ ನಕ್ಸಲ್ ಯುವಕರ ಹೆಣ ಬಿದ್ದಾಗಲೂ, ಆತನ ಊರಿನ ದೈನ್ಯಾವಸ್ಥೆಗಳು ಮಾಧ್ಯಮಗಳಲ್ಲಿ ವರದಿಯಾಗುತ್ತವೆ. ಈ ಭಾಗದ ಜನರ ಸಮಸ್ಯೆಗಳಿಗೆ ಸರಕಾರ ಕಿವಿಗೊಡಲು ಆರಂಭಿಸಿದ್ದೇ, ಇಲ್ಲಿ ನಕ್ಸಲೀಯರು ತಲೆಯೆತ್ತಿದ ಬಳಿಕ ಎನ್ನುವುದು ನಾವು ಒಪ್ಪಿಕೊಳ್ಳಲೇ ಬೇಕಾದ ಕಹಿ ಸತ್ಯ. ಯಾವಾಗ ಸರಕಾರ ಕುದುರೆಮುಖ ಉದ್ಯಾನವನದ ಹೆಸರಿನಲ್ಲಿ ಚಿಕ್ಕಮಗಳೂರು ಭಾಗದ ಆದಿವಾಸಿಗಳ ಬದುಕನ್ನು ಮೂರಾಬಟ್ಟೆ ಮಾಡಲು ಮುಂದಾಯಿತೋ ಅಲ್ಲಿಂದಲೇ ರಾಜ್ಯದಲ್ಲಿ ನಕ್ಸಲ್ ಸಮಸ್ಯೆ ಉಲ್ಬಣಗೊಂಡಿತು. ಭ್ರಮನಿರಸನಗೊಂಡ ಆದಿವಾಸಿ ಸಮುದಾಯದ ಯುವಕರು ಒಬ್ಬೊಬ್ಬರಾಗಿ ಕಾಡು ಸೇರಿ ಕೋವಿ ಹಿಡಿದರು. ಪಶ್ಚಿಮಘಟ್ಟದಲ್ಲಿ ನಕ್ಸಲೀಯರ ಕೋವಿಗಳು ಸದ್ದು ಮಾಡಿದಾಕ್ಷಣ ಸರಕಾರ ಎಚ್ಚೆತ್ತುಕೊಂಡಿತು. ಅವರ ವಿರುದ್ಧ ಪೊಲೀಸ್ ಕಾರ್ಯಾಚರಣೆಯನ್ನು ಮಾಡುತ್ತಲೇ, ಈ ಭಾಗದ ಅಭಿವೃದ್ಧಿಗಾಗಿ, ಮೂಲಭೂತ ಸೌಕರ್ಯಗಳಿಗೆ ಹಣವನ್ನು ಬಿಡುಗಡೆ ಮಾಡಲು ಶುರು ಮಾಡಿತು. ಜಿಲ್ಲಾಡಳಿತದ ಉನ್ನತ ಅಧಿಕಾರಿಗಳು ನೇರವಾಗಿ ಇಲ್ಲಿನ ಆದಿವಾಸಿಗಳ ಗುಡಿಸಲುಗಳ ಬಾಗಿಲನ್ನು ತಟ್ಟಿ ಅವರ ಸಮಸ್ಯೆಗಳಿಗೆ ಕಿವಿಯಾಗತೊಡಗಿದರು. ಬಹುಶಃ ಇದು ಸ್ಥಳೀಯರಲ್ಲಿ ನಕ್ಸಲೀಯರ ಬಗ್ಗೆ ಇನ್ನಷ್ಟು ಭರವಸೆ ಮೂಡಿಸಿರಬೇಕು. ಪ್ರಜಾಸತ್ತಾತ್ಮಕವಾಗಿ ತಮ್ಮ ಗ್ರಾಮದ ಬೇಡಿಕೆಗಳನ್ನು ಮುಂದಿಟ್ಟಾಗ ಕಣ್ಣೆತ್ತಿಯೂ ನೋಡದ ಅಧಿಕಾರಿಗಳು, ನಕ್ಸಲರು ಕಾಣಿಸಿಕೊಂಡ ಬೆನ್ನಿಗೇ ತಮ್ಮ ಊರಿನ ಬಗ್ಗೆ ಪ್ರೀತಿ ತೋರಿಸುತ್ತಿರುವುದು ಅವರಿಗೆ ಸಹಜವಾಗಿಯೇ ನಕ್ಸಲ್ ಹೋರಾಟದ ಬಗ್ಗೆ ನಂಬಿಕೆಗಳನ್ನು ಹುಟ್ಟಿಸಿರಬಹುದು. ಒಕ್ಕಲೆಬ್ಬಿಸುವ ನೆಪದಲ್ಲಿ ಪೊಲೀಸರ ಕಿರುಕುಳಗಳು ಒಂದು ಹಂತಕ್ಕೆ ನಿಂತದ್ದೂ ನಕ್ಸಲೀಯರು ಕಾಣಿಸಿಕೊಂಡ ಬಳಿಕ ಸದಾ ಅರಣ್ಯಾಧಿಕಾರಿಗಳಿಂದ ದೌರ್ಜನ್ಯಗಳನ್ನು ಎದುರಿಸುತ್ತಿದ್ದ ಸ್ಥಳೀಯರ ಅಳಲನ್ನು ಸರಕಾರ ಗಂಭೀರವಾಗಿ ಸ್ವೀಕರಿಸಿದ್ದೂ ಕುದುರೆಮುಖದಲ್ಲಿ ನಕ್ಸಲೀಯರ ಚಟುವಟಿಕೆ ಆರಂಭವಾದ ಬಳಿಕ ಎನ್ನುವುದು ಸಿಟಿ. ರವಿಯವರಿಗೆ ತಿಳಿಯದ್ದೇನಲ್ಲ ಇದೀಗ ವಿಕ್ರಂಗೌಡ ಅವರ ಎನ್‌ಕೌಂಟರ್‌ನ ಜೊತೆ ಜೊತೆಗೇ ದಕ್ಷಿಣ ಕನ್ನಡ ಜಿಲ್ಲೆಯ ಕತ್ತಲೂರು ಎಂದೇ ಕುಖ್ಯಾತವಾಗಿರುವ ಬೆಳ್ತಂಗಡಿ ತಾಲ್ಲೂಕಿನ ಕುತ್ತೂರು ಗ್ರಾಮದ ದಯನೀಯ ಸ್ಥಿತಿ ಮಾಧ್ಯಮಗಳ ಮೂಲಕ ಬೆಳಕಿಗೆ ಬರುತ್ತಿವೆ. ಕುತ್ತೂರು ಗ್ರಾಮದ ಅಲಂಬ, ಕೋಟ್ಯಡ್ಕ ಪಂಚಾಲ ಪರಿಸರದಲ್ಲಿ ಕುದುರೆಮುಖ ರಾಷ್ಟ್ರೀಯ ಉದ್ಯಾನವನದಲ್ಲಿ ಎರಡು ದಶಕಗಳ ಹಿಂದೆ 50ಕ್ಕೂ ಅಧಿಕ ಕುಟುಂಬಗಳು ವಾಸಿಸುತ್ತಿದ್ದವು. ಅವರಲ್ಲಿ ಹಲವರು ಸರಕಾರದ ಪುನರ್‌ವಸತಿ ಪ್ಯಾಕೇಜ್‌ಗಳನ್ನು ನಂಬಿ, ಸಿಕ್ಕಿದ ಪರಿಹಾರವನ್ನು ಪಡೆದು ತಾವು ಬಾಳಿ ಬದುಕಿದ ಭೂಮಿ ತೊರೆದು ನಾಡಿಗೆ ಬಂದಿದ್ದಾರೆ. ಅವರಲ್ಲಿ ಕೆಲವರ ಬದುಕು ಇನ್ನೂ ಅತಂತ್ರವಾಗಿದೆ. ಈ ಭಾಗದಲ್ಲಿ ಇನ್ನೂ 34 ಆದಿವಾಸಿ ಕುಟುಂಬಗಳು ವಾಸಿಸುತ್ತಿವೆ.ಈ ಭಾಗದಲ್ಲಿ ಈ ಹಿಂದೆ ಹಲವು ಎನ್‌ಕೌಂಟರ್‌ಗಳು ನಡೆದು, ಇಲ್ಲಿನ ಮಲೆಕುಡಿಯ ಆದಿವಾಸಿ ಹುಡುಗರು ಮೃತಪಟ್ಟಿದ್ದಾರೆ.

> **ಅದರ ಭಾಗವಾಗಿಯೇ ಬಿಜೆಪಿ ಮುಖಂಡ, ವಿಧಾನ ಪರಿಷತ್ ಸದಸ್ಯಸಿ. ಟಿ. ರವಿ ಅವರು, 'ಬಡಮಕ್ಕಳ ಶಿಕ್ಷಣಕ್ಕೆ ಅತ್ಯಗತ್ಯವಾಗಿರುವ ಹಾಸ್ಟೆಲ್‌ಗಳಲ್ಲಿ ನಕ್ಸಲೀಯರು ತಂಗುತ್ತಾರೆ. ವಿದ್ಯಾರ್ಥಿಗಳನ್ನು ನಕ್ಸಲ್ ಚಳವಳಿಗೆ ನೇಮಿಸಿಕೊಳ್ಳುತ್ತಾರೆ. ಅವರ ವಿಚಾರಗಳನ್ನು ಹಾಸ್ಟೆಲ್ ಯುವಕರ ತಲೆಗೆ ತುಂಬುತ್ತಾರೆ ಎನ್ನುವ ಬೇಜವಾಬ್ದಾರಿ ಹೇಳಿಕೆಯನ್ನು ನೀಡಿ, ವಿವಾದಕ್ಕೊಳಗಾಗಿದ್ದಾರೆ. ವಿಕ್ರಮ್ ಗೌಡನ ಎನ್‌ಕೌಂಟರ್ ನಡೆದ ಮರುದಿನ ಚಿಕ್ಕಮಗಳೂರು ತಾಲ್ಲೂಕು ಪಂಚಾಯತ್ ಕೆಡಿಪಿ ಸಭೆಯಲ್ಲಿ ಅವರು ಈ ಹೇಳಿಕೆಯನ್ನು ನೀಡಿದ್ದು ಹಾಸ್ಟೆಲ್‌ಗಳೇ ನಕ್ಸಲ್ ಉಗ್ರವಾದದ ಮೂಲ ತಾಣಗಳು ಎಂಬರ್ಥ ಬರುವಂತೆ ಹೇಳಿಕೆಯನ್ನು ನೀಡಿದ್ದಾರೆ.**




• ಹಿಂದಿನ ಸಂಚಿಕೆಯಿಂದ 26 ನೆಯ ಅಧ್ಯಾಯ

ಹಿಮವತ್ಪರ್ವತನ ಜೇಷ್ಠ ಪುತ್ರಿಯಾದ ಗಂಗೆಯಲ್ಲಿ ತೀರ್ಥಸ್ನಾನವನ್ನು ಮಾಡಿಸು ಆ ದೇವಿಯು ಈ ಭಸ್ಮರಾಶಿಯಾದವರನ್ನು ಪವಿತ್ರಮಾಡುವಳು ಪವಿತ್ರವಾದ ಗಂಗೆಯಿಂದ ಸಗರಚಕ್ರವರ್ತಿಯ ಅರುವತ್ತು ಸಾವಿರ ದುಕ್ಕಳೂ ಸ್ವರ್ಗವನ್ನೆ ದುವರು. ಗಂಗೆಯು ಸ್ವರ್ಗಲೋಕ ದಲ್ಲಿದ್ದಾಳೆ. ಆಕೆಯನ್ನು ಭೂಲೋಕಕ್ಕೆ ಕರೆದುಕೊಂಡು ಬಂದರೆ ಆಕೆಯು ಅರುವತ್ತು ಸಾವಿರ ಮಂದಿ ಸಗರ ಚಕ್ರವರ್ತಿಯ ಮಕ್ಕಳನ್ನೂ ಸ್ವರ್ಗವನ್ನೇದಿಸುವಳು ನೀನು ಈ ಕುದುರೆಯನ್ನು ಹಿಡಿದುಕೊಂಡು ಹೋಗಿ ನಿನ್ನ ಮುತ್ತಯ್ಯನಾದ ಸಗರ ಚಕ್ರವರ್ತಿಯ ಅಶ್ವಮೇಧಯಾಗವನ್ನು ನೆರವೇರಿಸು' ಎಂದು ಹೇಳಿದನು ಆ ಮಾತನ್ನು ಕೇಳಿ ಮಹಾಪರಾಕ್ರಮಿಯಾದ ಅಂಶುಮಂತನು ದೀಕ್ಷಿತನಾಗಿದ್ದ ಸಗರ ಚಕ್ರವರ್ತಿಯ ಸಮೀಪಕ್ಕೆ ಕುದುರೆಯೊಡನೆ ಬಂದು ಅದನ್ನು ಒಪ್ಪಿಸಿ ತನ್ನ ಚಿಕ್ಕಪ್ಪಂದಿರ ವೃತ್ತಾಂತ ವನ್ನು ಹೇಳಿದನು. ಘೋರವಾದ ಆ ಅಶುಭವಾರ್ತೆಯನ್ನು ಕೇಳಿ ಸಗರಚಕ್ರವರ್ತಿಯು ಯಜ್ಞ ದೀಕ್ಷೆಯಾಗಿರುವಲ್ಲಿ ವೃದ್ಧಿಕ್ಷಯಾದಿ ಸೂತಕಗಳು ಬಂದರೂ ಆ ಯಜ್ಞವನ್ನು ನೆರವೇರಿಸಬೇಕೆಂಬ ಧರ್ಮಶಾಸ್ತ್ರವನ್ನು ಆಲೋಚಿಸಿ ಯಾಗವನ್ನು ವಿಧ್ಯುಕ್ತಪ್ರಕಾರ ದಲ್ಲಿ ಮುಗಿಸಿದನು. ಅನಂತರ ಗಂಗೆಯನ್ನು ತರಬೇಕೆಂದು ಆಲೋಚನೆ ಮಾಡಿದನಾದರೂ ದೃಢಚಿತ್ತವಿಲ್ಲದೆ ಮೂವತ್ತು ಸಾವಿರ ವರುಷಗಳ ಪರ್ಯಂತ ರಾಜ್ಯವನ್ನು ಪರಿಪಾಲಿಸಿ ಸ್ವರ್ಗ ಸ್ಥನಾದನು. ಏಕೆಂದರೆ, ಈ ಮೂಲಕ ಲೋಕಪಾವನೆಯಾದ ಗಂಗೆಯು ಭೂಮಿಗೆ ಇಳಿದು ಬರುತ್ತಾಳೆ.

### ಭಗೀರಥ ನು ಬ್ರಹ್ಮ ದೇವನಿಂದವರವ ನ್ನು ಪಡೆದದ್ದು

ಶ್ರೀರಾಮ, ಕೇಳು ಸಗರಚಕ್ರವರ್ತಿಯ ಸ್ವರ್ಗಾರೋಹಣಾನಂತರದಲ್ಲಿ ಆತನ ಪ್ರಧಾನಿಗಳು ಧರ್ಮಿಷ್ಟನಾದ ಅಂಶುಮಂತನಿಗೆ ಪಟ್ಟವನ್ನು ಕಟ್ಟಿದರು. ಆತನು ಧರ್ಮದಿಂದ ಪ್ರಜಾಪಾಲನ ವನ್ನು ಮಾಡುತ್ತ ರಾಜ್ಯವನ್ನಾಳಿಕೊಂಡಿರಲು ದಿಲೀಪನೆಂಬ ಕುಮಾರನು ಜನಿಸಿದನು. ಅವನು ಪ್ರಬುದ್ಧನಾಗಲು ಆತನಿಗೆ ಪಟ್ಟಾಭಿಷೇಕವನ್ನು ಮಾಡಿ ರಾಜ್ಯಭಾರವನ್ನು ಬಿಟ್ಟು ಹಿಮ ವತ್ಪರ್ವತಕ್ಕೆ ಹೋಗಿ ಆ ಪರ್ವತದ ಕೋಡುಗಲ್ಲಿನಲ್ಲಿ ಮೂವತ್ತೆರಡುಸಾವಿರ ವರುಷಗಳ ಪರ್ಯಂತ ಉಗ್ರವಾದ ತಪಸ್ಸನ್ನು ಮಾಡಿ ಅಂಶುಮಂತನು ಸ್ವರ್ಗಲೋಕವನ್ನೇದಿದನು ಆಮೇಲೆ ದಿಲೀಪಮಹಾರಾಯನು ತನ್ನ ಮುತ್ತಜ್ಜಂದಿರಾದ ಆ ಅರುವತ್ತು ಸಾವಿರ ಮಂದಿಯು ಶಾಪದಗ್ಧರಾದ ವೃತ್ತಾಂತವನ್ನು ಕೇಳಿ, ಅವರನ್ನು ಸ್ವರ್ಗಕ್ಕೆ ಕಳುಹಿಸಲು ಗಂಗೆಯನ್ನು ತರುವ ಉಪಾಯವಾವುದೆಂದು ಚಿಂತಿಸುತ್ತ ಕಾಲವನ್ನು ಕಳೆದನು.

ಮುಂದುವರಿಯುವುದು...

# ರಸ್ತೆಯ ಅಗಲೀಕರಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ

## ಬಿಬಿಎಂಪಿ ವ್ಯಾಪ್ತಿಯ ದಾಸರಹಳ್ಳಿ ವಲಯದಲ್ಲಿ ಮುಖ್ಯ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ದಾಸರಹಳ್ಳಿ ವಲಯದ ನೆಲಗದರನಹಳ್ಳಿ ಮುಖ್ಯ ರಸ್ತೆ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿದ್ದು, ಎರಡು ತಿಂಗಳೊಳಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯ ದಾಸರಹಳ್ಳಿ ವಲಯದಲ್ಲಿ ಮುಖ್ಯ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಡಿ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ನೆಲಗದರನಹಳ್ಳಿ ರಸ್ತೆಯು ತುಮಕೂರು ಮುಖ್ಯ ರಸ್ತೆಯಿಂದ ಗಂಗಾ ಇಂಟರ್ ನ್ಯಾಷನಲ್ ಸ್ಕೂಲ್ ವರೆಗೆ ಸುಮಾರು 2.45 ಕಿ.ಮೀ ಇದ್ದು, ಈ ಹಿಂದೆ ಇದ್ದ 30 ರಿಂದ 40 ಅಡಿ ರಸ್ತೆಯನ್ನು 60 ಅಡಿಗೆ ಅಗಲೀಕರಣ ಮಾಡಲಾಗುತ್ತದೆ. ಈ ಸಂಬಂಧ ಈಗಾಗಲೇ 1.2 ಕಿ.ಮೀ ರಸ್ತೆ ಅಗಲೀಕರಣ ಮಾಡಿ ಡಾಂಬರೀಕರಣ ಮಾಡಲಾಗಿದ್ದು, ಬಾಕಿ 1.25 ಕಿ.ಮೀ ಉದ್ದದ ಅಗಲೀಕರಣ ಕಾಮಗಾರಿ ಪ್ರಗತಿಯಲ್ಲಿದ್ದು, ಶೀಘ್ರಗತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸಿದರು.

ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ 173 ಮಂದಿಯ ಆಸ್ತಿಗಳಿಗೆ ಟಿಡಿಆರ್ ನೀಡುವ ವಿಚಾರವಾಗಿ, ಈಗಾಗಲೇ 16 ಮಂದಿಗೆ ಟಿಡಿಆರ್ ನೀಡಲಾಗಿದೆ. ಇನ್ನು 85 ಮಂದಿ ದಾಖಲಾತಿಗಳನ್ನು ಸಲ್ಲಿಸಿದ್ದು, 4 ಆಸ್ತಿಗಳು ಸರ್ಕಾರಿ ಸ್ವತ್ತಾಗಿರುತ್ತದೆ. ಈ ಪೈಕಿ ಇನ್ನೂ ಯರಯಾರಿಗೆ ಟಿಡಿಆರ್ ನೀಡಿಲ್ಲ ಅವರಿಗೆ ಟಿಡಿಆರ್ ನೀಡಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಇದೇ ಕೆರೆಯ ಒಂದು ಭಾಗದ ಕಲ್ವರ್ಟ್ ಮಳೆಗಾಲದ ವೇಳೆ ಕೊಚ್ಚಿ ಹೋಗಿದ್ದು, ಅದರ ದುರಸ್ಥಿ ಕಾಮಗಾರಿಗಾಗಿ 1.05 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಮತ್ತೆ ಮಳೆಗಾಲ ಪ್ರಾರಂಭವಾಗುವ ವೇಳೆಗೆ ಕಲ್ವರ್ಟ್ ಕಾಮಗಾರಿ, ರಾಜಕಾಲುವೆಯ ಆರ್.ಸಿ.ಸಿ ಗೋಡೆ ಸೇರಿದಂತೆ ಇನ್ನಿತರೆ ಕಾಮಗಾರಿಯನ್ನು ಪ್ರಾರಂಭಿಸಿ ನಿಗದಿತ ಸಮಯದೊಳಗಾಗಿ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸಿದರು.


ಉದಯವಾಹಿನಿ ಚಿತ್ರ

**ಟಿಡಿಆರ್ ನೀಡಲು ಸೂಕ್ತ ಕ್ರಮ**

**ಅಬ್ಬಿಗೆರೆ ಉದ್ಯಾನವನ ಪರಿಶೀಲನೆ:** ಅಬ್ಬಿಗೆರೆಯ ಉದ್ಯಾನವನವು 6 ಎಕರೆ ಪ್ರದೇಶದಲ್ಲಿದ್ದು, ಅದರ ನಿರ್ವಹಣೆಗೆ ಟೆಂಡರ್ ಕರೆಯಲಾಗುತ್ತಿದೆ.

ಈ ಸಂಬಂಧ ಉದ್ಯಾನವನದಲ್ಲಿ ಅಳವಡಿಸಿರುವ ಜಿಮ್ ಉಪಕರಣಗಳು ಹಾಳಾಗಿದ್ದು, ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಅವುಗಳನ್ನು ಬದಲಿಸಲು ಸೂಚನೆ ನೀಡಿದರು.

**ರಸ್ತೆ ಡಾಂಬರೀಕರಣ ಕಾರ್ಯ ಪರಿಶೀಲನೆ:** ಶೆಟ್ಟಿಹಳ್ಳಿಯ ಆರ್.ಕೆ. ಎನ್ ಕ್ಲೇವ್ ಬಳಿ ರಸ್ತೆ ಡಾಂಬರೀಕರಣ ಹಾಕಿರುವುದನ್ನು ಪರಿಶೀಲಿಸಿ, ಡಾಂಬರೀ ಕರಣ ಆಗಿರುವ ರಸ್ತೆಯಲ್ಲಿ ಸೈಡ್ ಡ್ರೈನ್‌ಗೆ ನೀರು ಹೋಗಲು ಸರಿಯಾದ ವ್ಯವಸ್ಥೆ ಮಾಡದಿರುವುದನ್ನು ಗಮನಿಸಿ ಗ್ರೇಟಿಂಗ್ ಅಳವಡಿಸಿ ರಸ್ತೆ ಮೇಲೆ ನೀರು ನಿಲ್ಲದಂತೆ ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಇದೇ ಸ್ಥಳದಲ್ಲಿ ಒಣ ತ್ಯಾಜ್ಯ ಸಂಗ್ರಹಣಾ ಘಟಕ ಕಾಮಗಾರಿ ಸ್ಥಗಿತಗೊಂಡಿದ್ದು, ಅದನ್ನು ಶೀಘ್ರಗತಿಯಲ್ಲಿ ಪೂರ್ಣಗೊಳಿಸಿ ಕಾರ್ಯಾರಂಭ ಮಾಡಲು ಸೂಚನೆ ನೀಡಿದರು. ನಾಗಸಂದ್ರ ಹಾವನೂರು ಬಡಾವಣೆಯಲ್ಲಿ ಜಲ ಮಂಡಳಿಯು ಒಳಚರಂಡಿಯ ಪೈಪ್ ಲೈನ್ ಕಾಮಗಾರಿ ಭಾಗವನ್ನು ದುರಸ್ತಿ ಮಾಡದ ಕಾರಣ ಪಾಲಿಕೆ ವತಿಯಿಂದಲೇ ಕತ್ತರಿಸಿರುವ ಭಾಗಕ್ಕೆ ಡಾಂಬರೀಕರಣ ಮಾಡುವುದನ್ನು ಪರಿಶೀಲಿಸಿದರು. 25 ಕೋಟಿ ರೂ. ವೆಚ್ಚದಲ್ಲಿ ಶೆಟ್ಟಿಹಳ್ಳಿ ಹಾಗೂ ಬಾಗಲಗುಂಟೆಯ ವಾರ್ಡ್ ರಸ್ತೆಗಳು ಹಾಗೂ ಅಡ್ಡರಸ್ತೆಗಳು ಡಾಂಬರೀಕರಣ ಕಾಮಗಾರಿ ಬಹುತೇಖ ಪೂರ್ಣಗೊಂಡಿರುತ್ತದೆ.

**ರುದ್ರಭೂಮಿಗೆ ಕಾಂಪೌಂಡ್ ಗೋಡೆ ನಿರ್ಮಿಸಿ:** ದಾಸರಹಳ್ಳಿ ವಲಯದ ಅಬ್ಬಿಗೆರೆ ಫಾರೆಸ್ಟ್ ರಸ್ತೆಯ ಅಗಲೀಕರಣದ ವೇಳೆ ರುದ್ರಭೂಮಿಯ ಗೋಡೆಯನ್ನು ತೆರವುಗೊಳಿಸಲಾಗಿದ್ದು, ಆ ಗೋಡೆಯನ್ನು ಗುತ್ತಿಗೆದಾರರ ಮೂಲಕ ಕೂಡಲೆ ನಿರ್ಮಾಣ ಮಾಡಲು ಸೂಚಿಸಿದರು.

ಈ ವೇಳೆ ವಲಯ ಆಯುಕ್ತರಾದ ಗಿರೀಶ್, ವಲಯ ಜಂಟಿ ಆಯುಕ್ತರಾದ ಪ್ರೀತಮ್ ನಸಲಾಪುರ್, ಮುಖ್ಯ ಅಭಿಯಂತರರಾದ ರವಿ, ವಿಜಯ್ ಕುಮಾರ್ ಹರಿದಾಸ್, ಕಾರ್ಯಪಾಲಕ ಅಭಿಯಂತರರು ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಬೀದಿ ನಾಯಿಗಳ ಎಬಿಸಿ ಸೆಂಟರ್ ಪರಿಶೀಲನೆ

**ಶೆಟ್ಟಿಹಳ್ಳಿಯಲ್ಲಿ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿ, ಎಬಿಸಿ ಮಾಡಲು 54 ಕೆನಲ್ಸ್ ಗಳಿದ್ದು, 5 ಐಸೋಲೇಷನ್ ಸೆಂಟರ್‌ಗಳಿವೆ. ದಾಸರಹಳ್ಳಿ ಹಾಗೂ ಆರ್.ಆರ್ ನಗರ ವಲಯದ ಬೀದಿ ನಾಯಿಗಳಿಗೆ ಇಲ್ಲಿ ಎಬಿಸಿ ಮಾಡಲಾಗುತ್ತಿದೆ. 33 ಲಕ್ಷ ರೂ. ವೆಚ್ಚದಲ್ಲಿ ಎಬಿಸಿ ಸೆಂಟರ್‌ನ ದುರಸ್ತಿ ಹಾಗೂ ಪೆಯ್ಟಿಂಗ್ ಕಾರ್ಯ ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.**

### ಅಬ್ಬಿಗೆರೆ ಕೆರೆ ಪರಿಶೀಲನೆ

**ಅಬ್ಬಿಗೆರೆ ಕೆರೆ 45 ಎಕರೆ ಪ್ರದೇಶದಲ್ಲಿದ್ದು, 4.5 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಆ ಕಾಮಗಾರಿಯಲ್ಲಿ ಈಗಾಗಲೇ ಹೂಳೆತ್ತುವ ಕಾರ್ಯ, ಸೀವೇಜ್ ಡೈವರ್ಷನ್ ಡ್ರೈನ್, ಬಂಡ್ ನಿರ್ಮಿಸುವ, ಇನ್‌ಲೆಟ್ ಹಾಗೂ ಔಟ್ ಲೆಟ್ ಕಾಮಗಾರಿ ಪೂರ್ಣಗೊಳಿಸಲಾಗಿದೆ. ಇನ್ನು ಫೆನ್ಸಿಂಗ್ ಅಳವಡಿಸುವ, ಶೌಚಾಲಯ, ಭದ್ರತಾ ಸಿಬ್ಬಂದಿಯ ಕೊಠಡಿ ಹಾಗೂ ಪ್ರವೇಶ ದ್ವಾರದ ಕಾಮಗಾರಿ ಬಾಕಿಯಿದ್ದು, ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ ನೀಡಿದರು.**

# ರೇವಣ್ಣಗೆ ಮತ್ತೆ ಶಾಕ್: ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯ ಆರೋಪ ಎದುರಿಸುತ್ತಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಲೈಂಗಿಕ ದೌರ್ಜನ್ಯ ಮತ್ತು ಕಿರುಕುಳ ಪ್ರಕರಣಗಳ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ ಆಗಸ್ಟ್‌ಲ್ಲಿ 2,144 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿತ್ತು. ನ ವ್ಯವಹಾರ ಕರ್ನಾಟಕ ಮಾಜಿ ಶಾಸಕ ತನ್ನ ಕುಟುಂಬಕ್ಕೆ ಮನೆಕೆಲಸ ಮಾಡುತ್ತಿದ್ದ ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಾರ್ಜ್‌ಶೀಟ್ ಸಲ್ಲಿಸಲಾಗಿದೆ. ಜೆಡಿಎಸ್ ನಾಯಕನ ವಿರುದ್ಧ ಎರಡು ಅತ್ಯಾಚಾರ ಪ್ರಕರಣ ಗಳು ಮತ್ತು ಲೈಂಗಿಕ ದೌರ್ಜನ್ಯ ಪ್ರಕರಣಗಳಿವೆ. ಪ್ರಜ್ವಲ್ ರೇವಣ್ಣ ಅವರು ಹೊಳೆನರಸೀಪುರ ಕ್ಷೇತ್ರದ ಜೆಡಿಎಸ್ ಶಾಸಕ ಎಚ್.ಡಿ.ರೇವಣ್ಣ ಅವರ ಪುತ್ರ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಮೊಮ್ಮಗ. ಈಗ ಹೈಕೋರ್ಟ್ ನಿರೀಕ್ಷಣಾ ಜಾಮೀನು ಅರ್ಜಿ ವಜಾಗೊಳಿಸಿದ ಕಾರಣ ಪ್ರಜ್ವಲ್ ರೇವಣ್ಣಗೆ ಬಿಗ್ ಶಾಕ್ ನೀಡಿದಂತೆ ಆಗಿದೆ.


ಉದಯವಾಹಿನಿ ಚಿತ್ರ

# ಕರ್ನಾಟಕವು ಬಿಐ, ಎಐ, ಉದಯೋನ್ಮುಖ ತಂತ್ರಜ್ಞಾನಗಳಲ್ಲಿನ ಕೌಶಲ್ಯ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸುತ್ತಿದೆ

• ಉದಯವಾಹಿನಿ, ಬೆಂಗಳೂರು

''ಕರ್ನಾಟಕವು ನಾವೀನ್ಯತೆಯ ದಾರಿದೀಪವಾಗಿ ನಿಂತಿದೆ, ಸಂಶೋಧನೆ ಮತ್ತು ಅಭಿವೃದ್ಧಿಯ ಡೈನಾಮಿಕ್ ಪರಿಸರ ವ್ಯವಸ್ಥೆಗಾಗಿ ಜಾಗತಿಕವಾಗಿ ಗುರುತಿಸಲ್ಪಟ್ಟಿದೆ, ಭಾರತದಲ್ಲಿ ಅತಿ ಹೆಚ್ಚು R&D ಕೇಂದ್ರಗಳನ್ನು ಹೊಂದಿದೆ.

ಕೌಶಲ್ಯ ಅಭಿವೃದ್ಧಿಯ ಮೇಲೆ ಕೇಂದ್ರೀಕರಿಸಿ, ರಾಜ್ಯವು ತನ್ನ ಕಾರ್ಯಪಡೆಯನ್ನು ಬಿಸಿನೆಸ್ ಇಂಟೆಲಿಜೆನ್ಸ್ (ಬಿಐ), ಕೃತಕ ಬುದ್ಧಿಮತ್ತೆ (ಎಐ), ಮತ್ತು ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಅತ್ಯಾಧುನಿಕ ಪರಿಣತಿಯೊಂದಿಗೆ ಸಜ್ಜುಗೊಳಿಸುತ್ತಿದೆ, ಜಾಗತಿಕ ನಾವೀನ್ಯತೆಯ ಭೂದೃಶ್ಯದಲ್ಲಿ ತನ್ನ ಸ್ಥಾನವನ್ನು ಗಟ್ಟಿಗೊಳಿಸುತ್ತಿದೆ. ತಾಂತ್ರಿಕ ಪ್ರಗತಿಗೆ ಪ್ರಮುಖ ಕೇಂದ್ರವಾಗಿ, ರಾಜ್ಯವು ಎಲೆಕ್ಟ್ರಾನಿಕ್ ವಿನ್ಯಾಸವನ್ನು ಚಾಲನೆ ಮಾಡುತ್ತಿದೆ ಮತ್ತು ವ್ಯವಹಾರವನ್ನು ಸುಲಭಗೊಳಿಸುವುದನ್ನು ಉತ್ತೇಜಿಸುತ್ತದೆ, ಇದು ಪರಿವರ್ತಕ ಕೈಗಾರಿಕೆಗಳಿಗೆ ಆದ್ಯತೆಯ ತಾಣವಾಗಿದೆ. ಬಿಗ್ ಡೇಟಾ ಮತ್ತು ಎಐ ನಿರ್ಧಾರ-ತೆಗೆದುಕೊಳ್ಳುವಲ್ಲಿ ಕ್ರಾಂತಿಯನ್ನುಂಟು ಮಾಡುತ್ತಿವೆ, ಬಿಕ್ಕಟ್ಟುಗಳಿಗೆ ಕೇವಲ ಪ್ರತಿಕ್ರಿಯಾತ್ಮಕವಲ್ಲದ ಆದರೆ ಸವಾಲುಗಳನ್ನು ನಿರೀಕ್ಷಿಸುವಲ್ಲಿ ಪೂರ್ವ ಭಾವಿಯಾಗಿರುವ ಚುರುಕುಬುದ್ಧಿಯ ವ್ಯವಹಾರ ಮಾದರಿಗಳನ್ನು ಅಳವಡಿಸಿಕೊಳ್ಳಲು ಉದ್ಯಮಗಳಿಗೆ ಅಧಿಕಾರ ನೀಡುತ್ತಿವೆ.

ಈ ಫಾರ್ವರ್ಡ್-ಥಿಂಕಿಂಗ್ ವಿಧಾನವು ಪ್ರತಿಕ್ರಿಯೆಯಿಂದ ಸನ್ನದ್ಧತೆಗೆ ಬದಲಾವಣೆಯನ್ನು ಒತ್ತಿಹೇಳುತ್ತದೆ, ಅದರ ಕೇಂದ್ರದಲ್ಲಿ ಸ್ಥಿತಿಸ್ಥಾಪಕತ್ವವನ್ನು ಸಕ್ರಿಯಗೊಳಿಸುತ್ತದೆ.

ಕರ್ನಾಟಕವು ಈ ದೃಷ್ಟಿಕೋನವನ್ನು ಉದಾಹರಿಸುತ್ತದೆ, ಅಲ್ಲಿ ಸರ್ಕಾರ ಮತ್ತು ಕಾರ್ಪೊರೇಟ್ ವಲಯಗಳು ನಾವೀನ್ಯತೆ-ಚಾಲಿತ, ಚೇತರಿಸಿಕೊಳ್ಳುವ ಆರ್ಥಿಕತೆ ಯನ್ನು ಉತ್ತೇಜಿಸಲು ಸಹಕರಿಸುತ್ತವೆ.


ಉದಯವಾಹಿನಿ ಚಿತ್ರ

**ಅಸೋಚಾಮ್ ಆಯೋಜಿಸಿದ್ದ ವ್ಯಾಪಾರದ ಸ್ಥಿತಿಸ್ಥಾಪಕತ್ವ ಮತ್ತು ಅಪಾಯ ತಗ್ಗಿಸುವಿಕೆ ಕುರಿತ ಜಾಗತಿಕ ಶೃಂಗಸಭೆಯಲ್ಲಿ ಕರ್ನಾಟಕ ಸರ್ಕಾರದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಐಎಎಸ್ ಪ್ರಧಾನ ಕಾರ್ಯದರ್ಶಿ ಡಾ. ಎಸ್.ಸೆಲ್ವಕುಮಾರ್ ಹೇಳಿದರು.**

# ಸಿಸಿಬಿ ಮತ್ತೊಂದು ಕಾರ್ಯಾಚರಣೆ ಇಬ್ಬರು ವಿದೇಶಿ ಪೆಡ್ಲರ್‌ಗಳ ಬಂಧನ

• ಉದಯವಾಹಿನಿ, ಬೆಂಗಳೂರು

ಇನ್ನೇನು ಕೆಲವೇ ದಿನಗಳಲ್ಲಿ ಹೊಸ ವರ್ಷಾಚರಣೆ ಆಗಮಿಸಲಿದ್ದು, ಬೆಂಗಳೂರು ನಗರಕ್ಕೆ ಗಾಂಜಾ ಘಾಟು ಬಡಿದಿದೆ. ಸಂಬಂಧ ಖಚಿತ ಮಾಹಿತಿಯ ಮೇರೆಗೆ ಸಿಸಿಬಿ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿದ್ದು, ಇಬ್ಬರು ವಿದೇಶಿ ಡ್ರಗ್ ಪೆಡ್ಲರ್‌ಗಳನ್ನು ಇದೀಗ ಸೋಲದೇವನಹಳ್ಳಿಯ ಬಳಿ ಖಚಿತ ಮಾಹಿತಿಯ ಮೇರೆಗೆ ಸಿಸಿಬಿ ಪೊಲೀಸರು ದಾಳಿ ಮಾಡಿ ನೈಜಿರಿಯ ಮೂಲದ ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿದ್ದಾರೆ. ವ್ಯವಹಾರ ಈ ಕರ್ನಾಟಕ ಹೌದು ಬೆಂಗಳೂರಿನಲ್ಲಿ ಸಿಸಿಬಿ ಪೊಲೀಸರು ಮತ್ತೊಂದು ಕಾರ್ಯಾಚರಣೆ ನಡೆಸಿದ್ದು, ಇಬ್ಬರು ವಿದೇಶಿ ಡ್ರಗ್ ಪೆಡ್ಲರ್‌ಗಳ ಬಂಧನವಾಗಿದ್ದು, ಬಂಧಿತರ ಬಳಿ ಇದ್ದ 3 ಕೋಟಿ ಮೌಲ್ಯದ ಸಿಂಥೆಟಿಕ್ ಡ್ರಗ್ಸ್ ಜಪ್ತಿ ಮಾಡಿಕೊಳ್ಳಲಾಗಿದೆ. ಸೋಲದೇವನಹಳ್ಳಿ ಬಳಿ ಆರೋಪಿಗಳು ಡ್ರಗ್ ಸಂಗ್ರಹಿಸಿದ್ದರು. ಬಂಧಿತರಿಂದ ಒಂದು ಕೆಜಿ 520ರ ಎಂಡಿಎಂಎ ಕ್ರಿಸ್ಟಲ್ 202 ಗ್ರಾಂ ಕೊಕೇನ್ ಗ್ರಾಂ ಎಂಡಿಎಂಎ ಎಕ್ಸ್‌ಟೆಸ್ಸಿ ಜಪ್ತಿ ಮಾಡಿಕೊಳ್ಳಲಾಗಿದೆ.ಬೆಂಗಳೂರಿನಲ್ಲಿ ನ್ಯೂ ಇಯರ್‌ಗೆ ಡ್ರಗ್ಸ್ ಮಾಡಲು ಸಜ್ಜಾಗಿದ್ದರು ಎನ್ನಲಾಗಿದೆ. ಮುಂಬೈನಿಂದ ಬೆಂಗಳೂರಿಗೆ ಡ್ರಗ್ಸ್ ಪೂರೈಸುತ್ತಿದ್ದರು ಎಂದು ತಿಳಿದುಬಂದಿದೆ. ವೈದ್ಯಕೀಯ ವೀಸಾದ ಅಡಿ ಭಾರತಕ್ಕೆ ಡ್ರಗ್ ಪೆಡಲ್‌ಗಳು ಬಂದಿದ್ದರು ಹಿಂದೆ ಮುಂಬೈ ಹೈದರಾಬಾದ್‌ನಲ್ಲಿ ಇಬ್ಬರನ್ನು ಬಂಧಿಸಲಾಗಿತ್ತು ಎಂದು ತಿಳಿದುಬಂದಿದೆ.

# ಬಿಜೆಪಿ ಹೋರಾಟದಲ್ಲಿ ಕಾಣಿಸಿಕೊಂಡ ಮುನಿರತ್ನ! ಡಿಕೆಶಿ ಬಗ್ಗೆ ಹೇಳಿದ್ದೇನು?

• ಉದಯವಾಹಿನಿ, ಬೆಂಗಳೂರು

ಜಾತಿ ನಿಂದನೆ, ಅತ್ಯಾಚಾರ ಪ್ರಕರಣದಲ್ಲಿ ಬಂಧನಕ್ಕೊಳಗಾಗಿ ಜಾಮೀನಿನ ಮೇಲೆ ಬಿಡುಗಡೆಗೊಂಡಿರುವ ಬಿಜೆಪಿ ಶಾಸಕ ಮುನಿರತ್ನ ಇದೀಗ ಮೊದಲ ಬಾರಿಗೆ ಬಿಜೆಪಿ ಪ್ರತಿಭಟನೆಯಲ್ಲಿ ಕಾಣಿಸಿಕೊಂಡರು. ಪರಪ್ಪನ ಅಗ್ರಹಾರ ಜೈಲಿನಲ್ಲಿ ನ್ಯಾಯಾಂಗ ಬಂಧನದಲ್ಲಿದ್ದ ಮುನಿರತ್ನಗೆ ಜಾಮೀನು ಸಿಕ್ಕಿತ್ತು. ಹೀಗಿದ್ದರೂ ಅವರು ಎಲ್ಲೂ ಕಾಣಿಸಿಕೊಂಡಿರಲಿಲ್ಲ. ಆದರೆ ಶುಕ್ರವಾರ ನಗರದ ಫ್ರೀಡಂ ಪಾರ್ಕ್‌ನಲ್ಲಿ ನಡೆದ ವಕ್ಫ್ ವಿರೋಧಿ ಪ್ರತಿಭಟನೆಯಲ್ಲಿ ಮೊದಲ ಬಾರಿಗೆ ಕಾಣಿಸಿಕೊಂಡರು.

ವಕ್ಫ್ ವಿರೋಧಿ ಪ್ರತಿಭಟನೆಯಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಅಲ್ಲಾವುದ್ದೀನ್ ಖಿಲ್ಜಿ, ಔರಂಗಜೇಬ್, ನಿಜಾಮ ಎಲ್ಲೆಲ್ಲಿ ಕೈ ಮುಟ್ಟಿದ್ದಾರೆ ಅದು ನಮ್ಮದೆಂದು ಹೇಳುವ ದಿನ ಮುಂದೆ ಬರಲಿದೆ. ನಮ್ಮ ದೇವಸ್ಥಾನಗಳಿಗೆ ಪಹಣಿ ಸಿದ್ಧವಾಗುತ್ತಿದೆ. ಮುಂದಿನ ಐವತ್ತು, ನೂರು ವರ್ಷಗಳಲ್ಲಿ ನಮಗಾಗುತ್ತದೆ ಎಂಬ ಉದ್ದೇಶದಲ್ಲಿ ಪಹಣಿ ಮಾಡಲಾಗುತ್ತಿದೆ. ಒಮ್ಮೆ ಪಹಣಿ ಬಂದ ಬಳಿಕ ಬದಲಾವಣೆ ಅಸಾಧ್ಯ ಎಂದು ಹೇಳಿದರು.

ಇನ್ನು ಇದೇ ಸಂದರ್ಭದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧನೂ ಮುನಿರತ್ನ ಪರೋಕ್ಷವಾಗಿ ಟಾಂಗ್ ಕೊಟ್ಟ ಪ್ರಸಂಗವೂ ನಡೆಯಿತು. ಜಯನಗರ ಶಾಸಕ ಸಿಕೆ ರಾಮಮೂರ್ತಿ ಅವರ ಕುರಿತಾಗಿ ಡಿಕೆ ಶಿವಕುಮಾರ್ ಆಡಿರುವ ಮಾತನ್ನು ಉಲ್ಲೇಖಿಸುತ್ತಾ, ತಗ್ಗಿ ಬಗ್ಗಿ ನಡೆದಿಲ್ಲ ಎಂಬ ಕಾರಣಕ್ಕಾಗಿ ನಿನಗೆ ಅನುದಾನ ಸಿಕ್ಕಿಲ್ಲ. ನಾನು ಕಾಲು ಹಿಡಿದುಕೊಂಡಿದ್ದೇನೆ. ನನಗೆ ಎಲ್ಲಿ ಅನುದಾನ ಕೊಟ್ಟಿಲ್ಲ ಎಂದರು. ಆದರೆ ನನಗೆ ಬೇರೆ ರೀತಿಯಲ್ಲಿ ಅನುದಾನ ಸಿಕ್ಕಿದೆ. ನಿನಗೂ ಸಿಗುತ್ತದೆ ಎಂದು ಪರೋಕ್ಷವಾಗಿ ಡಿಕೆ ಶಿವಕುಮಾರ್ ಅವರ ಹೆಸರನ್ನು ಉಲ್ಲೇಖ ಮಾಡದೆ ಟೀಕಿಸಿದರು. ಅಲ್ಲದೆ ಇದೇ ಸಂದರ್ಭದಲ್ಲಿ ಜಮೀರ್ ಜಮೀರ್ ಅಹ್ಮದ್ ಖಾನ್ ಅವರ ಬಗ್ಗೆಯೂ ಮಾತನಾಡಿದ ಮುನಿರತ್ನ, ಓರ್ವ ಸಚಿವರು ವರ್ಣದ ಬಗ್ಗೆ ಮಾತನಾಡುತ್ತಾರೆ. ಅದನ್ನು ಸಮರ್ಥನೆ ಮಾಡುವವರು ಬೇರೆ ಇದ್ದಾರೆ ಎಂದು ಹೇಳಿದರು. ಅತ್ಯಾಚಾರ, ಬ್ಲ್ಯಾಕ್ ಮೇಲ್ ಹಾಗೂ ರಾಜಕಾರಣಿಗಳಿಗೆ ಎಚ್‌ಐವಿ ಸೋಂಕು ಹರಡಿಸುವ ಷಡ್ಯಂತ್ರದ ಆರೋಪದಲ್ಲಿ ಮುನಿರತ್ನ ಬಂಧನಕ್ಕೆ ಒಳಗಾಗಿದ್ದರು. ಇವರ ವಿರುದ್ಧ ಈಗಾಗಲೇ ಎಸ್‌ಐಟಿ ರಚನೆ ಮಾಡಲಾಗಿದೆ. ಇನ್ನು ಮುನಿರತ್ನ ವಿರುದ್ಧ ಆರೋಪ ಕೇಳಿ ಬಂದ ಸಂದರ್ಭದಲ್ಲಿ ಬಿಜೆಪಿ ನೋಟಿಸ್ ಜಾರಿ ಮಾಡಿತ್ತು. ಈ ವಿಚಾರವೂ ಪರ ವಿರೋಧ ಚರ್ಚೆಗೆ ಗ್ರಾಸವಾಗಿತ್ತು.


ಉದಯವಾಹಿನಿ ಚಿತ್ರ

**ಇನ್ನು ಇದೇ ಪ್ರತಿಭಟನೆಯಲ್ಲಿ ಮಾತನಾಡುವ ಸಂದರ್ಭದಲ್ಲಿ ಶಾಸಕ ಮುನಿರತ್ನ ಹೇಳಿಕೆಗೆ ಆರ್ ಅಶೋಕ್ ಕೂಡಾ ಧ್ವನಿಗೂಡಿಸಿದರು. ನಮ್ಮ ಟ್ಯಾಕ್ಸ್ ನಮ್ಮ ಹಕ್ಕು. ಆದರೆ ತಗ್ಗಿ ಬಗ್ಗಿ ನಡೆಯಬೇಕು ಎಂದು ಡಿಸಿಎಂ ಹೇಳ್ತಾರೆ. ಹಾಗಾದರೆ ನಿರ್ಮಲಾ ಸೀತಾರಾಮನ್ ನೀವು ತಗ್ಗಿ ಬಗ್ಗಿ ನಡೆಯಬೇಕು ಎಂದರೆ ನಿಮ್ಮ ಕಥೆ ಏನು? ಎಂದು ಪ್ರಶ್ನಿಸಿದರು.**

# ಬಿಜೆಪಿಗರಿಗೆ ಸಚಿವ ರಾಮಲಿಂಗಾರೆಡ್ಡಿ ಪ್ರಶ್ನೆ

## ಸರ್ಕಾರಿ ನೌಕರಿಯಲ್ಲಿದ್ದು ಬಿಪಿಎಲ್ ಕಾರ್ಡ್ ಪಡೆಯುವುದು ನ್ಯಾಯವೇ?

• ಉದಯವಾಹಿನಿ, ಬೆಂಗಳೂರು

ಅನರ್ಹರು ಬಡವರ ಹೆಸರಿನಲ್ಲಿ ಕಾರ್ಡ್ ಹೊಂದಿದ್ದರೇ ಅವರ ಕಾರ್ಡ್ ಮಾತ್ರ ರದ್ದು ಮಾಡಲಾಗುತ್ತದೆ. ಇಷ್ಟು ಸ್ಪಷ್ಟವಾಗಿ ಹೇಳಿದ್ದಾಗ್ಯೂ, ಸಹ ಬಿಜೆಪಿ ಅವರಿಗೆ ವಿಷಯಾಂತರ ಮಾಡಿ ಜನರನ್ನು ದಾರಿತಪ್ಪಿಸಿ, ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಚಾಳಿ ಕರಗತವಾಗಿದೆ. ಸರ್ಕಾರಿ ನೌಕರಿಯಲ್ಲಿದ್ದು ಬಿಪಿಎಲ್ ಕಾರ್ಡ್ ಪಡೆಯುವುದು ನ್ಯಾಯವೇ ಎಂಬುದಾಗಿ ಮುಜರಾಯಿ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪ್ರಶ್ನಿಸಿದ್ದಾರೆ.

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವಂತ ಅವರು, ಮುಖ್ಯಮಂತ್ರಿಗಳು ಹಾಗೂ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವರು ಸ್ಪಷ್ಟವಾಗಿ ಹೇಳಿದ್ದಾರೆ. ಅರ್ಹರಾದವರಿಗೆ ಯಾವುದೇ ರೀತಿ ಯಿಂದಲೂ ಪಡಿತರ ಕಾರ್ಡ್ ರಾಗುವುದಿಲ್ಲ ಎಂದು ಅನರ್ಹರು ಬಡವರ ಹೆಸರಿನಲ್ಲಿ ಕಾರ್ಡ್ ಹೊಂದಿದ್ದರೆ ಅವರ ಕಾರ್ಡ್ ಅನ್ನು ಮಾತ್ರ ರದ್ದು ಮಾಡಲಾಗುತ್ತದೆ ಎಂದಿದ್ದಾರೆ. GET IT ON Google Play App Store Refresh Get the latest version ಷ್ಟು ಸ್ಪಷ್ಟವಾಗಿ ಹೇಳಿದ್ದಾಗ್ಯೂ, ಸಹ ಬಿಜೆಪಿ ಅವರಿಗೆ ವಿಷಯಾಂತರ ಮಾಡಿ ಜನರನು ದಾರಿತಪ್ಪಿಸಿ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಚಾಳಿ ಕರಗತವಾಗಿದೆ. ಸರ್ಕಾರಿ ನೌಕರಿಯಲ್ಲಿದ್ದು ಬಿಪಿಎಲ್ ಕಾರ್ಡ್ ಪಡೆಯುವುದು ನ್ಯಾಯವೇ? ಎಂದು ಪ್ರಶ್ನಿಸಿದ್ದಾರೆ. ನಮ್ಮದು ಬಡವರ ಪರ ಇರುವ ಸರ್ಕಾರ ಕಾರ್ಪೊರೇಟ್ ಪರ ಇರುವ ಸರ್ಕಾರ ಅಲ್ಲ. ಸದ್ದಿಲ್ಲದೇ ಕೇಂದ್ರ ಸರ್ಕಾರದಿಂದ ಪ್ರಹಾರ! 5.8 ಕೋಟಿ ಕಾರ್ಡ್‌ಗಳನ್ನು ರದ್ದು ಮಾಡಲು ಹೊರಟಿರುವ ಬಿಜೆಪಿ ಸರ್ಕಾರದ ಬಗ್ಗೆ ಚಕಾರವೆತ್ತುವ ಎದೆಗಾರಿಕೆ ಅವರಲ್ಲಿದೆಯೇ ಬಿ.ಪಿ.ಎಲ್ ಕಾರ್ಡ್ ರದ್ದು ಕುರಿತಂತೆ ನಮ್ಮ ರಾಜ್ಯ ಸರ್ಕಾರದ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿರುವ ರಾಜ್ಯ ಬಿಜೆಪಿಯ ಮಹಾನ್ ಹೋರಾಟಗಾರರೆಲ್ಲರೂ ಈಗ ಗಪ್-ಚುಪ್ ಎಂದು ವಾಗ್ದಾಳಿ ನಡೆಸಿದ್ದಾರೆ.

ಪ್ರಹ್ಲಾದ್ ಜೋಷಿ, ವಿಜಯೇಂದ್ರ, ಅಶೋಕ್, ಶೋಭಾ ಕರಂದ್ಲಾಜೆ ಇವರೆಲ್ಲಾ ಕೇಂದ್ರದ ವಿರುದ್ಧ ಹೋರಾಟ ಮಾಡುವಿರಾ ರಾಜ್ಯ ಬಿಜೆಪಿಯ ಅಧಿಕೃತ ಅಧ್ಯಕ್ಷರಾದ ಬಿವೈ ವಿಜಯೇಂದ್ರ ಅವರನ್ನು ಕೆಳಗಿಳಿಸಲು ಆತುರದಲ್ಲಿರುವ ಬಿಜೆಪಿ ಬಂಡಾಯ ಗುಂಪಿನ ಅಧ್ಯಕ್ಷರಾದ ಬಸನಗೌಡ ಪಾಟೀಲ್ ಯತ್ನಾಳ್ ಅವರೇ ಇದಕ್ಕೆ ಏನಂತೀರಾ? ನಿಮ್ಮ ನಿಮ್ಮಲ್ಲೇ ಅಸ್ತಿತ್ವಕ್ಕಾಗಿ ಹೋರಾಡುತ್ತಿರುವ ಬಿಜೆಪಿ ನಾಯಕರೇ ಪ್ರಧಾನಿ ನರೇಂದ್ರ ಮೋದಿ ನಿವಾಸ 7- LKM ಮುಂದೆ ಧರಣಿ ಮಾಡಿ, ಬಿಪಿಎಲ್ ರದ್ದಾದ ಅರ್ಹರಿಗೆ ನ್ಯಾಯ ಕೊಡಿಸುವಿರಾ ಎಂದು ಕೇಳಿದ್ದಾರೆ.




**5.8 ಕೋಟಿ ಕಾರ್ಡ್‌ಗಳನ್ನು ರದ್ದು**

**ಎಸ್.ಎಂ.ಕೃಷ್ಣ ರವರು ಮುಖ್ಯಮಂತ್ರಿಗಳಾಗಿದ್ದಾಗ 2003ರಲ್ಲಿ ನಾನು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವನಾಗಿದ್ದಾಗ ನಗರ ಪ್ರದೇಶದಲ್ಲಿನ ಬಡವರಿಗೆ ಮೊದಲ ಬಾರಿಗೆ ಬಿಪಿಎಲ್ ಕಾರ್ಡ್ ಗಳನ್ನು ವಿತರಿಸುವ ಯೋಜನೆ ಜಾರಿಗೆ ತಂದಿದ್ದು, ಗ್ರಾಮಾಂತರ ಪ್ರದೇಶಗಳಲ್ಲಿ ಅತೀ ಹೆಚ್ಚು ದಾಖಲೆ ಮಟ್ಟದ ರೇಷನ್ ಕಾರ್ಡ್ ಗಳನ್ನು ವಿತರಿಸಿದ್ದು ನನ್ನ ಮತ್ತು ನಮ್ಮ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲೇ ಎಂದು ತಿಳಿಸಿದ್ದಾರೆ.**

### ಸಾಮಾಜಿಕ ಕಳಕಳಿ



**ಹೆಚ್.ಎಸ್.ಪ್ರತಿಮಾ ಹಾಸನ್**
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

ಜನನಿಯೂ ನೀವಾಗಿ ಬಾಗುತಲೆ ಸೇವೆಯಲಿ
ಮನವನದು ಗೆಲ್ಲುತಲಿ ಕಾರ್ಯದಲ್ಲಿ
ಸನಿಹದಲಿ ಇರುತಲಿಯೆ ಮಹಿಳೆಯರಿಗೆ ಪ್ರೋತ್ಸಾಹಿಸಿ
ಕನಿಕರವ ತೋರುವಿರಿ ಲಕ್ಷ್ಮಿ ದೇವಿ.....



**ದಿನಕ್ಕೊಂದು ಮುಕ್ತಕ -31**

**ಭಾವಾರ್ಥ:** ತಾಯಿಯು ಜನನಿಯಾಗಿ ಎಲ್ಲೆಡೆಯೂ ಬಾಗುತ ತನ್ನದೇ ಆದಂತಹ ಸೇವೆಯನ್ನು ಮಾಡುವುದರಲ್ಲಿ ಮೊದಲಿಗಳಾಗಿರುತ್ತಾಳೆ. ತನ್ನ ಆಸೆ ಆಕಾಂಕ್ಷೆಗಳನ್ನು ಎಷ್ಟೋ ಬಾರಿ ಬಲಿ ಮಾಡಿ ಜೀವನದಲ್ಲಿ ಸಂತಸದ ಬದುಕಿನಂತೆ ವ್ಯಕ್ತಪಡಿಸುತ್ತಾ ಸಾಗುತ್ತಾಳೆ.
ಹಾಗೆಯೇ ಎಲ್ಲಾರ ಮನವನ್ನು ಗೆಲ್ಲುತಲಿ ಕೆಲಸವನ್ನು ಮಾಡುವುದರಲ್ಲಿ ಮುಂದಿರುತ್ತಾಳೆ. ಹಾಗೆಯೇ ಇತರರ ಕಷ್ಟಗಳನ್ನು ಕಂಡು ಸಹಕಾರ ಮಾಡುತ್ತ ಮಹಿಳೆಯರಿಗೂ ಪ್ರೋತ್ಸಾಹ ಸಲಹೆಗಳನ್ನು ನೀಡುತ್ತ , ಅವರಿಗೆ ಕನಿಕರವನ್ನು ತೋರಿಸುತ್ತ ಸಾಗುತ್ತಾಳೆ. ಅದಕ್ಕೆ ಅಲ್ಲವೇ ಆಕೆಯನ್ನು ಮಹಾತ್ಯಾಗಿ ಎಂದು ಕರೆಯುವರು.ಆಕೆ ತನ್ನ ಮಕ್ಕಳನ್ನು ಸಾಕುವುದರಲ್ಲಿ ಯಶಸ್ವಿ ಆಗುತ್ತಾಳೆ.

# ಗಾಜಾ ಮೇಲೆ ಅತಿಕ್ರಮಣ ಮೂಲಕ ಮಾನವೀಯತೆ ಮೇಲೆ ಕ್ರೌರ್ಯ

## ನಾಗರಿಕರ ಮಾರಣಹೋಮ ಆರೋಪ: ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಬಂಧನಕ್ಕೆ ಐಸಿಸಿ ವಾರಂಟ್



**ವಿದೇಶ ಪ್ರವಾಸ ಕೈಗೊಳ್ಳುವುದು ತುಸು ಕಷ್ಟ**

**ನೆದರ್ಲೆಂಡ್:** ಪ್ಯಾಲೆಸ್ತೀನ್ ಪ್ರಾಂತ್ಯದ ಗಾಜಾಪಟ್ಟಿಯಲ್ಲಿ ನಾಗರಿಕರ ಮಾರಣ ಹೋಮಕ್ಕೆ ಕಾರಣವಾದ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಮಾಜಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್, ಹಮಾಸ್ ನಾಯಕ ಮೊಹಮ್ಮದ್ ದಿಯಾನ್ ಅಲ್-ಮಸ್ರಿ ವಿರುದ್ಧ ಯುದ್ಧ ಅಪರಾಧದ ಆರೋಪದ ಮೇಲೆ ಅಂತಾರಾಷ್ಟ್ರೀಯ ಕ್ರಿಮಿನಲ್ ಕೋರ್ಟ್(ಐಸಿಸಿ) ಬಂಧನ ವಾರಂಟ್ ಜಾರಿ ಮಾಡಿದೆ.

ಕಳೆದ 13 ತಿಂಗಳಲ್ಲಿ ಹಮಾಸ್, ಇಸ್ರೇಲ್ ನಡುವೆ ನಡೆಯುತ್ತಿರುವ ಸಂಘರ್ಷದಲ್ಲಿ 45 ಸಾವಿರಕ್ಕೂ ಹೆಚ್ಚು ಜನ ಬಲಿಯಾಗಿದ್ದಾರೆ. ನಾಗರಿಕರ ಸಾಮೂಹಿಕ ಮಾರಣಹೋಮ ಪ್ರಶ್ನಿಸಿ ಐಸಿಸಿ ಪ್ರಾಸಿಕ್ಯೂಟರ್ ಕರೀಂ ಖಾನ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೇಗ್‌ನಲ್ಲಿರುವ ಅಂತಾ ರಾಷ್ಟ್ರೀಯ ಕ್ರಿಮಿನಲ್ ಕೋರ್ಟ್, ನೆತನ್ಯಾಹು, ಗ್ಯಾಲಂಟ್ ಹಾಗೂ ಅಲ್ ಮಸ್ರಿ ವಿರುದ್ಧ ಬಂಧನ ವಾರಂಟ್ ಜಾರಿ ಮಾಡಿದೆ. ಇಸ್ರೇಲ್ ದಾಳಿಯಲ್ಲಿ ಮೃತಪಟ್ಟಿರುವ ಹಮಾಸ್‌ನ ಮುಖ್ಯಸ್ಥರಾಗಿದ್ದ ಯಾಹ್ಯಾ ಸಿನ್ವರ್, ಇಸ್ಮಾಯಿಲ್ ಹನಿಯೇ ವಿರುದ್ಧವೂ ವಾರಂಟ್ ಮಾಡಿ ಮಾಡಲಾಗಿದೆ.

ಇಸ್ರೇಲ್ ಸೇರಿದಂತೆ ಅಮೆರಿಕ ಮಿತ್ರಕೂಟ ಅಂತಾರಾಷ್ಟ್ರೀಯ ನ್ಯಾಯಾಲ ಯದ ಸದಸ್ಯರಲ್ಲದ ಕಾರಣ ವಾರಂಟ್ ಜಾರಿ ಯಿಂದ ಪ್ರಯೋಜನ ಇಲ್ಲ ಎಂದು ವಿಶ್ಲೇಷಿಸಲಾಗಿದೆ. ಆದರೆ, ಅರೆಸ್ಟ್ ವಾರಂಟ್ ಜಾರಿಯಾದ ಪರಿಣಾಮ ನೆತನ್ಯಾಹು ಹಾಗೂ ಗ್ಯಾಲಂಟ್ ವಿದೇಶ ಪ್ರವಾಸ ಕೈಗೊಳ್ಳುವುದು ತುಸು ಕಷ್ಟಕರವಾಗಲಿದೆ. ಕಳೆದ ವರ್ಷ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ವಿರುದ್ಧವೂ ಅರೆಸ್ಟ್ ವಾರಂಟ್ ಜಾರಿ ಮಾಡಲಾಗಿದೆ. ಆದರೆ, ಇದುವರೆಗೂ ಅವರನ್ನು ಬಂಧಿಸಲು ಸಾಧ್ಯವಾಗಿಲ್ಲ.

ಐಸಿಸಿ ಕೋರ್ಟ್ ಹೊರಡಿಸಿರುವ ಅರೆಸ್ಟ್ ವಾರಂಟ್‌ಗೆ ಇಸ್ರೇಲ್ ಪ್ರಧಾನಿ ನೆತನ್ಯಾಹು, ಅಮೆರಿಕ ಅಧ್ಯಕ್ಷ ಜೋಬೈಡನ್ ಖಂಡಿಸಿದ್ದಾರೆ. ಕರೀಂ ಖಾನ್ ನಡೆ ಅವಮಾನಕರ ಹಾಗೂ ಯಹೂದಿ ವಿರೋಧಿ ನೀತಿಯಾಗಿದೆ, ಎಂದು ಕಿಡಿಕಾರಿದ್ದಾರೆ.

**ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಅಲ್ಲಿನ ಮಾಜಿ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ವಿರುದ್ಧ ಅಂತಾರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯವು (ಐಸಿಸಿ) 'ಯುದ್ಧ ಅಪರಾಧ', 'ಮಾನವೀಯತೆ ವಿರುದ್ಧದ ಅಪರಾಧ'ಗಳಿಗಾಗಿ ಬಂಧನ ವಾರಂಟ್ ಹೊರಡಿಸಿದೆ. ಹಮಾಸ್ ಸೇನಾ ಮುಖ್ಯಸ್ಥ ಮೊಹಮ್ಮದ್ ದಿಯಾನ್ ಅಲ್-ಮಸ್ರಿ ವಿರುದ್ಧ ಕೂಡ ವಾರಂಟ್ ಜಾರಿಯಾಗಿದೆ.**

### ಉಕ್ರೇನ್ ಮೇಲೆ ರಷ್ಯಾದಿಂದ ಖಂಡಾಂತರ ಕ್ಷಿಪಣಿ ಪ್ರಯೋಗ

**ರಷ್ಯಾ-ಉಕ್ರೇನ್ ನಡುವಿನ ಸಮರ ಅಂತ್ಯಗೊಳಿಸಲು ಭಾರತವೂ ಸೇರಿದಂತೆ ಕೆಲವು ರಾಷ್ಟ್ರಗಳು ಪ್ರಯತ್ನಿಸುತ್ತಿದ್ದರೂ ಬಿಕ್ಕಟ್ಟು ಇನ್ನಷ್ಟು ಉಲ್ಬಣವಾಗುವ ಲಕ್ಷಣಗಳು ಕಾಣಿಸುತ್ತಿವೆ. ಎರಡು ರಾಷ್ಟ್ರಗಳ ನಡುವಿನ ಸಂಘರ್ಷ ಮತ್ತೊಂದು ಮಜಲು ತಲುಪಿದ್ದು, ರಷ್ಯಾ ಮೊದಲ ಬಾರಿಗೆ ಉಕ್ರೇನ್ ವಿರುದ್ಧದ ಸಮರದಲ್ಲಿ ಖಂಡಾಂತರ ಕ್ಷಿಪಣಿ ಪ್ರಯೋಗಿಸಿದೆ.**

ನಮ್ಮ ಡ್ನಿಪ್ರೊ ನಗರದಲ್ಲಿನ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ರಷ್ಯಾ ಪಡೆಗಳು ಅಸ್ಟ್ರಾಖಾನ್ ವಲಯದಿಂದ ಖಂಡಾಂತರ ಕ್ಷಿಪಣಿ ಉಡಾಯಿಸಿದೆ ಎಂದು ಉಕ್ರೇನ್ ವಾಯುಪಡೆ ಹೇಳಿಕೆಯಲ್ಲಿ ತಿಳಿಸಿದೆ.

ಆದರೆ ರಷ್ಯಾ ಈ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ. 5,800 ಕಿ.ಮೀ ದೂರದ ಗುರಿ ತಲುಪಬಲ್ಲ ಆರ್‌ಎಸ್-26 ರುಬೆಜ್ ಕ್ಷಿಪಣಿಯನ್ನು ರಷ್ಯಾ ಪ್ರಯೋಗಿಸಿದೆ ಎಂದು ಕೆಲವು ಅಂತಾರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ. ಕೆಲವು ದಿನಗಳ ಹಿಂದಷ್ಟೇ ಉಕ್ರೇನ್ ಪಡೆಗಳು ಅಮೆರಿಕ ಹಾಗೂ ಬ್ರಿಟನ್ ನಿರ್ಮಿತ ಕ್ಷಿಪಣಿಗಳನ್ನು ರಷ್ಯಾದ ಕುರ್ಸ್ಕ್ ಪ್ರದೇಶದಲ್ಲಿನ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಉಡಾವಣೆಗೊಳಿಸಿತ್ತು. ಇದಕ್ಕೆ ಪ್ರತೀಕಾರವಾಗಿ ರಷ್ಯಾ ಖಂಡಾಂತರ ಕ್ಷಿಪಣಿ ಪ್ರಯೋಗಿಸಿದೆ ಎಂದು ಹೇಳಲಾಗಿದೆ. ಉಕ್ರೇನ್ ಮೇಲೆ ರಷ್ಯಾ ಅಣ್ವಸ್ತ್ರ ಬಳಕೆ ಮಾಡುವ ಆತಂಕ ಹೆಚ್ಚುತ್ತಿದ್ದು, ಈ ಬಗ್ಗೆ ಸ್ಪಷ್ಟನೆ ನೀಡಿದ್ದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ತಮ್ಮ ರಾಷ್ಟ್ರದ ಅಣ್ವಸ್ತ್ರ ನೀತಿಯಲ್ಲಿ ಬದಲಾವಣೆ ತರುವುದಾಗಿ ಘೋಷಿಸಿದ್ದರು.

**ಖಚಿತತೆ ಇಲ್ಲ:** ರಷ್ಯಾ ಖಂಡಾಂತರ ಕ್ಷಿಪಣಿ ಸೇರಿದಂತೆ ಒಟ್ಟು 8 ಕ್ಷಿಪಣಿಗಳನ್ನು ಡ್ನಿಪ್ರೊ ನಗರದ ಮೇಲೆ ಪ್ರಯೋಗಿಸಿದೆ. ಇದರಲ್ಲಿ ನಮ್ಮ ಪಡೆಗಳು ಆರು ಮಿಸೈಲ್‌ಗಳನ್ನು ಹೊಡೆದುರುಳಿಸಿವೆ ಎಂದು ಉಕ್ರೇನ್ ವಾಯುಪಡೆ ಹೇಳಿಕೊಂಡಿದೆ. ಹಾನಿಯ ಬಗ್ಗೆ ಎರಡೂ ರಾಷ್ಟ್ರಗಳಿಂದ ಹೆಚ್ಚಿನ ಮಾಹಿತಿ ಹೊರಬಿದ್ದಿಲ್ಲ.

ಖಂಡಾಂತರ ಕ್ಷಿಪಣಿಗಳು ಬಹುಶಕ್ತಿಶಾಲಿಯಾಗಿದ್ದು, ಅಣ್ವಸ್ತ್ರ ಸಿಡಿತಲೆಗಳನ್ನು ಹಾಗೂ ಸಾಂಪ್ರದಾಯಿಕವಾಗಿ ಬಳಸಲಾಗುತ್ತಿರುವ ಬಾಂಬ್‌ಗಳನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿವೆ.


## ಅದಾನಿ ಪ್ರಕರಣದಡಿ ಭಾರತ-ಅಮೆರಿಕ ಬಾಂಧವ್ಯಕ್ಕೆ ಅಡ್ಡಿಯಿಲ್ಲ: ಶ್ವೇತಭವನ



**ವಾಷಿಂಗ್ಟನ್:** ಕೋಟ್ಯಾಧಿಪತಿ ಗೌತಮ್ ಅದಾನಿ ವಿರುದ್ಧದ ಲಂಚ ಮತ್ತು ವಂಚನೆ ಆರೋಪಗಳು ಭಾರತ ಮತ್ತು ಅಮೆರಿಕ ನಡುವಿನ ಬಾಂಧವ್ಯಕ್ಕೆ ಧಕ್ಕೆ ಉಂಟು ಮಾಡುವುದಿಲ್ಲ ಎಂದು ಶ್ವೇತಭವನ ವಿ ಶ್ವಾಸ ವ್ಯಕ್ತಪಡಿಸಿದೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕರೀನ್ ಜೀನ್-ಪಿಯರ್ ಅವರು ಅದಾನಿ ಗ್ರೂಪ್‌ನ ಅಧ್ಯಕ್ಷರಾದ ಅದಾನಿ ವಿರುದ್ಧದ ಆರೋಪಗಳ ಬಗ್ಗೆ ಬಿಡೆನ್ ಆಡಳಿತಕ್ಕೆ ತಿಳಿದಿದೆ ಎಂದು ಹೇಳಿದ್ದಾರೆ. ಅದಾನಿ ತನ್ನ ಸೋದರಳಿಯ ಸಾಗರ್ ಅ ದಾನಿ, ಇತರ ಕಾರ್ಯನಿರ್ವಾಹಕರೊಂದಿಗೆ ನ್ಯೂ ಯಾರ್ಕ್‌ನಲ್ಲಿ ಲಾಭದಾಯಕ ಸೌರ ಶಕ್ತಿಯ ಒಪ್ಪಂದಗಳನ್ನು ಪಡೆಯಲು ಬಹು-ಶತಕೋಟಿ ಡಾಲರ್ ಲಂಚ ಮತ್ತು ವಂಚನೆ ಯೋಜನೆಯಲ್ಲಿ ಅವರ ಪಾತ್ರಗಳಿಗಾಗಿ ದೋಷಾರೋಪ ಮಾಡಲಾಗಿದೆ.

ಈ ಆರೋಪಗಳ ಬಗ್ಗೆ ನಮಗೆ ತಿಳಿದಿದೆ, ಅದಾನಿ ಗ್ರೂಪ್ ವಿರುದ್ಧದ ಆರೋಪಗಳ ನಿಶ್ಚಿತಗಳ ಬಗ್ಗೆ ನಾನು ನಿಮನ್ನು ಸೆಬಿ ಮತ್ತು ಡಿಒಜೆಗೆ ಉಲ್ಲೇಖಿಸಬೇಕಾಗಿದೆ ಎಂದು ಜೀನ್-ಪಿಯರ್ ಹೇಳಿದರು. ಲಂಚ ಹಗರಣದ ಬಗ್ಗೆ ಭಾರತದೊಂದಿಗೆ ಯಾವುದೇ ಸಂಭಾವ್ಯ ಕುಸಿತವನ್ನು ಕಡಿಮೆಗೊಳಿಸುತ್ತಾ, ನಾನು ಹೇಳುವುದೇನೆಂದರೆ, ಯುಎಸ್ ಮತ್ತು ಭಾರತ ಸಂಬಂಧದ ಮೇಲೆ, ಅದು ಅತ್ಯಂತ ಬಲವಾದ ಅಡಿಪಾಯದ ಮೇಲೆ ನಿಂತಿದೆ ಎಂದು ನಾವು ನಂಬುತ್ತೇವೆ, ನಮ ಜನರ ನಡುವಿನ ಸಂಬಂಧಗಳು ಮತ್ತು ಸಂಪೂರ್ಣ ಸಹಕಾರದಲ್ಲಿ ನೆಲೆಗೊಂಡಿದೆ ಎಂದಿದ್ದಾರೆ. ಅದಾನಿ ಗ್ರೀನ್ ಎನರ್ಜಿ ಲಿಮಿಟೆಡ್ನ ಕಾರ್ಯನಿ ರ್ವಾಹಕರು, ಅಜುರೆ ಪವರ್ ಗ್ಲೋಬಲ್ ಲಿಮಿಟೆಡ್ನ ಸಿರಿಲ್ ಕ್ಯಾಬನೆಸ್ ಸೇರಿದಂತೆ ಅದಾನಿ ಮತ್ತು ಅವರ ಸಹಚರರ ವಿರುದ್ಧ ಸೆಕ್ಯುರಿಟೀಸ್, ವೈರ್ ವಂಚನೆಗೆ ಸಂಚು ರೂಪಿಸಿದ ಆರೋಪ ಹೊರಿಸಲಾಗಿದೆ.

## ಛತ್ತೀಸ್‌ಗಢ : ಎನ್‌ಕೌಂಟರ್‌ನಲ್ಲಿ 10 ನಕ್ಸಲಿಯರು ಫಿನಿಶ್



**ರಾಯ್ಪುರ:** ಛತ್ತೀಸ್ಗಢದ ಸುಕಾ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್ಕೌಂಟರ್‌ನಲ್ಲಿ 10 ಮಾವೋವಾದಿಗಳು ಹತರಾಗಿದ್ದಾರೆ. ಸುಕಾ ಜಿಲ್ಲೆಯ ದಕ್ಷಿಣ ಭಾಗದಲ್ಲಿ ಜಿಲ್ಲಾ ರಿಸರ್ವ್ ಗಾರ್ಡ್ ಸ, ಮಾವೋವಾದಿಗಳ ನಡುವೆ ನಡೆದ ಎನ್ಕೌಂಟರ್‌ನಲ್ಲಿ 10 ಮಾವೋವಾದಿಗಳು ಹತರಾಗಿ ದ್ದಾರೆ. ಐಎನ್‌ಎಸ್‌ಎಎಸ್, ಎಕೆ-47, ಎಸ್‌ಎಲ್‌ಆರ್, ಹಲವಾರು ಇತರ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ನಕ್ಸಲೀಯರು ಒಡಿಶಾ ಮೂಲಕ ಛತ್ತೀಸ್‌ಗಢ ಪ್ರವೇಶಿಸುತ್ತಿದ್ದಾರೆ ಎಂಬ ಗುಪ್ತಚರ ಮಾಹಿತಿ ಮೇರೆಗೆ ಜಿಲ್ಲಾ ಮೀಸಲು ಪಡೆ ಕಾರ್ಯಾಚರಣೆ ಆರಂಭಿಸಿದೆ.

ಶುಕ್ರವಾರ ಬೆಳ್ಳಂಬೆಳಗ್ಗೆ ಸುಕಾ ಜಿಲ್ಲೆಯ ದಕ್ಷಿಣ ಭಾಗದಲ್ಲಿ ಜಿಲ್ಲಾ ಮೀಸಲು ಪಡೆ ಕಾರ್ಯಾಚರಣೆ ಕೈಗೊಂಡಿತ್ತು. ಈ ವೇಳೆ ಭದ್ರತಾ ಪಡೆ ಮತ್ತು ಮಾವೋವಾದಿಗಳ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದ್ದು, ಈ ವೇಳೆ 10ಮಾವೋವಾದಿಗಳನ್ನು ಭದ್ರತಾ ಪಡೆ ಎನ್ಕೌಂಟರ್ ಮಾಡಿದೆ ಎಂದು ಬಸ್ತಾರ್ ಇನ್ಸ್ಪೆಕ್ಟರ್-ಜನರಲ್ ಆಫ್ ಪೊಲೀಸ್ ಪಿ ಸುಂದರರಾಜ್ ಹೇಳಿದ್ದಾರೆ. ಭದ್ರತಾ ಸಿಬ್ಬಂದಿಯ ತಂಡವು ನಕ್ಸಲೀಯರ ವಿರೋಧಿ ಕಾರ್ಯಾಚರಣೆಗೆ ಹೊರಟಿದ್ದಾಗ ಭೇಜ್ಜಿ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ಬೆಳಿಗ್ಗೆ ಗುಂಡಿನ ಚಕಮಕಿ ಪ್ರಾರಂಭವಾಯಿತು ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕಳೆದ ತಿಂಗಳು ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ 30ಕ್ಕೂ ಅಧಿಕ ಮಾವೋವಾದಿಗಳನ್ನು ಹತ್ಯೆ ಮಾಡಲಾಗಿತ್ತು. ಅಕ್ಟೋಬರ್ 4ರಂದು ಛತ್ತೀಸ್‌ಗಢದ ನಾರಾಯಣಪುರ- ದಾಂತೇವಾಡಗಡಿ ಅರಣ್ಯ ಪ್ರದೇಶದಲ್ಲಿಸಂಚು ರೂಪಿಸುತ್ತಿದ್ದ 30 ಮಾವೋವಾದಿ ನಕ್ಸಲರನ್ನು ಭದ್ರತಾ ಪಡೆಗಳು ಎನ್ಕೌಂಟರ್ ಮೂಲಕ ಹತ್ಯೆ ಮಾಡಿದೆ.

ಜಿಲ್ಲಾ ರಿಸರ್ವ್ ಗಾರ್ಡ್, ವಿಶೇಷ ಕಾರ್ಯಪಡೆ ನಕ್ಸಲ್ ನಿರ್ಮೂಲನಾ ಕಾರ್ಯಾಚರಣೆ ಪ್ರಾರಂಭಿಸಿತ್ತು. ಎಕೆ ಸರಣಿ ರೈಫಲ್ಗಳು ಮತ್ತು ಇತರ ಶಸ್ತ್ರಾಸ್ತ್ರಗಳು ಸೇರಿದಂತೆ ಹಲವಾರು ಅಸಾಲ್ಟ್ ರೈಫಲ್‌ಗಳನ್ನು ನಕಲ್ಸರ್ಗಳನ್ನು ವಶಪಡಿಸಿಕೊಳ್ಳಲಾಗಿತ್ತು ಎಂದು ಮೂಲಗಳು ತಿಳಿಸಿವೆ. ದೊಡ್ಡ ಪ್ರಮಾಣದಲ್ಲಿ ಮಾವೋವಾದಿಗಳು ಕಾರ್ಯಾಚರಣೆ ಮಾಡುತ್ತಿರುವ ವರದಿಗಳು ಬಂದ ಬಳಿಕ ಭದ್ರತಾ ಪಡೆಗಳು ಓರ್ಚಾ ಮತ್ತು ಬರ್ಸೂರ್ ಪೊಲೀಸ್ ಠಾಣೆಗಳ ವ್ಯಾಪ್ತಿಯ ಗೋವೆಲ್, ನೆಂಡೂರ್ ಮತ್ತು ತುಲ್ತುಲಿ ಗ್ರಾಮಗಳಲ್ಲ ಕಾರ್ಯಾಚರಣೆ ನಡೆಸಿತ್ತು. ಹಳ್ಳಿಗಳ ಮೂಲಕ ಕೂಂಬಿಂಗ್ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿತ್ತು. ನೆಂದೂರು-ತುಲ್ತುಲಿ ಬಳಿಯ ಕಾಡುಗಳಲ್ಲಿ ನಕ್ಸಲರು ಎದುರಾಗಿದ್ದಾರೆ.

ಈ ವೇಳೆ ಪರಸ್ಪರ ಗುಂಡಿನ ಚಮಮಕಿ ಪ್ರಾರಂಭವಾಯಿತು. ಎಚ್ಚರಿಕೆಯಿಂದ ಅವರನ್ನು ಬೆನ್ನಟ್ಟಿ ಹತ್ಯೆ ಮಾಡಲಾಗಿತ್ತು. ಭದ್ರತಾ ಪಡೆಗಳು ಕಾಡಿನ ಒಳಗೆ ಹೋಗಿ ಉಳಿದ ಕೆಲವು ಮಾವೋವಾದಿಗಳನ್ನು ಬೆನ್ನಟ್ಟುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಈ ಎನ್ಕೌಂಟರ್ ಛತ್ತೀಸ್‌ಗಡದ ಮಾವೋವಾದಿ ಬಂಡಾಯದ ವಿರುದ್ಧದ ಹೋರಾಟದಲ್ಲಿ ಭದ್ರತಾ ಪಡೆಗಳಿಗೆ ದೊರಕಿದ ದೊಡ್ಡ ಯಶಸ್ಸು ಇದಾಗಿತ್ತು.

## ಖಲಿಸ್ತಾನಿ ಉಗ್ರ ನಿಜ್ಜರ್ ಹತ್ಯೆಯಲ್ಲಿ ಮೋದಿ-ಅಮಿತ್ ಶಾ ಕೈವಾಡ



**ಮಾಧ್ಯಮಗಳ ವರದಿಯನ್ನು ತಳ್ಳಿಹಾಕಿದ ಕೆನಡಾ**

**ಒಟ್ಟಾವಾ:** ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯ ಸಂಚಿನ ಬಗ್ಗೆ ಪ್ರಧಾನಿ ನರೇಂದ್ರ ಮೋದಿಗೆ ಮೊದಲೇ ತಿಳಿದಿತ್ತು ಎಂದು ನಾವು ಹೇಳಿಲ್ಲ ಎಂದು ಹೇಳುವ ಮೂಲಕ ಮಾಧ್ಯಮ ವರದಿಯನ್ನು ಕೆನಡಾ ಸರ್ಕಾರ ಅಧಿಕೃತವಾಗಿ ತಿರಸ್ಕರಿಸಿದೆ. ಈ ಹತ್ಯೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾತ್ರವನ್ನು ಎತ್ತಿ ಹಿಡಿದ ಕೆನಡಾದ ಮಾಧ್ಯಮಗಳ ವರದಿಯನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಳ್ಳಿಹಾಕಿದ ಒಂದು ದಿನದ ನಂತರ, ಈ ಪ್ರಕರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಎಸ್.ಜೈಶಂಕರ್ ಅವರ ಪಾತ್ರವನ್ನು ಕೆನಡಾ ನಿರಾಕರಿಸಿದೆ.

ಇತ್ತೀಚೆಗೆ ಪ್ರಕಟಗೊಂಡ ವಿವಾದಾತ್ಮಕ ಮಾಧ್ಯಮ ವರದಿಯ ಬಗ್ಗೆ ಕೆನಡಾದ ಅಧ್ಯಕ್ಷ ಜಸ್ಟಿನ್ ಟ್ರುಡೊ ಸರ್ಕಾರ ಸ್ಪಷ್ಟೀಕರಣವನ್ನು ನೀಡಿದ್ದು, ಈ ವರದಿಯಲ್ಲಿ ಖಲಿಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕೈವಾಡ ಇರುವ ಬಗ್ಗೆ ಉಲ್ಲೇಖಿಸಲಾಗಿತ್ತು.

ಇದೀಗ ಈ ಮಾಧ್ಯಮ ವರದಿಯನ್ನು ಊಹಾಪೋಹ ಮತ್ತು ತಪ್ಪಾದ ಆಧಾರದ ಮೇಲೆ ಬರೆಯಲಾಗಿದೆ ಎಂದು ಟ್ರುಡೋ ಸರ್ಕಾರ ಹೇಳಿದೆ. ಅಕ್ಟೋಬರ್ 14 ರಂದು ಸಾರ್ವಜನಿಕ ಸುರಕ್ಷತೆ ಮತ್ತು ಬೆದರಿಕೆಯ ಕಾರಣ ಕೆನಡಾ ಪೊಲೀಸ್ ಮತ್ತು ಅಧಿಕಾರಿಗಳು ಕೆನಡಾದಲ್ಲಿ ಭಾರತ ಸರ್ಕಾರದ ಏಜೆಂಟರು ನಡೆಸಿದ ಗಂಭೀರ ಅಪರಾಧ ಚಟುವಟಿಕೆಯ ಬಗ್ಗೆ ಸಾರ್ವಜನಿಕವಾಗಿ ಆರೋಪಗಳನ್ನು ಮಾಡುವ ಕ್ರಮವನ್ನು ತೆಗೆದುಕೊಂಡರು.

ಆದರೆ ಕೆನಡಾ ಸರ್ಕಾರ ಯಾವುದೇ ಹೇಳಿಕೆ ನೀಡಿಲ್ಲ. ಕೆನಡಾದೊಳಗಿನ ಗಂಭೀರ ಕ್ರಿಮಿನಲ್ ಚಟುವಟಿಕೆಗೆ ಸಂಬಂಧಿಸಿದಂತೆ ಪ್ರಧಾನಿ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ಅಥವಾ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಪಾತ್ರದ ಬಗ್ಗೆ ಯಾವುದೇ ಪುರಾವೆ ಇಲ್ಲ. ಮಾಧ್ಯಮ ವರದಿ ಕೇವಲ ಊಹೆ ಮತ್ತು ನಿಖರವಾಗಿಲ್ಲ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಭಾರತದ ಮೇಲೆ ಆಗಾಗ ಸುಳ್ಳು ಆರೋಪ ಹೊರಿಸುತ್ತಲೇ ಬಂದಿರುವ ಜಸ್ಟಿನ್ ಟ್ರೂಡೊ ಸರ್ಕಾರಕ್ಕೆ ಇದೀಗ ಮತ್ತೊಮ್ಮೆ ಮುಜುಗರವಾಗಿದ್ದು, ಭಾರತ ಈ ಬಗ್ಗೆ ಕಟ್ಟುನಿಟ್ಟಿನ ಪ್ರ ತಿಕ್ರಿಯೆ ನೀಡಿದ ನಂತರ ಟ್ರೂಡೊ ಸರ್ಕಾರವು ಈ ಹೇಳಿಕೆಯನ್ನು ನೀಡಿದೆ. ಖಲಿ ಸ್ತಾನಿ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜಾರ್ ಹತ್ಯೆ ಸೇರಿದಂತೆ ಕೆನಡಾದಲ್ಲಿ ಯಾವುದೇ ರೀತಿಯ ಅಪರಾಧ ಚಟುವಟಿಕೆಗಳಲ್ಲಿ ಭಾರತದ ಪ್ರಧಾನಿ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ಮತ್ತು ಅಜಿತ್ ದೋವಲ್ ಪಾತ್ರವಿಲ್ಲ ಎಂದು ಟ್ರೂಡೊ ಸರ್ಕಾರ ಹೇಳಿದೆ. ಕೆನಡಾದ ಮಾಧ್ಯಮ ವರದಿಗೆ ಸ್ಪಷ್ಟನೆ ನೀಡಿರುವ ಜಸ್ಟಿನ್ ಟ್ರುಡೊ, ಕೆನಡಾ ಸರ್ಕಾರವು ಈ ಹೇಳಿಕೆಯನ್ನು ನೀಡಿಲ್ಲ, ಅಥವಾ ಕೆನಡಾದಲ್ಲಿ ನಡೆಯುವ ಗಂಭೀರ ಅಪರಾಧ ಚಟುವಟಿಕೆಗಳಲ್ಲಿ ಪ್ರಧಾನಿ ಮೋದಿ, ವಿದೇಶಾಂಗ ಸಚಿವ ಜೈಶಂಕರ್ ಅಥವಾ ಎನ್‌ಎಸ್‌ಎ ಅಜಿತ್ ದೋವಲ್ ಇರುವ ಬಗ್ಗೆ ಯಾವುದೇ ಪುರಾವೆಗಳಿಲ್ಲ. ಈ ವರದಿ ಕೇವಲ ಊಹಾಪೋಹವನ್ನು ಆಧರಿಸಿದ್ದಾಗಿದೆ ಎಂದು ಹೇಳಿದೆ.

ಈ ವಿಚಾರದ ಬಗ್ಗೆ ಪ್ರತಿಕ್ರಿಯಿಸಿದ್ದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ನಾವು ಸಾಮಾನ್ಯವಾಗಿ ಮಾಧ್ಯಮ ವರದಿಗಳ ಬಗ್ಗೆ ಪ್ರತಿಕ್ರಿಯಿಸುವುದಿಲ್ಲ. ಹೀಗಿದ್ದರೂ ಕೆನಡಾ ಸರ್ಕಾರದ ಮೂಲವನ್ನು ಆಧಾರಿಸಿ ಪತ್ರಿಕೆಗೆ ನೀಡಿದ ಇಂತಹ ಹಾಸ್ಯಾಸ್ಪದ ಹೇಳಿಕೆಗಳನ್ನು ಅರ್ಹವಾದ ಖಂಡನೆಗಳೊಂದಿಗೆ ತಿರಸ್ಕರಿಸಬೇಕು. ಈ ರೀತಿಯ ಸುಳ್ಳು ಆರೋಪಗಳು ಈಗಾಗಲೇ ಹದಗೆಟ್ಟಿರುವ ನಮ ಸಂಬಂಧಗಳನ್ನು ಇನ್ನಷ್ಟು ಹಾಳು ಮಾಡುತ್ತವೆ ಎಂದು ಖಡಕ್ ಆಗಿಯೇ ಹೇಳಿದ್ದರು. ಈ ಆರೋಪದ ನಂತರ ನಿಜ್ಜರ್‌ನ ಹತ್ಯೆಯು ಉಭಯ ದೇಶಗಳ ನಡುವಿನ ರಾಜತಾಂತ್ರಿಕ ಗದ್ದಲಕ್ಕೆ ಕಾರಣವಾಯಿತು. ಜಸ್ಟಿನ್ ಟ್ರುಡೊ ಅವರೇ ಈ ಘಟನೆಯಲ್ಲಿ ಭಾರತೀಯ ಅಧಿಕಾರಿಗಳು ಭಾಗಿಯಾಗಿದ್ದಾರೆ ಎಂದು ಆರೋಪಿಸಿದ್ದರು. ಆದರೆ ಭಾರತ ಸರ್ಕಾರ ಈ ಆರೋಪವನ್ನು ಖಂಡಾತುಂಡವಾಗಿ ನಿರಾಕರಿಸಿತ್ತು.

### ವರದಿಯಲ್ಲಿ ಏನಿತ್ತು?

**ಕೆನಡಾದ ಗ್ಲೋಬ್ ಆಂಡ್ ಮೇಲ್ ಪತ್ರಿಕೆಯ ಅನಾಮಧೇಯ ಕೆನಡಾ ಸರ್ಕಾರಿ ಅಧಿಕಾರಿಯ ಹೇಳಿಕೆ ಉಲ್ಲೇಖಿಸಿ ಖಲಿಸ್ತಾನಿ ಉಗ್ರ ಹರ್ದೀಪ್ ಸಿಂಗ್ ನಿಜ್ಜಾರ್‌ನ ಹತ್ಯೆ ಸಂಚನ್ನು ಗೃಹ ಸಚಿವ ಅಮಿತ್ ಶಾ ರೂಪಿಸಿದ್ದರು. ಈ ಯೋಜನೆ ಬಗ್ಗೆ ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಹಾಗೂ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರಿಗೆ ಮಾಹಿತಿ ನೀಡಲಾಗಿತ್ತು ಎಂದು ವರದಿಯಲ್ಲಿ ಉಲ್ಲಖಿಸಲಾಗಿತ್ತು.**

## ವಿದ್ಯಾರ್ಥಿ ಒಕ್ಕೂಟದ ಚುನಾವಣೆ ವೇಳೆ ಹಿಂಸಾಚಾರ: ಅಶ್ರುವಾಯು ಪ್ರಯೋಗ

**ಇಟಾನಗರ:** ಅರುಣಾಚಲ ಪ್ರದೇಶದ ಆಲ್ ನೈಶಿ ವಿದ್ಯಾರ್ಥಿ ಒಕ್ಕೂಟದ ಹೊಸ ಕಾರ್ಯಕಾರಿ ಮಂಡಳಿಗೆ ನಡೆದ ಚುನಾವಣೆ ವೇಳೆ ಹಿಂಸಾಚಾರ ನಡೆದಿದ್ದು, ಗುಂಪು ಚದುರಿಸಲು ಲಾಠಿ ಪ್ರಹಾರ ನಡೆಸಿದ್ದು, ಅಶ್ರುವಾಯು ಶೆಲ್‌ಗಳನ್ನು ಪ್ರಯೋಗಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಉಪಾಧ್ಯಕ್ಷ ಸ್ಥಾನದ ಅಭ್ಯರ್ಥಿಗಳಲ್ಲಿ ಒಬ್ಬರಾದ ರೋಮೇಶ್ ಮಾಗಾ ಅವರನ್ನು ಚುನಾವಣಾ ಪ್ರಕ್ರಿಯೆಯಿಂದ ಅನರ್ಹಗೊಳಿಸಲಾಗಿತ್ತು. ಇದೇ ವಿಚಾರವಾಗಿ ಹಿಂಸಾಚಾರ ನಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಿನಿಮಾ ಪ್ರತಿಭಟನಾಕಾರರು ಸಿದ್ದಾರ್ಥ್ ಹಾಲ್ ಬಳಿ ಟೈರ್‌ಗಳನ್ನು ಸುಟ್ಟು, ಖಾಸಗಿ ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಉದ್ರಿಕ್ತರನ್ನು ಚದುರಿಸಲು ಲಾಠಿ ಪ್ರಹಾರ ನಡೆಸಿದ್ದು, ಅಶ್ರುವಾಯು ಶೆಲ್‌ಗಳನ್ನು ಪ್ರಯೋಗಿಸಬೇಕಾಯಿತು ಎಂದು ಪೊಲೀಸ್ ಅಧಿಕಾರಿ ರೋಹಿತ್ ರಾಜೀರ್ ಸಿಂಗ್ ಹೇಳಿದ್ದಾರೆ. ಘಟನೆ ಸಂಬಂಧ ಹಿಂಸಾಚಾರದಲ್ಲಿ ಭಾಗಿಯಾಗಿದ್ದ ಇಬ್ಬರು ಯುವಕರನ್ನು ಬಂಧಿಸಲಾಗಿದೆ. ಸದ್ಯ ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ಮತದಾನ ಪ್ರಕ್ರಿಯೆ ಸುಗಮವಾಗಿ ಸಾಗಿದೆ ಎಂದು ಇಟಾನಗರದ ಎಸ್‌ಪಿ ಮಾಹಿತಿ ನೀಡಿದ್ದಾರೆ.

## ಜಾರ್ಜಿಯಾದಲ್ಲಿ ಹುಟ್ಟುಹಬ್ಬದ ಸಂಭ್ರಮದಲ್ಲಿ ಗುಂಡು ಹಾರಿ ತೆಲಂಗಾಣ ಮೂಲದ ವಿದ್ಯಾರ್ಥಿ ಸಾವು



**ವಾಷಿಂಗ್ಟನ್:** ಅಮೆರಿಕದ ಜಾರ್ಜಿಯಾ ಸ್ಟೇಟ್ ಯೂನಿವರ್ಸಿಟಿಯಲ್ಲಿ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿದ್ದ ತೆಲಂಗಾಣ ಮೂಲದ 23 ವರ್ಷದ ವಿದ್ಯಾರ್ಥಿ ಹುಟ್ಟು ಹಬ್ಬದ ಸಂಭ್ರಮದಲ್ಲಿ ಹಾರಿದ ಬಂದೂಕಿನ ಗುಂಡೇಟಿನಿಂದ ಸಾವನ್ನಪ್ಪಿದ್ದಾರೆ. ಮೃತಪಟ್ಟಿರುವ ವಿದ್ಯಾರ್ಥಿಯನ್ನು ತೆಲಂಗಾಣದ ಉಪ್ಪಲ್ ಮೂಲದ ಆರ್ಯನ್ ರೆಡ್ಡಿ ಎಂದು ಗುರುತಿಸಲಾಗಿದೆ.

23 ವರ್ಷದ ಯುವಕನ ಮತದೇಹ ತೆಲಂಗಾಣಕ್ಕೆ ಆಗಮಿಸುವ ನಿರೀಕ್ಷೆಯಿದೆ. ಆರ್ಯನ್ ಅಮೆರಿಕದಲ್ಲಿ ಬೇಟೆಯಾಡುವ ಗನ್ ಪರವಾನಗಿಯನ್ನು ಪಡೆದಿದ್ದಾರೆ ಎಂದು ವರದಿಗಳು ಬಹಿರಂಗಪಡಿಸಿವೆ. ರೆಡ್ಡಿ ಅವರು ತಮ ಹುಟ್ಟುಹಬ್ಬದಂದು ಬಂದೂಕು ಬಳ ಸುತ್ತಿದ್ದಾಗ ಆಕಸಿಕವಾಗಿ ಗುಂಡು ಹಾರಿ ಸಾವನ್ನಪ್ಪಿದ್ದಾರೆ ಎನ್ನಲಾಗಿದೆ. ಮಾಧ್ಯಮಗಳೊಂದಿಗೆ ಮಾತನಾಡಿದ ಆರ್ಯನ್ ತಂದೆ ಸುದರ್ಶನ್ ರೆಡ್ಡಿ ಅವರು ತೀವ್ರ ದುಃಖ ವನ್ನು ವ್ಯಕ್ತಪಡಿಸಿದ್ದಾರೆ ಮತ್ತು ವಿದೇಶದಲ್ಲಿ ಓದುತ್ತಿರುವ ತಮ ಮಕ್ಕಳು ಗನ್ ಲೈಸೆನ್ಸ್ ಪಡೆಯುವ ಬಗ್ಗೆ ಇತರ ಪೋಷಕರು ಎಚ್ಚರಿಕೆ ವಹಿಸಬೇಕೆಂದು ಮನವಿ ಮಾಡಿಕೊಂಡಿದ್ದಾರೆ. ವಿದ್ಯಾರ್ಥಿಗಳು ಅಲ್ಲಿ ಬೇಟೆಯಾಡುವ ಬಂದೂಕು ಪರವಾನಗಿಗಳನ್ನು ಪಡೆದುಕೊಳ್ಳಬಹುದು ಎಂದು ನಮಗೆ ತಿಳಿದಿರಲಿಲ್ಲ. ಯಾವುದೇ ಪೋಷಕರು ಇಂತಹ ದುರಂತವನ್ನು ಎಂದಿಗೂ ಎದುರಿಸಬಾರದು, ಎಂದು ಅವರು ಹೇಳಿದರು.

ಏತನಧ್ಯೆ, ಹೈದರಾಬಾದ್ನಲ್ಲಿ ಯುಎಸ್ ಕಾನ್ಸುಲರ್ ಅಧಿಕಾರಿಗಳು ಹಂಚಿಕೊಂಡ ಅಂಕಿಅಂಶಗಳು 2023-24ರಲ್ಲಿ ಯುಎಸ್ ವಿಶ್ವವಿದ್ಯಾಲಯಗಳಿಗೆ ವಿದ್ಯಾರ್ಥಿಗಳನ್ನು ಕಳುಹಿಸುವ ಅಗ್ರ ರಾಷ್ಟ್ರವಾಗಿ ಭಾರತವು ಚೀನಾವನ್ನು ಸ್ಥಳಾಂತರಿಸಿದೆ ಎಂದು ಬಹಿರಂಗಪಡಿಸಿದೆ. ಆಂಧ್ರಪ್ರದೇಶ ಮತ್ತು ತೆಲಂಗಾಣ ಪ್ರಮುಖ ಪಾತ್ರವನ್ನು ವಹಿಸಿದೆ, ಸುಮಾರು 56 ಪ್ರತಿಶತ ಭಾರತೀಯ ವಿದ್ಯಾರ್ಥಿಗಳು ಈ ಎರಡು ರಾಜ್ಯಗಳಿಂದ ಅಮೆರಿಕಗೆ ಹೋಗುತ್ತಿದ್ದಾರೆ ಎನ್ನಲಾಗಿದೆ.

## ನರ್ಸಿಂಗ್ ವಿದ್ಯಾರ್ಥಿನಿ ಆತ್ಮಹತ್ಯೆ ಪ್ರಕರಣ ಮೂವರು ಸಹಪಾಠಿಗಳ ಬಂಧನ



**ಕೇರಳ:** ನರ್ಸಿಂಗ್ ವಿದ್ಯಾರ್ಥಿನಿಯೊಬ್ಬರ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ವಿದ್ಯಾರ್ಥಿನಿಯರನ್ನು ಪೊಲೀಸರು ಬಂಧಿಸಿದ್ದಾರೆ. ನವೆಂಬರ್ 15ರಂದು ಪತ್ತನಂತಿಟ್ಟ ಜಿಲ್ಲೆಯ ಚುಟ್ಟಿಪ್ಪಾರದಲ್ಲಿರುವ ಎಸ್‌ಎಂಇ ನರ್ಸಿಂಗ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ಅಂತಿಮ ವರ್ಷದ ಬಿಎಸ್‌ಸಿ ನರ್ಸಿಂಗ್ ವಿದ್ಯಾರ್ಥಿನಿ ಅಮ್ಮು ಸಜೀವ್ ಎಂಬುವವರು ಹಾಸ್ಟೆಲ್ ಕಟ್ಟಡದ ಮೂರನೇ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಆಕೆಯ ಸಹಪಾಠಿಗಳಾದ ಮೂವರು ವಿದ್ಯಾರ್ಥಿನಿಯರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ತಮ್ಮ ಮಗಳಿಗೆ ಸಹಪಾಠಿಗಳು ಮಾನಸಿಕ ಹಿಂಸೆ ನೀಡುತ್ತಿದ್ದು, ಆಕೆಗೆ ಜೀವ ಬೆದರಿಕೆ ಹಾಕಲಾಗಿದೆ ಎಂದು ವಿದ್ಯಾರ್ಥಿನಿಯ ತಂದೆ ಸಜೀವ್ ಅವರು ಈ ಹಿಂದೆ ಕಾಲೇಜು ಪ್ರಾಂಶುಪಾಲರಿಗೆ ದೂರು ನೀಡಿದ್ದರು. ದೂರಿನಲ್ಲಿ ಹೆಸರಿಸಲಾದ ವಿದ್ಯಾರ್ಥಿನಿಯರನ್ನು ಗುರುವಾರ ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಅವರಲ್ಲಿ ಇಬ್ಬರು ವಿದ್ಯಾರ್ಥಿನಿಯರು ಕೋಟಯಂ ಮೂಲದವರಾಗಿದ್ದು, ಒಬ್ಬರು ಕೊಲ್ಲಂ ಮೂಲದವರಾಗಿದ್ದಾರೆ. ಘಟನೆ ಕುರಿತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

# ಪ್ರಧಾನಿ ಮೋದಿಯವರ ವಿದೇಶಿ ಪ್ರವಾಸದಿಂದ ಭಾರತದ ಪ್ರಾತಿನಿಧ್ಯಕ್ಕೆ ಬಲ

## ಮೊರಾರ್ಜಿ ದೇಸಾಯಿಂದ ಮೋದಿಯವರೆಗೆ: ವಿದೇಶಿ ಸಂಸತ್‌ನಲ್ಲಿ ಅತಿಹೆಚ್ಚು ಭಾಷಣ ಮಾಡಿದ ಭಾರತದ ಪ್ರಧಾನಿಗಳು




**ಅತ್ಯುನ್ನತ ಆರ್ಡರ್ ಆಫ್ ಎಕ್ಸಲೆನ್ಸ್ ಪ್ರಶಸ್ತಿ**

**ಹೊಸದಿಲ್ಲಿ:** ವಿದೇಶಿ ಸಂಸತ್ ನಲ್ಲಿ ಅತಿಹೆಚ್ಚು ಭಾಷಣ ಮಾಡಿದ ಭಾರತದ ಪ್ರಧಾನಮಂತ್ರಿಗಳ ಪೈಕಿ, ಹಾಲೀ ಪ್ರಧಾನಿ ನರೇಂದ್ರ ಮೋದಿ ಅಗ್ರಸ್ಥಾನಕ್ಕೆ ಏರಿದ್ದಾರೆ. ಮೊರಾರ್ಜಿ ದೇಸಾಯಿ ಅವರಿಂದ ಹಿಡಿದು ನರೇಂದ್ರ ಮೋದಿಯವರೆಗೆ ಇದುವರೆಗೆ ಎಂಟು ಪ್ರಧಾನಿಗಳು ವಿದೇಶಿ ಸಂಸತ್ ನಲ್ಲಿ ಭಾಷಣವನ್ನು ಮಾಡಿದ್ದಾರೆ. ಮೂರು ರಾಷ್ಟ್ರಗಳ ಪ್ರವಾಸದಲ್ಲಿರುವ ಪ್ರಧಾನಿ ಮೋದಿ, ಸದ್ಯ ದಕ್ಷಿಣ ಅಮೆರಿಕಾದ ಗಯಾನದಲ್ಲಿದ್ದಾರೆ. ಐವತ್ತು ವರ್ಷಗಳ ನಂತರ ಭಾರತದ ಪ್ರಧಾನಿಯೊಬ್ಬರು ಅಲ್ಲಿಗೆ ಹೋಗುತ್ತಿರುವುದು ಇದೇ ಮೊದಲು.

ಕಳೆದ ಬುಧವಾರ ಮೋದಿಗೆ ಅಲ್ಲಿನ ಅತ್ಯುನ್ನತ ಆರ್ಡರ್ ಆಫ್ ಎಕ್ಸಲೆನ್ಸ್ ಪ್ರಶಸ್ತಿಯನ್ನು ಅಲ್ಲಿನ ರಾಷ್ಟ್ರಪತಿ ಮೊಹಮ್ಮದ್ ಇರ್ಫಾನ್ ಆಲಿ ನೀಡಿದ್ದರು. ಕಾಮನ್ವೆಲ್ತ್ ಆಫ್ ಡೊಮಿನಿಕಾ ದೇಶ ಕೂಡಾ ಮೋದಿಯರಿಗೆ ಇದೇ ವಾರದಲ್ಲಿ ಡೊಮಿನಿಕಾ ಅವಾರ್ಡ್ ಆಫ್ ಹಾನರ್ ನೀಡಿ ಗೌರವಿಸಿತ್ತು. ಕೋವಿಡ್ ಸಮಯದಲ್ಲಿ ಮೋದಿಯವರ ಕೆಲಸವನ್ನು ಗೌರವಿಸಿ ಈ ಪ್ರಶಸ್ತಿಯನ್ನು ಅಲ್ಲಿನ ಸರ್ಕಾರ ನೀಡಿದೆ. ಪ್ರಧಾನಿ ಮೋದಿಯವರ ಅಮೆರಿಕಾದ ಸಂಸತ್ ಅನ್ನು ಉದ್ದೇಶಿಸಿ 2016 ಮತ್ತು 2023ರಲ್ಲಿ ಎರಡು ಬಾರಿ ಭಾಷಣ ಮಾಡಿದ್ದರು. ಅದಕ್ಕೂ ಮುನ್ನ ಫಿಜಿ, ಆಸ್ಟ್ರೇಲಿಯಾ, ಬ್ರಿಟನ್ ಸಂಸತ್‌ನಲ್ಲೂ ಭಾಷಣವನ್ನು ಮಾಡಿದ್ದರು. ಇದಲ್ಲದೇ, ಮಾರಿಸಸ್, ಉಗಾಂಡ, ಭೂತಾನ್, ನೇಪಾಳ, ಶ್ರೀಲಂಕಾ, ಮಂಗೋಲಿಯಾ, ಅಫಘಾನಿಸ್ತಾನ ಮತ್ತು ಮಾರಿಸಸ್ ದೇಶದ ಶಾಸಕಾಂಗ ಸಭೆಯನ್ನು ಉದ್ದೇಶಿಸಿ ಮೋದಿ ಮಾತನಾಡಿದ್ದರು. ಇದುವರೆಗೆ, 14 ಬಾರಿ ವಿದೇಶಿ ಸಂಸತ್ ನಲ್ಲಿ ಭಾಷಣ ಮಾಡಿದ ಹಿರಿಮೆ ಮೋದಿಯವರದ್ದಾಗಿದೆ. ವಿದೇಶಿ ನೆಲದಲ್ಲಿ ಭಾರತದ ಪ್ರಾತಿನಿಧ್ಯವನ್ನು ಸ್ಥಾಪಿಸಲು ಮೋದಿಯವರ ವಿದೇಶಿ ಪ್ರವಾಸ ಸಾಕಷ್ಟು ಪರಿಣಾಮವನ್ನು ಬೀರಿದೆ ಎಂದು ವಿದೇಶಿ ಪತ್ರಿಕೆಗಳು ಬಣ್ಣಿಸಿವೆ. ಮೋದಿಯವರ ನಂತರ ವಿದೇಶಿ ಸಂಸತ್ ನಲ್ಲಿ ಅತಿಹೆಚ್ಚು ಭಾಷಣ ಮಾಡಿದವರೆಂದರೆ ಮಾಜಿ ಪ್ರಧಾನಿ ಡಾ. ಮನ್ಮೋಹನ್ ಸಿಂಗ್. 2014ರಲ್ಲಿ ಪ್ರಧಾನಿಯಾದ ನಂತರ ಮೋದಿ, ಮೊದಲ ಬಾರಿಗೆ ಆಸ್ಟ್ರೇಲಿಯಾದಲ್ಲಿ ನಂತರ ಫಿಜಿ ದೇಶದ ಸಂಸತ್ ನಲ್ಲಿ ಭಾಷಣವನ್ನು ಮಾಡಿದರು. ಇದಾದ ನಂತರ 2015ರಲ್ಲಿ ಬ್ರಿಟನ್ ಸಂಸತ್ ಅನ್ನು ಉದ್ದೇಶಿಸಿಯೂ ಮೋದಿ ಭಾಷಣವನ್ನು ಮಾಡಿದ್ದರು.

### ಅತಿಹೆಚ್ಚು ಭಾಷಣವನ್ನು ಮಾಡಿದ ಪ್ರಧಾನಿಗಳ ಹೆಸರು ಇಂತಿದೆ

- ಮೊರಾರ್ಜಿ ದೇಸಾಯಿ - 1 ಬಾರಿ
- ಪಿ.ವಿ.ನರಸಿಂಹ ರಾವ್ - 1 ಬಾರಿ
- ಅಟಲ್ ಬಿಹಾರಿ ವಾಜಪೇಯಿ - 2 ಬಾರಿ
- ರಾಜೀವ್ ಗಾಂಧಿ - 2 ಬಾರಿ
- ಜವಾಹರ್ ಲಾಲ್ ನೆಹರೂ - 3 ಬಾರಿ
- ಇಂದಿರಾ ಗಾಂಧಿ - 4 ಬಾರಿ
- ಮನ್ಮೋಹನ್ ಸಿಂಗ್ - 7 ಬಾರಿ
- ನರೇಂದ್ರ ಮೋದಿ - 14 ಬಾರಿ

### ವಿದೇಶದಲ್ಲಿ ಭಾಷಣ

**ಮೊರಾರ್ಜಿ ದೇಸಾಯಿಂದ ಹಿಡಿದು ನರೇಂದ್ರ ಮೋದಿಯವರೆಗೆ ಎಂಟು ಪ್ರಧಾನಮಂತ್ರಿಗಳು ವಿದೇಶಿ ಸಂಸತ್‌ನಲ್ಲಿ ಭಾಷಣವನ್ನು ಮಾಡಿದ್ದಾರೆ. ಇದರಲ್ಲಿ ಮೋದಿಯವರು ಅತಿಹೆಚ್ಚು ಬಾರಿ ಭಾಷಣ ಮಾಡಿದ ಖ್ಯಾತಿಗೆ ಪಾತ್ರರಾಗಿದ್ದಾರೆ. ಮೊರಾರ್ಜಿ ದೇಸಾಯಿ ಮೊದಲ ಬಾರಿಗೆ ವಿದೇಶದಲ್ಲಿ ಭಾಷಣವನ್ನು ಮಾಡಿದ್ದರು.**

- **2016 ಮತ್ತು 2023ರಲ್ಲಿ ಎರಡು ಬಾರಿ ಅಮೆರಿಕ ಸಂಸತ್ ಉದ್ದೇಶಿಸಿ ಮೋದಿ ಭಾಷಣ**
- **ವಿದೇಶಿ ನೆಲದಲ್ಲಿ ಅತಿಹೆಚ್ಚು ಭಾಷಣ ಮಾಡಿದ ಹಿರಿಮೆ ಪ್ರಧಾನಿ ಮೋದಿಯವರದ್ದು**

## ಮಿನಿ ನ್ಯೂಸ್

### ಗಯಾನಾದಲ್ಲಿ ರಾಮ ಭಜನೆ ಮಾಡಿದ ಪ್ರಧಾನಿ ಮೋದಿ

**ಗಯಾನಾ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಗಯಾನಾದಲ್ಲಿ ರಾಮ ಭಜನೆ ಮಾಡಿ ಗಮನ ಸೆಳೆದಿದ್ದಾರೆ. ಐದು ದೇಶಗಳಿಗೆ ಮೂರು ದಿನಗಳ ಪ್ರವಾಸದಲ್ಲಿರುವ ಮೋದಿ ಅವರು ವಿದೇಶ ಪ್ರವಾಸದ ಕೊನೆಯ ದಿನದಂದು ಗಯಾನಾದಲ್ಲಿ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಗಯಾನಾದಲ್ಲಿರುವ ಮಹಾತ ಗಾಂಧಿಸಾರಕಕ್ಕೆ ತೆರಳಿ ರಾಷ್ಟ್ರಪಿತನಿಗೆ ನಮನ ಸಲ್ಲಿಸಿದರು. ಆಗ ಅಲ್ಲಿದ್ದ ಕೆಲವರು ರಾಮ ಭಜನೆ ಮಾಡುತ್ತಿದ್ದರು. ಭಜನೆ ಮಾಡುತ್ತಿದ್ದ ತಂಡದೊಂದಿಗೆ ಸೇರಿಕೊಂಡ ಮೋದಿ ಅವರು ತಾಳ ಹಾಕುವ ಮೂಲಕ ಭಜನೆ ಮಾಡಿ ಗಮನ ಸೆಳೆದರು.

ಇದಕ್ಕೂ ಮುನ್ನ ಪ್ರಧಾನಿ ಮೋದಿ ಗಯಾನಾದ ಜಾರ್ಜ್‌ಟೌನ್ನಲ್ಲಿರುವ ಭಾರತೀಯ ಸಾರಕಕ್ಕೆ ಭೇಟಿ ನೀಡಿ, ಅಲ್ಲಿ ಸಸಿ ನೆಟ್ಟಿದ್ದಾರೆ. ಕಳೆದ 56 ವರ್ಷಗಳಲ್ಲಿ ಗಯಾನಾಗೆ ಭೇಟಿ ನೀಡಿದ ಏಕೈಕ ಭಾರತೀಯ ಪ್ರಧಾನಿ ಮೋದಿ ಆಗಿದ್ದಾರೆ. ಗಯಾನಾಗೆ ಭೇಟಿ ನೀಡಿದ ಪ್ರಧಾನಿ ಮೋದಿ ಅವರಿಗೆ ಅಲ್ಲಿನ ಅತ್ಯುನ್ನತ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

### ಮದುವೆ ಮಂಟಪದಲ್ಲಿ ಹೃದಯಾಘಾತ ಸಾವು

**ಕರ್ನೂಲ್:** ಅಮೆಜಾನ್ ಉದ್ಯೋಗಿ ಮದುವೆ ಮಂಟಪದಲ್ಲಿ ವಧು-ವರರಿಗೆ ಉಡುಗೊರೆ ನೀಡುತ್ತಿದ್ದ ಸಮಯದಲ್ಲಿ ಹೃದಯಾ ಘಾತವಾಗಿ ವೇದಿಕೆ ಮೇಲೆ ಕುಸಿತು ಬಿದ್ದು ಸಾವನ್ನಪ್ಪಿದ್ದಾನೆ ಈ ಘಟನೆ ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಪೆನುಮಾಡ ಗ್ರಾಮದಲ್ಲಿ ನಡೆದಿದೆ. ವಧು-ವರರನ್ನು ಅಭಿನಂದಿಸಲು ವೇದಿಕೆಗೆ ಬಂದಿದ್ದ ವಂಶಿ ಎಂಬ ಯುವಕ ಹೃದಯಾಘಾತದಿಂದ ಸಾವನ್ನಪ್ಪಿದ್ದಾನೆ. ಜನರು ತಕ್ಷಣ ಅವನನ್ನು ಡಾನ್ ಸಿಟಿ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ, ಅಲ್ಲಿ ವೈದ್ಯರು ಅವರು ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ. ಈ ಘಟನೆಯ ವಿಡಿಯೋ ಇದೀಗ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಘಟನೆ ವೇಳೆ ವಧು-ವರರು, ಅವರ ಸಂಬಂಧಿಕರು ವೇದಿಕೆಯಲ್ಲಿದ್ದರು. 25 ವರ್ಷದ ವಂಶಿ ತನ್ನ ಸ್ನೇಹಿತನ ಮದುವೆಯಲ್ಲಿ ಪಾಲ್ಗೊಳ್ಳಲು ಬೆಂಗಳೂರಿನಿಂದ ಕರ್ನೂಲಿನ ಪೆನುಮಾಡ ಗ್ರಾಮಕ್ಕೆ ಬಂದಿದ್ದ.ವಂಶಿ ಬೆಂಗಳೂರಿನ ಇ-ಕಾಮರ್ಸ್ ಕಂಪನಿ ಅಮೆಜಾನ್‌ನಲ್ಲಿ ಕೆಲಸ ಮಾಡುತ್ತಿದ್ದ ಎನ್ನಲಾಗಿದೆ. ಭಾರತದಲ್ಲಿ ಯುವಕರಲ್ಲಿ ಹೃದಯ ಸ್ತಂಭನ ಮತ್ತು ಹೃದಯಾಘಾತ ಪ್ರಕರಣಗಳು ವೇಗವಾಗಿ ಹೆಚ್ಚುತ್ತಿವೆ ಎಂಬುದು ವೈದ್ಯರ ಹೇಳಿಕೆ.

ಭಾರತ ದಲ್ಲಿ ಹೃದ್ರೋಗದ ಹೆಚ್ಚಳದ ಹಿಂದೆ ಮಧುಮೇಹ, ಜೀವನಶೈಲಿ, ವಾಯು ಮಾಲಿನ್ಯ, ಒತ್ತಡ, ಅತಿಯಾದ ವ್ಯಾಯಾಮ, ಸ್ಟೆರಾಯ್ಡ್ ಬಳಕೆ ಮುಂತಾದ ಹಲವು ಕಾರಣಗಳಿವೆ. ಭಾರತೀಯರು ಹೃದ್ರೋಗಕ್ಕೆ ಹೆಚ್ಚು ಒಳಗಾಗುತ್ತಾರೆ ಎಂದು ತಜ್ಞರು ವಿಶ್ಲೇಷಿಸಿದ್ದಾರೆ.


### ಅಮೆರಿಕದಲ್ಲಿ ಅದಾನಿ 10 ಶತಕೋಟಿ ಡಾಲರ್ ಹೂಡಿಕೆ

**ನವದೆಹಲಿ:** ಅಮೆರಿಕಾದ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಆಯ್ಕೆಯಾಗುತ್ತಿದ್ದಂತೆ ವಿಶ್ವದ ಶ್ರೀಮಂತ ಉದ್ಯಮಿ ಗೌತಮ್ ಅದಾನಿ ಅವರು ಅಮೆರಿಕಾದ ಇಂಧನ ಮತ್ತು ಮೂಲಸೌಕರ್ಯ ಯೋಜನೆಗಳಲ್ಲಿ 10 ಶತಕೋಟಿ ಡಾಲರ್ ಹೂಡಿಕೆ ಮಾಡುವುದಾಗಿ ಘೋಷಿಸಿದ್ದಾರೆ.62 ವರ್ಷದ ಭಾರತೀಯ ಶತಕೋಟ್ಯಾಧೀಶ್ವರ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ನಿಕಟ ಮಿತ್ರ ಇದೀಗ ಅಮೆರಿಕಾದಲ್ಲಿ ತಮ್ಮ ವ್ಯಾಪಾರ ವಹಿವಾಟು ವಿಸ್ತರಣೆಗೆ ಮುಂದಾಗಿದ್ದಾರೆ.

169 ಶತಕೋಟಿ ಸಾಮ್ರಾಜ್ಯವನ್ನು ಹೊಂದಿರುವ ಗೌತಮ್ ಅದಾನಿ ಅವರು ಅಮೆರಿಕಾದಲ್ಲಿ ಇಂಧನ ಮತ್ತು ಮೂಲಸೌಕರ್ಯ ವಲಯದಲ್ಲಿ ಹೆಚ್ಚು ಬಂಡವಾಳ ತೊಡಗಿಸುವುದಾಗಿ ಭರವಸೆ ನೀಡಿದ್ದಾರೆ. ಭಾರತ ಸೇರಿದಂತೆ ಜಗತ್ತಿನ ವಿವಿಧ ಭಾಗಗಳಲ್ಲಿ ಬಂದರು ಗಳು ಮತ್ತು ನವೀಕರಿಸ ಬಹುದಾದ ಇಂಧನ ಸೇರಿದಂತೆ ಮತ್ತಿತರ ವಲಯದಲ್ಲಿ ಬಂಡವಾಳ ಹೂಡಿರುವ ಗೌತಮ್ ಅದಾನಿ ಅಮೆರಿಕಾದ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಆಯ್ಕೆಯಾಗುತ್ತಿದ್ದಂತೆ ಬಾರಿ ಮೊತ್ತದ ಹೂಡಿಕೆ ಮಾಡುವುದಾಗಿ ಘೋಷಿಸಿದ್ದಾರೆ.

ಫೆಡರಲ್ ಪ್ರಾಸಿಕ್ಯೂಟರ್‌ಗಳು 250 ದಶಲಕ್ಷ ಡಾಲರ್ ಮೊತ್ತದ ಲಂಚದ ಆರೋಪವನ್ನು ಅದಾನಿ ಸಮೂಹದ ಮೇಲೆ ಹೊರಿಸಿರುವ ಬೆನ್ನಲ್ಲೇ ಷೇರು ಮಾರುಕಟ್ಟೆ ಮೌಲ್ಯಗಳು ಕುಸಿದೆ. ಹೀಗಿದ್ದರೂ ಅದಾನಿ ಅಮೆರಿಕಾದಲ್ಲಿ ಭಾರಿ ಮೊತ್ತದ ಹೂಡಿಕೆ ಮಾಡಲು ಗೌತಮ್ ಅದಾನಿ ಸಮೂಹ ಮುಂದಾಗಿದೆ. ಅದಾನಿ ಸಮೂಹದ ಮೇಲೆ ಬಂದ ಲಂಚದ ಆರೋಪದಿಂದ ಅವರ ಸಮೂಹದ ಮೇಲಿನ ಷೇರುಗಳ ಮೌಲ್ಯ ಕುಸಿತ ಕಂಡಿದ್ದು ಇದರಿಂದ ಒಂದೇ ದಿನ 34 ಶತಕೋಟಿ ಡಾಲರ್ ನಷ್ಟ ಅನುಭವಿಸಿದ್ದಾರೆ. ಅದರಲ್ಲಿ ಅದಾನಿ ಸಮೂಹದ 10 ಪ್ರಮುಖ ಕಂಪನಿಗಳ ಷೇರು ಪಾತಾಳಕ್ಕೆ ಕುಸಿದಿದೆ.

### ಸೂಫಿ ಮಸೀದಿಯಲ್ಲಿ ಬಂದೂಕುಧಾರಿಯ ದಾಳಿಗೆ ಕನಿಷ್ಠ 10 ಮಂದಿ ಸಾವು



**ಕಾಬುಲ್:** ಅಫ್ಘಾನಿಸ್ತಾನದ ಉತ್ತರ ಭಾಗದ ಬಘ್ಲಾನ್ ಪ್ರಾಂತ್ಯದ ಸೂಫಿ ಮಸೀದಿಯೊಂದರಲ್ಲಿ ಬಂದೂಕುಧಾರಿಯೊಬ್ಬ ನಡೆಸಿದ ದಾಳಿಯಲ್ಲಿ ಕನಿಷ್ಠ 10 ಮಂದಿ ಸಾವಿಗೀಡಾಗಿದ್ದಾರೆ ಎಂದು ಆಂತರಿಕ ಸಚಿವಾಲಯದ ವಕ್ತಾರ ಮತೀನ್ ಖೈನಿ ಶುಕ್ರವಾರ ಹೇಳಿದ್ದಾರೆ. ದಾಳಿಯ ಹಿಂದೆ ಯಾರ ಕೈವಾಡ ಇದೆ ಎನ್ನುವುದು ತಿಳಿದುಬಂದಿಲ್ಲ. ಗುರುವಾರ ಸಂಜೆ ಸಯ್ಯದ್ ಪಾಚಾ ಆಗಾ ಮಸೀದಿಯಲ್ಲಿ ಸೂಫಿಗಳು ನೆರೆದಿದ್ದರು. ಸೂಫಿ ಗಾಯನದ ವೇಳೆಯೇ ದಾಳಿ ನಡೆದಿದೆ' ಎಂದು ತಮ್ಮ ಹೆಸರನ್ನು ಗೋಪ್ಯವಾಗಿಡಬೇಕು ಎನ್ನುವ ಷರತ್ತಿನೊಂದಿಗೆ ವ್ಯಕ್ತಿಯೊಬ್ಬರು ಮಾಹಿತಿ ನೀಡಿದ್ದಾರೆ.

ಶುಕ್ರವಾರ ಮುಂಜಾನೆ ಪ್ರಾರ್ಥನೆಗೆ ಜನ ಮಸೀದಿಗೆ ಬಂದಾಗ ದೇಹಗಳು ಬಿದ್ದಿರುವುದು ಕಂಡಿದೆ' ಎಂದು ಅವರು ಹೇಳಿದ್ದಾರೆ. ಯುದ್ಧ ಪೀಡಿತ ಅಫ್ಘಾನಿಸ್ತಾನದ ಆಡಳಿತ ಚುಕ್ಕಾಣಿಯನ್ನು 2021ರಲ್ಲಿ ತಾಲಿಬಾನ್ ವಹಿಸಿಕೊಂಡಿತ್ತು. ಆ ಬಳಿಕ ಸೂಫಿಗಳನ್ನು ಗುರಿಯಾಗಿಸಿಕೊಂಡು ಇಂಥ ದಾಳಿಗಳು ಹೆಚ್ಚಾಗಿವೆ. ಸ್ಥಳೀಯ ಉಗ್ರಗಾಮಿ ಗುಂಪು ಇಸ್ಲಾಮಿಕ್ ಸ್ಟೇಟ್ (ಐಎಸ್) ಈ ದಾಳಿ ನಡೆಸಿದ ಎಂದು ತಿಳಿದು ಬಂದಿದೆ. ಸೆಪ್ಟೆಂಬರ್ ತಿಂಗಳಿನಲ್ಲಿ ಕೇಂದ್ರ ಅಫ್ಘಾನಿಸ್ತಾನದಲ್ಲಿ ನಡೆದ ದಾಳಿಯಲ್ಲಿ 14 ಮಂದಿ ಸಾವಿಗೀಡಾಗಿದ್ದರು. ಈ ದಾಳಿಯ ಹೊಣೆಯನ್ನು ಐಎಸ್ ಹೊತ್ತುಕೊಂಡಿತ್ತು.



# ದುಬೈನಲ್ಲಿ ಸ್ಯಾಂಡಲ್‌ವುಡ್ ನಟಿಮಣಿಯರ ಮಸ್ತಿ

ಸ್ಯಾಂಡಲ್‌ವುಡ್ ನಟಿಯರಾದ ದಿವ್ಯಾ ಉರುಡುಗ, ಖುಷಿ ರವಿ, ನಮ್ರತಾ ಗೌಡ ದುಬೈಗೆ ಹಾರಿದ್ದಾರೆ. ಅಲ್ಲಿನ ಸುಂದರ ಸ್ಥಳಗಳಿಗೆ ಭೇಟಿ ನೀಡಿರುವ ಕಲರ್‌ಫುಲ್ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ. 'ಬಿಗ್ ಬಾಸ್' ಖ್ಯಾತಿಯ ದಿವ್ಯಾ ಉರುಡುಗ ದುಬೈನಲ್ಲಿದ್ದಾರೆ. ಅವರೊಂದಿಗೆ ಖುಷಿ ರವಿ, ನಮ್ರತಾ ಸಾಥ್ ನೀಡಿದ್ದಾರೆ.

ಮರಳಿನಲ್ಲಿ ಬಳಸುವ ಸ್ಯಾಂಡ್ ಮೋಟರ್ ಬೈಕ್ ಅನ್ನು ಏರಿ ಖುಷಿ, ದಿವ್ಯಾ ರೌಂಡ್ ಹೊಡೆದಿದ್ದಾರೆ. ಅದಷ್ಟೇ ಅಲ್ಲ, ಸಾಕಿರುವ ರಣಹದ್ದನ್ನು ಕೈಯಲ್ಲಿ ಹಿಡಿದು ನಟಿಯರು ಕ್ಯಾಮೆರಾಗೆ ಪೋಸ್ ನೀಡಿದ್ದಾರೆ. ದಿವ್ಯಾ, ನಮ್ರತಾ, ಖುಷಿ ರಣಹದ್ದನ್ನು ಹಿಡಿದು ಖುಷಿಪಟ್ಟಿದ್ದಾರೆ. ಅಂದಹಾಗೆ, ಕೆಲಸಕ್ಕೆ ಬ್ರೇಕ್ ನೀಡಿ ದುಬೈಗೆ ಹೋಗಿದ್ದಕ್ಕೆ ಕಾರಣವಿದೆ. ಅದವೇ ರಾಜ್ ಕಪ್ ಕ್ರಿಕೆಟ್ ಟೂರ್ನ್‌ಮೆಂಟ್‌ಗಾಗಿ ನಟಿಯರು ತೆರಳಿದ್ದಾರೆ. ಸದ್ಯ ದಿವ್ಯಾ ಉರುಡುಗ 'ನಿನಗಾಗಿ' ಸೀರಿಯಲ್ ನಾಯಕಿಯಾಗಿ ಬ್ಯುಸಿಯಾಗಿದ್ದಾರೆ. ನಮ್ರತಾ ಗೌಡ ಅವರು 'ಬಿಗ್ ಬಾಸ್ ಕನ್ನಡ 10' ಆದ್ಮೇಲೆ ಹಲವು ಶೋ ಮತ್ತು ಜಾಹೀರಾತುಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಸಿನಿಮಾ ಮಾಡಲು ಉತ್ತಮ ಕಥೆಗಾಗಿ ಎದುರು ನೋಡ್ತಿದ್ದಾರೆ.

'ದಿಯಾ' ಖ್ಯಾತಿಯ ಖುಷಿ ರವಿ ಅವರು ಕನ್ನಡ ಮತ್ತು ತೆಲುಗು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಕನ್ನಡ ಚಿತ್ರಗಳ ಜೊತೆ ತೆಲುಗಿನಲ್ಲೂ ಖುಷಿಗೆ ಬೇಡಿಕೆಯಿದೆ.



# ಹಳೆ ನೆನಪು ತೆರೆದಿಟ್ಟ ಅಲ್ಲು ಅರ್ಜುನ್

ಇತ್ತೀಚೆಗಷ್ಟೇ ಆಹಾ ಒಟಿಟಿಯಲ್ಲಿ ನಂದಮೂರಿ ಬಾಲಕೃಷ್ಣ ನಡೆಸಿಕೊಡುತ್ತಿದ್ದ ತಡೆಯಲಾಗದ ಟಾಕ್ ಶೋನಲ್ಲಿ ಬನ್ನಿ ಭಾಗವಹಿಸಿದ್ದರು. ಈ ಸಂಚಿಕೆಯ ಮೊದಲ ಭಾಗ ಈಗಾಗಲೇ ಸ್ಟ್ರೀಮ್ ಆಗುತ್ತಿದೆ. ಈಗ ಎರಡನೇ ಭಾಗ ಪ್ರೇಕ್ಷಕರ ಮುಂದೆ ಬಂದಿದೆ. ಇದರಲ್ಲಿ ಬನ್ನಿ ಮಗ ಅಯಾನ್ ಹಾಗೂ ಮಗಳು ಅರ್ಹಾ ಸದ್ದು ಮಾಡಿದ್ರು. ಅದೇ ಕಾರ್ಯಕ್ರಮದಲ್ಲಿ ಮೆಗಾಸ್ಟಾರ್ ಚಿರಂಜೀವಿ ಮೇಲಿನ ಪ್ರೀತಿಯನ್ನು ಬನ್ನಿ ಬಹಿರಂಗಪಡಿಸಿದರು. 'ಚಿರಂಜೀವಿ ಅವರೊಂದಿಗೆ ಬಾಲ್ಯದಿಂದಲೂ ನನಗೆ ಹೇಗೆ ಸಂಬಂಧವಿದೆ ಎಂಬುದು ಎಲ್ಲಾರಿಗೂ ತಿಳಿದಿದೆ. ನನಗೆ ಅವನು ತುಂಬಾ ಇಷ್ಟ. 20 ವರ್ಷಗಳ ನಂತರ ನಾನು ಅವರೊಂದಿಗೆ ಹೇಗೆ ಇದ್ದೆ ಎಂಬುದು ಅವರಿಗೆ ತಿಳಿದಿದೆ. ಆದರೆ 20 ವರ್ಷಗಳ ಮೊದಲು ನಾನು ಚಿರಂಜೀವಿಯೊಂದಿಗೆ ಹೇಗೆ ಇದ್ದೆ ಎಂಬುದು ಯಾರಿಗೂ ತಿಳಿದಿಲ್ಲ. ನಾನು ಬಾಲ್ಯದಿಂದಲೂ ನೋಡುತ್ತಾ ಬೆಳೆದವನು. ನಾನು ಅವರನ್ನು ಹೀರೋ ಎನ್ನುವುದಕ್ಕಿಂತ ಒಬ್ಬ ವ್ಯಕ್ತಿಯಾಗಿ ಇಷ್ಟಪಡುತ್ತೇನೆ' ಎಂದಿದ್ದಾರೆ ಅಲ್ಲು ಅರ್ಜುನ್.

**ವಿದೇಶಕ್ಕೆ ಕರೆದುಕೊಂಡು ಹೋದ ಮೊದಲ ವ್ಯಕ್ತಿ ಚಿರಂಜೀವಿ**

'ನಾನು ಚಿಕ್ಕವನಿದ್ದಾಗ ನಮ್ಮನ್ನೆಲ್ಲ ವಿದೇಶಕ್ಕೆ ಕರೆದೊಯ್ದ ಮೊದಲ ವ್ಯಕ್ತಿ ಚಿರಂಜೀವಿ. ಅವರು ಬಯಸಿದರೆ, ಅವರ ಕುಟುಂಬದ ಜೊತೆ ಹೋಗಬಹುದಿತ್ತು. ಆದರೆ ಅವರು ನಮ್ಮನ್ನೆಲ್ಲರನ್ನು ಕರೆದುಕೊಂಡು ಹೋದರು. ಆ ಕಾಲದಲ್ಲಿ ಇಷ್ಟು ಮಕ್ಕಳನ್ನು ಹೊತ್ತುಕೊಂಡು ಹೋಗುವುದು ಅಸಾಧ್ಯವಾಗಿತ್ತು. ಅವರು ನಮ್ಮನ್ನು ಹಾಗೆ ಕರೆದುಕೊಂಡು ಹೋದರು. ನಾನು ಅವರನ್ನು ಚಿಕ್ ಬಾಬಾ ಎಂದು ಕರೆಯುತ್ತೇನೆ. ಅವರು ನನ್ನ ಅಜ್ಜ ರಾಮಲಿಂಗಯ್ಯನವರನ್ನು ತುಂಬಾ ಗೌರವಿಸುತ್ತಾರೆ. ಕೆಲವೊಮ್ಮೆ, ನನ್ನ ತಂದೆ ನನಗೆ ನೀಡಿದ್ದಕ್ಕಿಂತ ಹೆಚ್ಚಿನ ಗೌರವವನ್ನು ನೀಡುತ್ತಾರೆ' ಎಂದಿದ್ದಾರೆ ಅಲ್ಲು ಅರ್ಜುನ್.

# ಚಾಹಲ್ ಪತ್ನಿ ಧನಶ್ರೀ ಟಾಲಿವುಡ್‌ಗೆ ಎಂಟ್ರಿ

ಭಾರತ ಕ್ರಿಕೆಟ್ ತಂಡದ ಆಟಗಾರ ಯಜುವೇಂದ್ರ ಚಾಹಲ್ ಪತ್ನಿ ಧನಶ್ರೀ ಟಾಲಿವುಡ್‌ಗೆ ನಾಯಕಿಯಾಗಿ ಎಂಟ್ರಿ ಕೊಡಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ಅತ್ಯುತ್ತಮ ಡ್ಯಾನ್ಸರ್ ಆಗಿರುವ ಧನಶ್ರೀ ಆಗಾಗ ಸೋಶಿಯಲ್ ಮೀಡಿಯಾದಲ್ಲಿ ಡ್ಯಾನ್ಸ್ ವಿಡಿಯೋಗಳನ್ನು ಅಪ್‌ಲೋಡ್ ಮಾಡುತ್ತಿರುತ್ತಾರೆ. ಇದೀಗ ಯಜುವೇಂದ್ರ ಚಾಹಲ್ ಪತ್ನಿಗೆ ತೆಲುಗು ಸಿನಿಮಾರಂಗದಿಂದ ಬುಲಾವ್ ಬಂದಿದೆ ಎನ್ನಲಾಗಿದೆ. ನೃತ್ಯ ಆಧರಿಸಿ ಕತೆಯುಳ್ಳ 'ಆಕಾಶಂ ಧಾಟಿ ವಸ್ತಾವ' ಎಂಬ ಸಿನಿಮಾದಲ್ಲಿ ಧನಶ್ರೀ ಹೀರೋಯಿನ್ ಆಗಿ ಆಯ್ಕೆ ಆಗಿದ್ದಾರಂತೆ. ಡ್ಯಾನ್ಸ್ ಮಾಸ್ಟರ್ ಯಶ್ ಈ ಚಿತ್ರದ ನಾಯಕನಾಗಿದ್ದಾರೆ. ಚಿತ್ರಕ್ಕೆ ಶಶಿಕುಮಾರ್ ಮುತ್ತುಲೂರಿ ನಿರ್ದೇಶನ ಮಾಡುತ್ತಿದ್ದಾರೆ ಎನ್ನಲಾಗಿದೆ. ಈಗಾಗಲೇ ಧನಶ್ರೀ ಭಾಗದ ಕೆಲವು ದೃಶ್ಯಗಳ ಶೂಟಿಂಗ್ ಕೂಡ ನಡೆದಿದೆ ಎನ್ನಲಾಗಿದೆ. ಅಷ್ಟಕ್ಕೂ ಈ ವಿಚಾರ ನಿಜನಾ ಚಿತ್ರತಂಡದಿಂದ ಮಾಹಿತಿ ಸಿಗುವವರೆಗೂ ಕಾದುನೋಡಬೇಕಿದೆ.





# ಕಪ್ಪು-ಬಿಳಿ ಪಾತ್ರಗಳ ಕಹಾನಿ

ಹೀರೋ ಪಾತ್ರಕ್ಕೂ ಸೈ, ವಿಲನ್ ಪಾತ್ರಕ್ಕೂ ಸೈ ಎಂಬಂತಿರುವ ನಟ ಡಾಲಿ ಧನಂಜಯ. ಈಗಾಗಲೇ ಅವರು ತಮ್ಮ ಸಾಮರ್ಥ್ಯ ಏನು ಎಂಬುದನ್ನು ಸಾಬೀತು ಮಾಡಿದ್ದಾರೆ. ಅವರ ಜೊತೆ ಸಿನಿಮಾ ಮಾಡಲು ಪರಭಾಷೆಯ ಮಂದಿ ಕೂಡ ಇಷ್ಟಪಡುತ್ತಾರೆ. ಈ ವಾರ (ನವೆಂಬರ್ 22) ಬಿಡುಗಡೆ ಆಗಿರುವ 'ಜೀಬ್ರಾ' ಚಿತ್ರವೇ ಈ ಮಾತಿಗೆ ಸಾಕ್ಷಿ. ಈ ಸಿನಿಮಾದ ಪಾತ್ರವರ್ಗದಲ್ಲಿ ತೆಲುಗು ಕಲಾವಿದರೇ ಜಾಸ್ತಿ ಇದ್ದಾರೆ.

ಅವರ ಜೊತೆ ಡಾಲಿ ಧನಂಜಯ್ ಕೂಡ ಪ್ರಮುಖ ಪಾತ್ರವನ್ನು ಮಾಡಿದ್ದಾರೆ. ಕನ್ನಡ, ತೆಲುಗು, ತಮಿಳು ಮತ್ತು ಹಿಂದಿ ಭಾಷೆಯಲ್ಲಿ ಈ ಚಿತ್ರ ಬಿಡುಗಡೆ ಆಗಿದೆ.

ಡಾಲಿ ಧನಂಜಯ ಜೊತೆ ಕನ್ನಡದ ಅಮೃತಾ ಅಯ್ಯಂಗಾರ್, ಗರುಡ ರಾಮ್ ಕೂಡ 'ಜೀಬ್ರಾ' ಸಿನಿಮಾದಲ್ಲಿ ನಟಿಸಿದ್ದಾರೆ. ಹಾಗಾಗಿ ಕನ್ನಡದ ಪ್ರೇಕ್ಷಕರಿಗೆ ಈ ಸಿನಿಮಾ ಆಪ್ತವಾಗುವಂತಿದೆ. ಇನ್ನು, ಈ ಸಿನಿಮಾದ ಕಥೆ ಯಾವುದೇ ಒಂದು ಭಾಷೆಗೆ ಸೀಮಿತ ಆಗುವಂಥದ್ದಲ್ಲ. ಈ ಚಿತ್ರದಲ್ಲಿ ಬ್ಯಾಂಕಿಂಗ್ ವ್ಯವಹಾರಗಳ ಕುರಿತ ಕಥೆ ಇದೆ. ಕಲರ್ ಕಲರ್ ಕರೆನ್ಸಿ ನೋಟುಗಳು ಹರಿದಾಡುವ ಬ್ಯಾಂಕ್‌ನಂತಹ ಜಾಗದಲ್ಲಿ ಕಪ್ಪು-ಬಿಳುಪಿನ ವ್ಯಕ್ತಿತ್ವದ ಜನರು ಹೇಗಿರುತ್ತಾರೆ ಎಂಬುದನ್ನು 'ಜೀಬ್ರಾ' ಸಿನಿಮಾ ವಿವರಿಸುತ್ತದೆ. ಗ್ರಾಹಕರು ಹೊರಗಿನಿಂದ ನೋಡುವಷ್ಟು ಸರಳವಾಗಿ ಬ್ಯಾಂಗ್‌ನ ಒಳಗಿನ ವ್ಯವಹಾರಗಳು ಇರುವುದಿಲ್ಲ. ಬ್ಯಾಂಕ್‌ನಲ್ಲಿ ದುಡ್ಡು ಎಷ್ಟು ಭದ್ರವಾಗಿ ಇರುತ್ತದೆಯೋ ಅದೇ ರೀತಿ ಕೆಲವು ಲೋಪದೋಷಗಳು ಕೂಡ ಇರುತ್ತವೆ. ಅಂಥ ಅಂಶಗಳನ್ನು ಇಟ್ಟುಕೊಂಡು ನಿರ್ದೇಶಕ ಈಶ್ವರ್ ಕಾರ್ತಿಕ್ ಅವರು ಒಂದು ಥ್ರಿಲ್ಲಿಂಗ್ ಆದಂತಹ ಸಿನಿಮಾವನ್ನು ಮಾಡಿದ್ದಾರೆ. ಬ್ಯಾಂಕ್ ವ್ಯವಹಾರದ ಇನ್ನೊಂದು ಮುಖವನ್ನು ಕೂಡ ಅವರು 'ಜೀಬ್ರಾ' ಚಿತ್ರದಲ್ಲಿ ತೋರಿಸಿದ್ದಾರೆ.



# ಅಲ್ಲು ಅರ್ಜುನ್ ಜೊತೆಗಿನ ಐಟಂ ಸಾಂಗ್ ನ.24ಕ್ಕೆ ರಿಲೀಸ್

**ಶ್ರೀಲೀಲಾ ಫ್ಯಾನ್ಸ್‌ಗೆ ಸಿಹಿಸುದ್ದಿ**

ಕನ್ನಡದ ಭರಾಟೆ ಬ್ಯೂಟಿ ಶ್ರೀಲೀಲಾ 'ಪುಷ್ಪ 2' ಸಿನಿಮಾದಲ್ಲಿ ಸೊಂಟ ಬಳುಕಿಸಿರುವ ವಿಚಾರ ಈಗಾಗಲೇ ರಿವೀಲ್ ಆಗಿದೆ. ಆದರೆ ಈ ಸಾಂಗ್ ರಿಲೀಸ್ ಆಗೋದು ಯಾವಾಗ ಎಂಬುದಕ್ಕೆ ಇದೀಗ ಉತ್ತರ ಸಿಕ್ಕಿದೆ. ಅಲ್ಲು ಅರ್ಜುನ್ ಜೊತೆಗಿನ ಶ್ರೀಲೀಲಾ ಐಟಂ ಸಾಂಗ್ ರಿಲೀಸ್ ಆಗಲಿರುವ ದಿನಾಂಕವನ್ನು ಚಿತ್ರತಂಡ ಅನೌನ್ಸ್ ಮಾಡಿದೆ. ಅಲ್ಲು ಅರ್ಜುನ್ ಮತ್ತು ಶ್ರೀಲೀಲಾ ಜೋಡಿ 'ಕಿಸ್ಸಿಕ್' ಎಂಬ ಹಾಡಿಗೆ ಈಗಾಗಲೇ ಹೆಜ್ಜೆ ಹಾಕಿದ್ದಾರೆ. ನ.24ರಂದು ಸಂಜೆ 7: 02ಕ್ಕೆ ಈ ಸಾಂಗ್ ರಿಲೀಸ್ ಆಗಲಿದೆ ಎಂದು ನಿರ್ಮಾಣ ಸಂಸ್ಥೆ ಗುಡ್ ನ್ಯೂಸ್ ಕೊಟ್ಟಿದೆ. ಈಗಾಗಲೇ ಚಿತ್ರತಂಡ ರಿವೀಲ್ ಮಾಡಿರುವ ಶ್ರೀಲೀಲಾ ಪೋಸ್ಟರ್‌ನಿಂದ ಹಾಡಿನ ಕುರಿತು ನಿರೀಕ್ಷೆ ಹೆಚ್ಚಿಸಿದೆ. 'ಕಿಸ್ಸಿಕ್' ಹಾಡಿಗಾಗಿ ಪಡ್ಡೆಹುಡುಗರು ಎದುರು ನೋಡುತ್ತಿದ್ದಾರೆ. ಅಂದಹಾಗೆ, ಡಿ.5ಕ್ಕೆ 'ಪುಷ್ಪ 2' ಸಿನಿಮಾ ರಿಲೀಸ್ ಆಗುತ್ತಿದೆ. ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಡಾಲಿ ಧನಂಜಯ, ಫಹಾದ್ ಫಾಸಿಲ್, ಅನಸೂಯ ಸೇರಿದಂತೆ ಅನೇಕರು ನಟಿಸಿದ್ದಾರೆ.

# ಭಾರತದ ಮಾರಕ ದಾಳಿಗೆ ಕಾಂಗರೂಗಳು ಕಕ್ಕಾಬಿಕ್ಕಿ

ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ಪರ್ತ್‌ನ ಆಪ್ಟಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಟೆಸ್ಟ್ ಪಂದ್ಯದ ಮೊದಲ ದಿನದಾಟ ಅಂತ್ಯಗೊಂಡಿದೆ.

ಮೊದಲ ದಿನವೇ ಎರಡೂ ತಂಡಗಳು ಮೊದಲ ಇನ್ನಿಂಗ್ಸ್ ಆಡಿದ್ದು, ಇದರಲ್ಲಿ ಟೀಂ ಇಂಡಿಯಾ 150 ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿದರೆ, ಇತ್ತ ಆತಿಥೇಯ ಆಸ್ಟ್ರೇಲಿಯಾ ಕೂಡ ತನ್ನ ಮೊದಲ ಇನ್ನಿಂಗ್ಸ್ ಆರಂಭಿಸಿದ್ದು, ಮೊದಲ ದಿನದಾಟದಂತ್ಯಕ್ಕೆ ಪ್ರಮುಖ 7 ವಿಕೆಟ್ ಕಳೆದುಕೊಂಡು 67 ರನ್ ಕಲೆಹಾಕಿದೆ. ಭಾರತದ ಪರ ನಾಯಕ ಜಸ್ಪ್ರೀತ್ ಬುಮ್ರಾ ಅಧಿಕ 4 ವಿಕೆಟ್ ಪಡೆದರೆ, ಮೊಹಮ್ಮದ್ ಸಿರಾಜ್ 2 ಹಾಗೂ ಯುವ ವೇಗಿ ಹರ್ಷಿತ್ ರಾಣಾ ಕೂಡ 1 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು.



**67 ರನ್‌ಗೆ 7 ವಿಕೆಟ್**

**67 ರನ್‌ಗಳಿಗೆ 7 ವಿಕೆಟ್:** ಭಾರತವನ್ನು 150 ರನ್‌ಗಳಿಗೆ ಆಲೌಟ್ ಮಾಡಿ ಮೊದಲ ಇನ್ನಿಂಗ್ಸ್ ಆರಂಭಿಸಿದ ಆಸ್ಟ್ರೇಲಿಯಾಕ್ಕೂ ಟೀಂ ಇಂಡಿಯಾ ವೇಗಿಗಳು ಆರಂಭದಿಂದಲೂ ಕಾಟ ನೀಡಲು ಶುರು ಮಾಡಿದ್ದರು. ಭಾರತದ ಮಾರಕ ದಾಳಿ ಹೇಗಿತ್ತೆಂದರೆ, ಒಬ್ಬನೇ ಒಬ್ಬ ಆಸೀಸ್ ಬ್ಯಾಟರ್‌ಗೆ ಹೆಚ್ಚು ಹೊತ್ತು ಮೈದಾನದಲ್ಲಿ ನಿಲ್ಲಲು ಸಾಧ್ಯವಾಗಲಿಲ್ಲ. ಲಬುಶೇನ್ ಒಬ್ಬರೇ ಆಸೀಸ್ ಪರ ಅತ್ಯಧಿಕ 52 ಎಸೆತಗಳನ್ನು ಎದುರಿಸಿದರಾದರೂ ಅವರ ಬ್ಯಾಟ್‌ನಿಂದ ಬಂದಿದ್ದು ಕೇವಲ 2 ರನ್ ಮಾತ್ರ. ಉಳಿದಂತೆ ಆಸ್ಟ್ರೇಲಿಯಾದ ಯಾವ ಬ್ಯಾಟರ್‌ಗೂ 20 ರನ್‌ಗಳ ಗಡಿ ಮುಟ್ಟಲು ಸಾಧ್ಯವಾಗಲಿಲ್ಲ. ತಂಡದ ಪರ ಅಲೆಕ್ಸ್ ಕ್ಯಾರಿ ಅತ್ಯಧಿಕ ಅಜೇಯ 19 ರನ್‌ಗಳ ಇನ್ನಿಂಗ್ಸ್ ಆಡಿದ್ದಾರೆ.

**150 ರನ್‌ಗಳಿಗೆ ಭಾರತ ಆಲೌಟ್:** ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಭಾರತದ ಮೊದಲ ಇನ್ನಿಂಗ್ಸ್ 150 ರನ್‌ಗಳಿಗೆ ಅಂತ್ಯವಾಯಿತು. ತಂಡದ ಪರ ನಿತೀಶ್ ರೆಡ್ಡಿ ಗರಿಷ್ಠ 41 ರನ್ ಗಳಿಸಿದರೆ, ರಿಷಭ್ ಪಂತ್ 37 ರನ್ ಹಾಗೂ ಕೆಎಲ್ ರಾಹುಲ್ 26 ರನ್ ಗಳ ಇನಿಂಗ್ಸ್ ಆಡಿದರು. ಉಳಿದಂತೆ ಯಶಸ್ವಿ ಜೈಸ್ವಾಲ್ ಮತ್ತು ದೇವದತ್ ಪಡಿಕ್ಕಲ್ ಖಾತೆ ತೆರೆಯದೆ ಪೆವಿಲಿಯನ್‌ಗೆ ಮರಳಿದರೆ, ವಿರಾಟ್ ಕೊಹ್ಲಿ ಐದು ರನ್ ಗಳಿಸಿ ಔಟಾದರು. ಧ್ರುವ್ ಜುರೆಲ್ 11 ರನ್ ಗಳಿಸಿ ವಿಕೆಟ್ ಒಪ್ಪಿಸಿದರೆ. ವಾಷಿಂಗ್ಟನ್ ಸುಂದರ್ ಕೂಡ ನಾಲ್ಕು ರನ್ ಬಾರಿಸಿ ಬ್ಯಾಟ್ ಎತ್ತಿಟ್ಟರು.

**ಹೇಜಲ್‌ವುಡ್‌ಗೆ 4 ವಿಕೆಟ್:** ಆದರೆ ಪಂತ್ ಮತ್ತು ನಿತೀಶ್ ಏಳನೇ ವಿಕೆಟ್‌ಗೆ 48 ರನ್‌ಗಳ ಜೊತೆಯಾಟ ನೀಡಿದರು. ಈ ಜೊತೆಯಾಟವನ್ನು ಕಮ್ಮಿನ್ಸ್ ಮುರಿದರು. ಪಂತ್ ಔಟಾದ ತಕ್ಷಣ ಭಾರತದ ಇನ್ನಿಂಗ್ಸ್ 150 ರನ್‌ಗಳಿಗೆ ಕುಸಿಯಿತು. ಅಂತಿಮವಾಗಿ ಹರ್ಷಿತ್ ರಾಣಾ ಏಳು ರನ್ ಗಳಿಸಿ ಔಟಾದರೆ, ಬುಮ್ರಾ ಎಂಟು ರನ್ ಗಳಿಸಿ ಔಟಾದರು. ಆಸ್ಟ್ರೇಲಿಯಾ ಪರ ಜೋಶ್ ಹೇಜಲ್‌ವುಡ್ ನಾಲ್ಕು ವಿಕೆಟ್ ಪಡೆದರು. ಮಿಚೆಲ್ ಸ್ಟಾರ್ಕ್, ಪ್ಯಾಟ್ ಕಮಿನ್ಸ್ ಮತ್ತು ಮಾರ್ಷ್ ತಲಾ ಎರಡು ವಿಕೆಟ್ ಪಡೆದರು.

# ಬುಮ್ರಾಸ್ತ್ರಕ್ಕೆ ಅಪರೂಪದ ದಾಖಲೆಗಳೆಲ್ಲ ಉಡೀಸ್!


ಪರ್ತ್ ಟೆಸ್ಟ್‌ನ ಮೊದಲ ದಿನದಾಟ ಮುಕ್ತಾಯಗೊಂಡಿದೆ. ಆಸ್ಟ್ರೇಲಿಯ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ 7 ವಿಕೆಟ್ ಕಳೆದುಕೊಂಡು 67 ರನ್ ಗಳಿಸಿದರೆ, ಇತ್ತ ಮೊದಲು ಬ್ಯಾಟ್ ಮಾಡಿದ ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ 150 ರನ್ ಗಳಿಸಿತ್ತು. ಈ ನಿಟ್ಟಿನಲ್ಲಿ ಆಸ್ಟ್ರೇಲಿಯಾ ಇನ್ನೂ 83 ರನ್‌ಗಳ ಹಿನ್ನಡೆ ಅನುಭವಿಸಿದೆ. ಇನ್ನು ಆಸ್ಟ್ರೇಲಿಯಾವನ್ನು ಇಷ್ಟು ಕಡಿಮೆ ಮೊತ್ತಕ್ಕೆಕಟ್ಟಿ ಹಾಕುವಲ್ಲಿ ಜಸ್ಪ್ರಿತ್ ಬುಮ್ರಾ ಪ್ರಮುಖ ಪಾತ್ರ ವಹಿಸಿದರು.

ವಾಸ್ತವವಾಗಿ ಈ ಪಂದ್ಯದಲ್ಲಿ ಟೀಂ ಇಂಡಿಯಾ ನಾಯಕತ್ವವನ್ನು ಬುಮ್ರಾ ವಹಿಸಿಕೊಂಡಿದ್ದಾರೆ. ಹೀಗಾಗಿ ನಾಯಕತ್ವದ ಜೊತೆಗೆ ಬೌಲಿಂಗ್ ವಿಭಾಗವನ್ನು ಮುನ್ನಡೆಸುವ ಜವಬ್ದಾರಿ ಬುಮ್ರಾ ಮೇಲಿತ್ತು. ಈ ಜವಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಿದ ಬುಮ್ರಾ, ಮೊದಲ ದಿನ 10 ಓವರ್‌ಗಳಲ್ಲಿ ಕೇವಲ 17 ರನ್ ನೀಡಿ 4 ವಿಕೆಟ್ ಪಡೆದರು. ಈ ಮೂಲಕ ಬುಮ್ರಾ, ಆಸ್ಟ್ರೇಲಿಯಾದಲ್ಲಿ ಅತಿ ಹೆಚ್ಚು ಟೆಸ್ಟ್ ವಿಕೆಟ್‌ಗಳನ್ನು ಪಡೆದ ಭಾರತದ ಬೌಲರ್‌ಗಳ ಪಟ್ಟಿಯಲ್ಲಿ ನಾಲ್ಕನೇ ಸ್ಥಾನವನ್ನು ತಲುಪಿದ್ದಾರೆ. ಬುಮ್ರಾ ಆಸ್ಟ್ರೇಲಿಯಾ ನೆಲದಲ್ಲಿ ಎಂಟನೇ ಟೆಸ್ಟ್ ಆಡುತ್ತಿದ್ದು ಇದುವರೆಗೆ 35 ವಿಕೆಟ್ ಪಡೆದಿದ್ದಾರೆ.

ಇದರೊಂದಿಗೆ ಅವರು ಆಸ್ಟ್ರೇಲಿಯಾದಲ್ಲಿ 35 ಟೆಸ್ಟ್ ವಿಕೆಟ್‌ಗಳನ್ನು ಪಡೆದ ಮಾಜಿ ಸ್ಪಿನ್ನರ್ ಬಿಷನ್ ಸಿಂಗ್ ಬೇಡಿ ಅವರ ದಾಖಲೆಯನ್ನು ಮುರಿದಿದ್ದಾರೆ. ಇನ್ನು ಈ ಪಟ್ಟಿಯಲ್ಲಿ ಕಪಿಲ್ ದೇವ್ (51 ವಿಕೆಟ್), ಅನಿಲ್ ಕುಂಬ್ಳೆ (49 ವಿಕೆಟ್) ಮತ್ತು ರವಿಚಂದ್ರನ್ ಅಶ್ವಿನ್ (39 ವಿಕೆಟ್) ಮಾತ್ರ ಅವರಿಗಿಂತ ಮುಂದಿದ್ದಾರೆ.

ಇದಲ್ಲದೆ ಆಸೀಸ್ ಬ್ಯಾಟಿಂಗ್ ವಿಭಾಗದ ಮೊದಲ 3 ವಿಕೆಟ್‌ಗಳನ್ನು ಉರುಳಿಸಿದ ಜಸ್ಪ್ರಿತ್ ತಮ್ಮ ಹೆಸರಿನಲ್ಲಿ ದೊಡ್ಡ ದಾಖಲೆ ಬರೆದಿದ್ದು, ಡೇಲ್ ಸ್ಟೇನ್ ಅವರ ದಾಖಲೆಯನ್ನು ಸರಿಗಟ್ಟಿದ್ದಾರೆ. ಬುಮ್ರಾ, ಆಸ್ಟ್ರೇಲಿಯಾದ ಸ್ಟೀವ್ ಸ್ಮಿತ್ ಅವರನ್ನು ಗೋಲ್ಡನ್ ಡಕ್‌ಗೆ ಔಟ್ ಮಾಡಿದರು. ಇದರೊಂದಗೆ ಈ ಸಾಧನೆ ಮಾಡಿದ ವಿಶ್ವದ ಎರಡನೇ ಬೌಲರ್ ಎನಿಸಿಕೊಂಡರು. ಬುಮ್ರಾಗೂ ಮೊದಲು ಡೇಲ್ ಸ್ಟೇನ್ ಮಾತ್ರ ಸ್ಮಿತ್‌ರನ್ನು ಗೋಲ್ಡನ್ ಡಕ್‌ಗೆ ಹೊರಹಾಕಿದ್ದರು.

ಇದಲ್ಲದೆ ಬುಮ್ರಾ, ಕಳೆದ 24 ವರ್ಷಗಳಲ್ಲಿ ಅತ್ಯುತ್ತಮ ಬೌಲಿಂಗ್ ಸರಾಸರಿ ಹೊಂದಿರುವ ಬೌಲರ್ ಎನಿಸಿಕೊಂಡಿದ್ದಾರೆ. 2000 ರಿಂದ 100 ಕ್ಕೂ ಹೆಚ್ಚು ಟೆಸ್ಟ್ ವಿಕೆಟ್‌ಗಳನ್ನು ಪಡೆದಿರುವ ಬೌಲರ್‌ಗಳ ಪೈಕಿ ಬುಮ್ರಾ ಅವರ ಬೌಲಿಂಗ್ ಸರಾಸರಿ 20.3 ಆಗಿದೆ. ಅಂದರೆ ಅವರು ಪ್ರತಿ 20.3 ಎಸೆತಗಳಿಗೆ ಒಂದು ವಿಕೆಟ್ ಪಡೆಯುತ್ತಿದ್ದಾರೆ.



# ಅಖಾಡಕ್ಕಿಳಿಯಲು ನಾನು ಸಿದ್ಧ ಎಂದ ಪೂಜಾರ



**ಭಾರತದ ಪೆವಿಲಿಯನ್ ಪರೇಡ್**

ಅನುಭವಿಗಳಿಲ್ಲದೆ ಆಸ್ಟ್ರೇಲಿಯಾ ಪ್ರವಾಸ ಮಾಡಿರುವ ಟೀಂ ಇಂಡಿಯಾ ಅದರ ಭಾರವನ್ನು ಮೊದಲ ಟೆಸ್ಟ್ ಪಂದ್ಯದಲ್ಲೇ ಹೊರಬೇಕಾಗಿ ಬಂದಿದೆ. ಇದೇ ಮೊದಲ ಬಾರಿಗೆ ಆಸೀಸ್ ನೆಲದಲ್ಲಿ ಆಡುತ್ತಿರುವ ಅನಾನುಭವಿ ಆಟಗಾರರು ಆಸೀಸ್ ವೇಗಿಗಳ ಮುಂದೆ ರನ್ ಗಳಿಸಲು ಪರದಾಡುತ್ತಿದ್ದಾರೆ. ಒಂದೆಡೆ ಆಸೀಸ್ ವೇಗಿಗಳು ತಮ್ಮ ಕರಾರುವಕ್ಕಾದ ದಾಳಿಯಿಂದ ಟೀಂ ಇಂಡಿಯಾದ ಬ್ಯಾಟಿಂಗ್ ಬೆನ್ನೆಲುಬು ಮುರಿದರೆ, ಇನ್ನೊಂದೆಡೆ ತಂಡದ ಅನುಭವಿಗಳು ಕೂಡ ಸಂಕಷ್ಟದಲ್ಲಿ ಸಮಯದಲ್ಲಿ ಇನ್ನಿಂಗ್ಸ್ ನಿಭಾಯಿಸುವಲ್ಲಿ ವಿಫಲರಾಗಿದ್ದಾರೆ. ಹೀಗಾಗಿ ಭಾರತದ ಟೆಸ್ಟ್ ಸ್ಪೆಷಲಿಸ್ಟ್‌ಗಳೆಂದೇ ಪ್ರಸಿದ್ಧರಾಗಿದ್ದ ಅಜಿಂಕ್ಯ ರಹಾನೆ ಹಾಗೂ ಚೇತೇಶ್ವರ ಪೂಜಾರ ಅವರ ಅನುಪಸ್ಥಿತಿ ಟೀಂ ಇಂಡಿಯಾ ಅಭಿಮಾನಿಗಳನ್ನು ಕಾಡಲಾರಂಭಿಸಿದೆ. ಈ ನಡುವೆ ಚೇತೇಶ್ವರ ಪೂಜಾರ ನೀಡಿರುವ ಹೇಳಿಕೆ ಇದೀಗ ಎಲ್ಲೆಡೆ ಸಖತ್ ವೈರಲ್ ಆಗುತ್ತಿದೆ.

ಬ್ಯಾಟಿಂಗ್ ಮಾಡಲು ಸದಾ ಸಿದ್ಧ ವಾಸ್ತವವಾಗಿ ಆಸ್ಟ್ರೇಲಿಯಾ ಪ್ರವಾಸದಲ್ಲಿ ಚೇತೇಶ್ವರ ಪೂಜಾರಗೆ ತಂಡದಲ್ಲಿ ಅವಕಾಶ ಸಿಕ್ಕಿಲ್ಲ. ಆಟಗಾರನಾಗಿ ಅಲ್ಲದಿದ್ದರೂ, ವೀಕ್ಷಕ ವಿವರಣೆಗಾರನಾಗಿ ಈ ಟೆಸ್ಟ್‌ನ ಭಾಗವಾಗಿರುವ ಪೂಜಾರ, ಹಿಂದಿ ಭಾಷೆಯ ವೀಕ್ಷಕ ವಿವರಣೆಗಾರನಾಗಿ ಕಾಣಿಸಿಕೊಂಡಿದ್ದಾರೆ. ಈ ಸಮಯದಲ್ಲಿ ಭಾರತದ ಇನ್ನಿಂಗ್ಸ್ ಆರಂಭಿಸಿದ ಯಶಸ್ವಿ ಜೈಸ್ವಾಲ್ ಶೂನ್ಯಕ್ಕೆ ಔಟಾದ ಬಳಿಕ ಕಾಮೆಂಟರಿ ಬಾಕ್ಸ್‌ನಲ್ಲಿ ಕುಳಿತಿದ್ದ ಪೂಜಾರ, ತಾನು ಬ್ಯಾಟಿಂಗ್ ಮಾಡಲು ಸದಾ ಸಿದ್ಧ ಎಂದು ಹೇಳುವ ಮೂಲಕ ಟೀಂ ಇಂಡಿಯಾದಲ್ಲಿ ಮತ್ತೆ ಆಡುವ ಬಗ್ಗೆ ತಮ್ಮ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ. ಆದಾಗ್ಯೂ ಪೂಜಾರ ಯಾವುದೇ ಕೆಟ್ಟ ಆಲೋಚನೆಯಿಂದ ಹೀಗೆ ಹೇಳಿಕೆ ನಿಡಲಿಲ್ಲ. ಬದಲಿಗೆ, ಯಶಸ್ವಿ ವಿಕೆಟ್ ಪತನದ ನಂತರ ಕಾಮೆಂಟರಿ ಬಾಕ್ಸ್‌ನಲ್ಲಿ ಪೂಜಾರ ಜೊತೆಗಿದ್ದ ಜತಿನ್ ಸಪ್ರು, ಆಸ್ಟ್ರೇಲಿಯಾ ವಿರುದ್ಧ ಪೂಜಾರ ಅವರ ಬ್ಯಾಟಿಂಗ್ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಪೂಜಾರ, ನಾನು ಯಾವಾಗ ಬೇಕಾದರೂ ಬ್ಯಾಟಿಂಗ್ ಮಾಡಲು ಸಿದ್ಧ ಎಂದು ಹೇಳಿದರು.

# ಏನಾಯ್ತು ಕೊಹ್ಲಿ

## ರನ್ ಬರುತ್ತಿಲ್ಲ; ಕ್ಯಾಚ್ ಕೂಡ ಹಿಡಿಯುತ್ತಿಲ್ಲ..!

ವಿರಾಟ್ ಕೊಹ್ಲಿ ಕ್ರಿಕೆಟ್ ಲೋಕದಲ್ಲಿ ಅನಭಿಶಕ್ತ ದೊರೆಯಾಗಿ ಮೆರೆಯುತ್ತಿರುವ ಈ ರನ್ ಸಾಮಾಟ್ರ, ಮುರಿಯದ ದಾಖಲೆಗಳಿಲ್ಲ, ನಿರ್ಮಿಸದ ದಾಖಲೆಗಳೂ ಇಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಆದ್ಯಾಕೋ ಕೊಹ್ಲಿ, ಕ್ರಿಕೆಟ್ ಮರೆತವರಂತೆ ವರ್ತಿಸುತ್ತಿದ್ದಾರೆ. ಕೊಹ್ಲಿ ಎಂದರೆ ನಮಗೆಲ್ಲ ಥಟ್ಟನೇ ನೆನಪಾಗುತ್ತಿದ್ದು, ಬ್ಯಾಟಿಂಗ್‌ನಲ್ಲಿ ರನ್‌ಗಳ ಗುಡ್ಡೆ ಹಾಕುವ, ಫೀಲ್ಡಿಂಗ್‌ನಲ್ಲಿ ಚಿರತೆಯಂತೆ ಎಗರಿ ಅದ್ಭುತ ಕ್ಯಾಚ್‌ಗಳನ್ನು ಹಿಡಿಯುವ ಅದ್ಭುತ ಫಿಲ್ಡರ್ ಆಗಿ. ಆದರೀಗ ಈ ಎರಡೂ ವಿಭಾಗಗಳಲ್ಲಿ ಕೊಹ್ಲಿಯ ವೈಫಲ್ಯ ಎದ್ದು ಕಾಣಿಸುತ್ತಿದೆ. ಬ್ಯಾಟಿಂಗ್‌ನಲ್ಲಿ ರನ್ ಬರ ಎದುರಿಸುತ್ತಿರುವ ವಿರಾಟ್, ಇತ್ತೀಚೆಗೆ ಫೀಲ್ಡಿಂಗ್‌ನಲ್ಲೂ ಹಲವು ಸುಲಭ ಕ್ಯಾಚ್‌ಗಳನ್ನು ಕೈಚೆಲ್ಲಿ ತುಂಬಾ ದುಬಾರಿಯಾಗುತ್ತಿದ್ದಾರೆ. ಪ್ರಸ್ತುತ ಆಸ್ಟ್ರೇಲಿಯಾ ವಿರುದ್ಧ ನಡೆಯುತ್ತಿರುವ ಪರ್ತ್ ಟೆಸ್ಟ್‌ನಲ್ಲೂ ಕೊಹ್ಲಿಯ ಕಳಪೆ ಫೀಲ್ಡಿಂಗ್ ಮತ್ತೆ ಮುನ್ನೆಲೆಗೆ ಬಂದಿದೆ.

**ಬುಮ್ರಾ ಮಾರಕ ದಾಳಿ**

ವಾಸ್ತವವಾಗಿ ಕೇವಲ 150 ರನ್‌ಗಳಿಗೆ ತನ್ನ ಮೊದಲ ಇನ್ನಿಂಗ್ಸ್ ಮುಗಿಸಿರುವ ಟೀಂ ಇಂಡಿಯಾ, ಆಸ್ಟ್ರೇಲಿಯಾ ವಿರುದ್ಧ ಅದ್ಭುತ ಬೌಲಿಂಗ್ ಪ್ರದರ್ಶಿಸುತ್ತಿದೆ. ನಾಯಕ ಬುಮ್ರಾ, ಕಾಂಗರೂ ಬ್ಯಾಟ್ಸ್‌ಮನ್‌ಗಳನ್ನು ಒಬ್ಬೋಬ್ಬರಾಗಿ ಪೆವಿಲಿಯನ್‌ಗಟ್ಟುತ್ತಿದ್ದಾರೆ. ಬುಮ್ರಾ ಪಂದ್ಯದ ಮೂರನೇ ಓವರ್‌ನ ಮೂರನೇ ಎಸೆತದಲ್ಲಿ ಮೊದಲ ಪಂದ್ಯವನ್ನಾಡುತ್ತಿರುವ ಮೆಕ್‌ಸ್ವೀನಿಯನ್ನು ಎಲ್‌ಬಿಡಬ್ಲ್ಯೂ ಬಲೆಗೆ ಬೀಳಿಸಿದರು. ಹೀಗಾಗಿ ಮೂರನೇ ಕ್ರಮಾಂಕದಲ್ಲಿ ಆಸ್ಟ್ರೇಲಿಯಾದ ಟೆಸ್ಟ್ ಸ್ಪೆಷಲಿಸ್ಟ್ ಮಾರ್ನಸ್ ಲಬುಶೇನ್ ಬ್ಯಾಟಿಂಗ್‌ಗೆ ಇಳಿದರು. ಈ ವೇಳೆ ಅದೇ ಓವರ್‌ನಲ್ಲಿ ಬುಮ್ರಾಗೆ ಎರಡನೇ ವಿಕೆಟ್ ಪಡೆಯುವ ಅವಕಾಶವಿತ್ತು. ಆದರೆ ಸ್ಲಿಪ್‌ನಲ್ಲಿ ನಿಂತಿದ್ದ ವಿರಾಟ್ ಕೊಹ್ಲಿ ಮಾಡಿದ ಎಡವಟ್ಟು, ವಿಕೆಟ್ ಸಿಗುವ ಅವಕಾಶವನ್ನು ಕಳೆದುಕೊಳ್ಳುವಂತೆ ಮಾಡಿತು. ಮೂರನೇ ಓವರ್‌ನ ಮೂರನೇ ಎಸೆತದಲ್ಲಿ ಮೆಕ್‌ಸ್ವೀನಿಯನ್ನು ಔಟ್ ಮಾಡಿದ ಬುಮ್ರಾ, ಅದೇ ಓವರ್‌ನ ಐದನೇ ಎಸೆತವನ್ನು ಗುಡ್ ಲೆಂಗ್ತ್‌ನಲ್ಲಿ ಆಫ್ ಸ್ಟಂಪ್ ಹೊರಗೆ ಬೌಲ್ ಮಾಡಿದರು. ಈ ಎಸೆತವನ್ನು ಡ್ರೈವ್ ಮಾಡಲು ಯತ್ನಿಸಿದ ಲಬುಶೇನ್, ಎರಡನೇ ಸ್ಲಿಪ್‌ನಲ್ಲಿ ನಿಂತಿದ್ದ ಕೊಹ್ಲಿಗೆ ಸುಲಭ ಕ್ಯಾಚ್ ನೀಡಿದರು. ಈ ವೇಳೆ ಕೊಹ್ಲಿ ಕೂಡ ಉತ್ತಮವಾಗಿ ಕ್ಯಾಚ್ ತೆಗೆದುಕೊಂಡರು. ಆದರೆ ಆ ಕ್ಯಾಚನ್ನು ಪೂರ್ಣಗೊಳಿಸಲು ಕೊಹ್ಲಿಗೆ ಸಾಧ್ಯವಾಗಲಿಲ್ಲ. ಕೊಹ್ಲಿಯ ಮೊಣಕಾಲು ನೆಲಕ್ಕೆ ತಾಗುತ್ತಿದ್ದಂತೆ ಇತ್ತ, ಕೊಹ್ಲಿಯ ಕೈಸೇರಿದ್ದ ಚೆಂಡು ಕೂಡ ಕೈಯಿಂದ ಜಾರಿ ಕೆಳಗೆ ಬಿದ್ದಿತು. ಅಷ್ಟರಲ್ಲಾಗಲೇ ತಂಡದ ಆಟಗಾರರೆಲ್ಲರೂ ಸಂಭ್ರಮಿಸಲು ಶುರು ಮಾಡಿದ್ದರು. ಆದರೆ ಕೊಹ್ಲಿಯೇ, ಈ ಕ್ಯಾಚ್ ಕಂಪ್ಲಿಟ್ ಆಗಿಲ್ಲ ಎಂಬ ಸನ್ನೆಯನ್ನು ನೀಡುವ ಮೂಲಕ ಆಟಗಾರರಲ್ಲಿ ನಿರಾಸೆ ಮೂಡಿಸಿದರು.



**ಸುಲಭ ಕ್ಯಾಚ್ ಕೈಚೆಲ್ಲಿದ ಕೊಹ್ಲಿ**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966